ಸಂಪುಟ: 21, ಸಂಚಿಕೆ: 98, ಪುಟಗಳು: 8, ಗುರುವಾರ, 18 ಜನವರಿ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಗುರುವಾರ 18, ಜನವರಿ -2024)

- ಶೋಭಕೃತ್ ನಾಮ ಸಂವತ್ಸರ,
- ಉತ್ತರಾಯಣ, ಹಿಮಂತ ಋತು,
- ಪುಷ್ಯ ಮಾಸ, ಶುಕ್ಲ ಪಕ್ಷ,
- ತಿಥಿ: ಅಷ್ಟಮಿ
- ನಕ್ಷತ್ರ: ರೇವತಿ,
- ರಾಹುಕಾಲ- 01:57 PM 03:28 PM
- ಗುಳಿಕಕಾಲ - 09:24 AM 10:55 AM
- ಯಮಗಂಡಕಾಲ - 06:22 AM 07:53 AM



# ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of
Newspapers | Tabloids | Magazines



# ಪರ್ಯಾಯ ಪುತ್ತಿಗೆ ಶ್ರೀ ಸಾರ್ವಜನಿಕ ದರ್ಬಾರ್‌ನಲ್ಲಿ ಗಣ್ಯರು

**ಉಡುಪಿ:** ಉಡುಪಿಯ ಶ್ರೀಕೃಷ್ಣ ಮಠದಲ್ಲಿ ಪರ್ಯಾಯ ಪುತ್ತಿಗೆ ಶ್ರೀಗಳಿಂದ ಗುರುವಾರ ರಾಜಾಂಗಣದಲ್ಲಿ ಸಾರ್ವಜನಿಕ ದರ್ಬಾರ್ ನೆರವೇರಿತು. ವಿಧಾನಸಭೆಯ ಸ್ಪೀಕರ್ ಯುಟಿ ಖಾದರ್, ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಧರ್ಮಸ್ಥಳದ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆ ಸೇರಿದಂತೆ ಅನೇಕ ಗಣ್ಯರು ಸಾರ್ವಜನಿಕ ದರ್ಬಾರ್‌ಗೆ ಹಾಜರಾದರು.

ಸಂಪ್ರದಾಯದಂತೆ ಮೊದಲು ಪುತ್ತಿಗೆ ಸುಗುಣೇಂದ್ರ ತೀರ್ಥ ಶ್ರೀಪಾದರು ಕೃಷ್ಣ ಮಠದಲ್ಲಿ ಖಾಸಗಿ ದರ್ಬಾರ್ ನಡೆಸಿದರು. ನಂತರ ಸಾರ್ವಜನಿಕ ದರ್ಬಾರ್ ನಲ್ಲಿ ಪುತ್ತಿಗೆ ಸುಗುಣೇಂದ್ರ ತೀರ್ಥ ಶ್ರೀಪಾದರು ಭಾಗಿಯಾದರು. ಪುತ್ತಿಗೆ ಸುಗುಣೇಂದ್ರ ತೀರ್ಥ ಶ್ರೀಪಾದರ ಸಾರ್ವಜನಿಕ ಪರ್ಯಾಯ ದರ್ಬಾರ್ ನಲ್ಲಿ ಅನೇಕ ರಾಜಕೀಯ ಮುಖಂಡರೂ ಭಾಗವಹಿಸಿದರು. ಇದಕ್ಕೂ ಮುನ್ನ ನಡೆದ ಮೆರವಣಿಗೆಯಲ್ಲಿ ಅಯೋಧ್ಯೆಯ ರಾಮಮಂದಿರ ನಿರ್ಮಾಣವನ್ನು ಸಂಕೇತಿಸುವ ಟ್ಯಾಬ್ಲೋ ಸೇರಿದಂತೆ ಹತ್ತಾರು ಟ್ಯಾಬ್ಲೋಗಳು ಗಮನ ಸೆಳೆದವು.

ಪುಟ 2











## ಸಂಕ್ಷಿಪ್ತ ಸುದ್ದಿ

### ಹೋಟೆಲ್‌ನಲ್ಲಿ ಹಣ ನೀಡದೆ 15 ದಿನಗಳ ಕಾಲ ಉಳಿದಿದ್ದ ಆಂಧ್ರ ಮಹಿಳೆಯ ಬಂಧನ

**ದೆಹಲಿ:** ದೆಹಲಿಯ ಐಷಾರಾಮಿ ಹೋಟೆಲ್ ನಲ್ಲಿ ಹಣ ನೀಡದೆ 15 ದಿನಗಳ ಕಾಲ ತಂಗಿದ್ದ ಆಂಧ್ರದ ಮಹಿಳೆಯನ್ನು ಪೊಲೀಸರು ಬಂಧಿಸಿದ್ದಾರೆ. ವಿಮಾನ ನಿಲ್ದಾಣದ ಬಳಿ ಇರುವ ಏರೋಸಿಟಿಯ ಐಷಾರಾಮಿ ಹೋಟೆಲ್‌ನಲ್ಲಿ 15 ದಿನಗಳ ಕಾಲ ಯಾವುದೇ ಹಣವನ್ನು ಪಾವತಿಸದೆ ತಂಗಿದ್ದ ಆರೋಪದ ಮೇಲೆ 37 ವರ್ಷದ ಮಹಿಳೆಯನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪುಟ 2

### ಹಳೇ 2 ರೂ ನಾಣ್ಯ ಕೊಟ್ಟರೆ 31 ಲಕ್ಷ ರೂ ಕೊಡುವುದಾಗಿ ವೃದ್ಧನಿಗೆ ಟೋಪಿ ಹಾಕಿದ ವಂಚಕ



**ಬೆಂಗಳೂರು:** ನಿಮ್ಮ ಬಳಿ ಹಳೆಯ 2 ರೂ ನಾಣ್ಯಗಳು ಅಥವಾ 5 ರೂ. ನಾಣ್ಯಗಳಿದ್ದರೆ, ಅದಕ್ಕೆ ಬದಲಾಗಿ ಲಕ್ಷ ಲಕ್ಷ ರೂಪಾಯಿಗಳನ್ನು ನೀಡುವದಾಗಿ ಆಮಿಷವೊಡ್ಡಿ ಸೈಬರ್ ಅಪರಾಧಿಗಳು ನಕಲಿ ವೀಡಿಯೊ ಸೃಷ್ಟಿಸಿದ್ದಾರೆ. ಆ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿತ್ತು. ವೀಡಿಯೋ ವೀಕ್ಷಿಸಿದ ವೃದ್ಧರೊಬ್ಬರು ದುರಾಸೆಗೆ ಬಲಿಯಾಗಿ ತನ್ನ ಬಳಿಯಿದ್ದದ್ದನ್ನೆಲ್ಲ ಕಳೆದುಕೊಂಡಿದ್ದಾರೆ. ಕೊನೆಗೆ ಸೈಬರ್ ಅಪರಾಧಿಗಳಿಂದ ವಂಚನೆಗೊಳಗಾಗಿ ಪೊಲೀಸರಿಗೆ ದೂರು

ಪುಟ 2

### ಸಿಎಂ ವಿರುದ್ಧ ಅನಂತ್ ಕುಮಾರ್ ಹೆಗಡೆ ವಾಗ್ದಾಳಿ



**ಬೆಳಗಾವಿ:** ನಾವು ಹಿಂದೂಗಳು ಎಂದು ಮರೆತು ಹೋಗಿತ್ತು. ಈಗಲೂ ಸಾಕಷ್ಟು ಜನ ತಕ್ಷಣ ಕೇಳಿದ್ರೇ ಅವರ ಜಾತಿ ಹೆಸರು ಹೇಳ್ತಾರೆ. ಹಿಂದೂ ಅಂತಾ ನೆನಪು ಮಾಡಿಕೊಂಡು ಹೇಳ್ತಾರೆ. ಸಂಸ್ಕಾರ ಇದ್ರೇ ಹಿಂದೂ ಅಂತಾ ಹೇಳ್ತಾರೆ.

ಪುಟ 2

## ರಾಮ ಮಂದಿರ ಉದ್ಘಾಟನೆ; ಮಂಡ್ಯ ಶಿಲ್ಪಿ ಅರುಣ್ ಯೋಗಿರಾಜ್

# ವಿಗ್ರಹವೇ ಪ್ರತಿಷ್ಠಾಪನೆ

**ಮಂಡ್ಯ:** ಅಯೋಧ್ಯೆಯಲ್ಲಿ ನಿರ್ಮಾಣ ಹಂತದಲ್ಲಿರುವ ಶ್ರೀರಾಮ ಮಂದಿರದಲ್ಲಿ ಜನವರಿ 22 ರಂದು ರಾಮಲಲ್ಲಾನ ಪ್ರಾಣ ಪ್ರತಿಷ್ಠಾಪನೆ ನಡೆಯಲಿದೆ. ಈ ದಿನದಂದೇ ಮಂಡ್ಯ ಜಿಲ್ಲೆಯಲ್ಲಿ ರಾಮ ಮಂದಿರದ ಲೋಕಾರ್ಪಣೆಯಾಗಲಿದೆ. ವಿಶೇಷ ಏನೆಂದರೆ, ಅಯೋಧ್ಯೆಯಲ್ಲಿ ಪ್ರತಿಷ್ಠಾಪನೆಯಾಗುತ್ತಿರುವ ರಾಮನ ವಿಗ್ರಹ ಹಾಗೂ ಮಂಡ್ಯದಲ್ಲಿ ಪ್ರತಿಷ್ಠಾಪನೆಯಾಗುತ್ತಿರುವ ರಾಮನ ವಿಗ್ರಹವನ್ನು ಕೆತ್ತನೆ ಮಾಡಿದ ಶಿಲ್ಪಿ ಮೈಸೂರಿನ ಅರುಣ್ ಯೋಗಿರಾಜ್.

ಮಂಡ್ಯದ ಲೇಬರ್ ಕಾಲೋನಿಯಲ್ಲಿ ರಾಮ ಮಂದಿರವನ್ನು ಜೀರ್ಣೋದ್ಧಾರ ಮಾಡಲಾಗಿದೆ. ಈ ಮಂದಿರದಲ್ಲಿ ಮೈಸೂರಿನ ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್ ಅವರೇ ಕೆತ್ತನೆ ಮಾಡಿದ್ದು, ಈ ವಿಗ್ರಹದ ಪ್ರತಿಷ್ಠಾಪನೆಗೆ ಸಕಲ ಸಿದ್ಧತೆಗಳನ್ನು ನಡೆಸಲಾಗುತ್ತಿದೆ.

ರಾಮನ ಮೂರ್ತಿ ಜೊತೆ ಸೀತೆ, ಲಕ್ಷ್ಮಣ ಹಾಗೂ ಹನುಮಂತನ ವಿಗ್ರಹಗಳ ಕೆತ್ತನೆ ಮಾಡಲಾಗಿದ್ದು, ಒಂದು ವರ್ಷದ ಹಿಂದೆಯೇ ಈ ಮೂರ್ತಿಗಳನ್ನ ಕೆತ್ತನೆ ಮಾಡಿದ್ದರು. ಅಯೋಧ್ಯೆಯ ರಾಮಮಂದಿರ ಉದ್ಘಾಟನೆಯಂದೇ ಮಂಡ್ಯದಲ್ಲಿಯೂ ರಾಮನ ಪ್ರತಿಷ್ಠಾಪನೆ ಮಾಡಬೇಕು ಎಂದು ದೇವಾಲಯದ ಟ್ರಸ್ಟ್ ತೀರ್ಮಾನಿಸಿತ್ತು.

ಪುಟ 2





### ಜನವರಿ 22 ರಂದು ಈ ರಾಜ್ಯಗಳಲ್ಲಿ ರಜೆ ಘೋಷಣೆ

**ಅಯೋಧ್ಯೆ:** ಅಯೋಧ್ಯೆಯಲ್ಲಿ ನಿರ್ಮಾಣವಾಗಿರುವ ಭವ್ಯ ರಾಮ ಮಂದಿರದ ಪ್ರಾಣ ಪ್ರತಿಷ್ಠೆ ಜನವರಿ 22 ರಂದು ನಡೆಯಲಿದ್ದು, ಹಲವು ರಾಜ್ಯಗಳು ರಜೆ ಘೋಷಣೆ ಮಾಡಿವೆ.



ಜನವರಿ 22 ರಂದು ರಾಮ ಲಲ್ಲಾ ಪ್ರಾಣ ಪ್ರತಿಷ್ಠೆಯ ಪ್ರಾಥಮಿಕ ಧಾರ್ಮಿಕ ವಿಧಿಗಳನ್ನು ಲಕ್ಷ್ಮೀಕಾಂತ್ ದೀಕ್ಷಿತ್ ನೇತೃತ್ವದ ಪುರೋಹಿತರ ತಂಡವು ನಡೆಸುತ್ತದೆ. ಅತಿಥಿಗಳಿಗೆ ಸ್ಮರಣಿಕೆಯಾಗಿ ದೇವಾಲಯದಿಂದ ಮಣ್ಣನ್ನು ನೀಡಲಾಗುತ್ತದೆ.

ಪುಟ 2

## ಮಣಿಪುರದಲ್ಲಿ ಮುಂದುವರೆದ ಹಿಂಸಾಚಾರ

# ಬಿಎಸ್‌ಎಫ್ ಯೋಧರಿಗೆ ಗಾಯ

**ಮಣಿಪುರ:** ಮಣಿಪುರದಲ್ಲಿ ಹಿಂಸಾಚಾರ ಮುಂದುವರೆದಿದ್ದು, ಘಟನೆಯಲ್ಲಿ ಮೂವರು ಬಿಎಸ್ ಎಫ್ ಯೋಧರಿಗೆ ಗಾಯಗಳಾಗಿವೆ. ಹೊಸ ಹಿಂಸಾಚಾರದ ವರದಿಗಳ ನಡುವೆ ಮೊರೆಹ್ ಪ್ರದೇಶದಲ್ಲಿ ಇಬ್ಬರು ಮಣಿಪುರ ಪೊಲೀಸ್ ಕಮಾಂಡೋಗಳು ಸಾವನ್ನಪ್ಪಿದ್ದಾರೆ ಮತ್ತು ಆರು ಮಂದಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ಗುರುವಾರ ಮಾಹಿತಿ ನೀಡಿದ್ದಾರೆ.

ಶಸ್ತ್ರಸಜ್ಜಿತ ಉಗ್ರಗಾಮಿಗಳು ರಾಜ್ಯ ಪೊಲೀಸ್ ತಂಡದ ಮೇಲೆ ದಾಳಿ ನಡೆಸಿದ್ದಾರೆ, ಇಬ್ಬರು ಕಮಾಂಡೋಗಳನ್ನು ಸೊಮೊರ್ಜಿತ್ ಮೀಟೆಯ್ ಮತ್ತು ತಖೆಲ್ಲಂಬಮ್ ಸೀಲೇಶ್ವರ್ ಸಿಂಗ್ ಎಂದು ಗುರುತಿಸಲಾಗಿದೆ. ತೆಂಗ್ನೌಪಾಲ್ ಜಿಲ್ಲೆಯ ಮೊರೆಹ್‌ನಲ್ಲಿ ಬಂದೂಕುಗಳು ಮತ್ತು ಸ್ಫೋಟಕಗಳನ್ನು ಬಳಸಿದ್ದಾರೆ.

ಮೊಹಮ್ಮದ್ ಕಮಲ್ ಹಾಸನ್, ಸಾಂಗ್ಸುವಾತುಯಿ ಐಮೋಲ್, ಮೊಹಮ್ಮದ್ ಅಬ್ದುಲ್ ಹಾಸಿಂ, ನಾಗಸೇಪಂ ವಿಮ್, ಎಎಸ್‌ಐ ಸಿದ್ದಾರ್ಥ್ ತೊಕ್ಚೋಮ್, ಕೆ ಪ್ರೇಮಾನಂದ್ ಗಾಯಗೊಂಡಿದ್ದಾರೆ ಎಂದು ಮಣಿಪುರ ಪೊಲೀಸರು ಮಾಹಿತಿ ನೀಡಿದ್ದಾರೆ.

ಪುಟ 2



# ಅಮಿತ್ ಶಾ, ಜೆಪಿ ನಡ್ಡಾ ಭೇಟಿಯಾದ ಕುಮಾರಸ್ವಾಮಿ

**ಬೆಂಗಳೂರು:** ಜೆಡಿಎಸ್ ನಾಯಕ ಹೆಚ್‌ಡಿ ಕುಮಾರಸ್ವಾಮಿ ಬುಧವಾರ ರಾತ್ರಿ ದೆಹಲಿಯಲ್ಲಿ ಗೃಹ ಸಚಿವ ಅಮಿತ್ ಶಾ ಮತ್ತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಅವರನ್ನು ಭೇಟಿ ಮಾಡಿ ರಾಜ್ಯಕ್ಕೆ ಸಂಬಂಧಿಸಿದ ವಿವಿಧ ವಿಷಯಗಳ ಬಗ್ಗೆ ಚರ್ಚಿಸಿದರು. ಜನವರಿ 22 ರಂದು ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆ ನಂತರ ಸೀಟು ಹಂಚಿಕೆ ಚರ್ಚೆ ನಡೆಯಲಿದೆ ಎಂದು ಸಭೆಯ ನಂತರ ಕುಮಾರಸ್ವಾಮಿ ಹೇಳಿದರು.

ಕುಮಾರಸ್ವಾಮಿ ಅವರು ಜೆಡಿಎಸ್ ನಾಯಕ ನಿಖಿಲ್ ಕುಮಾರಸ್ವಾಮಿ ಮತ್ತು ರಾಜ್ಯಸಭಾ ಮಾಜಿ ಸಂಸದ ಕುಪೇಂದ್ರ ರೆಡ್ಡಿ ಅವರೊಂದಿಗೆ ಅಮಿತ್ ಶಾ ಮನೆಯಲ್ಲಿ ಬಿಜೆಪಿ ಕೇಂದ್ರ ನಾಯಕರನ್ನು ಭೇಟಿ ಮಾಡಿದರು.

ಬಿಜೆಪಿ-ಜೆಡಿಎಸ್ ನಾಯಕರು ಸುಮಾರು 45



ನಿಮಿಷಗಳ ಕಾಲ ಪ್ರಸ್ತುತ ರಾಜಕೀಯ ಪರಿಸ್ಥಿತಿ ಸೇರಿದಂತೆ ರಾಜ್ಯಕ್ಕೆ ಸಂಬಂಧಿಸಿದ ವಿವಿಧ ವಿಷಯಗಳ ಬಗ್ಗೆ ಚರ್ಚಿಸಿದರು.

ಪುಟ 2

## ಶಿಥಿಲಗೊಂಡ ಸರ್ಕಾರಿ ಶಾಲೆ ಕಟ್ಟಡ

# ಮರದ ಕೆಳಗೆ ಮಕ್ಕಳಿಗೆ ಪಾಠ!

**ಬಳ್ಳಾರಿ:** ಕರ್ನಾಟಕದಲ್ಲಿ ಅನೇಕ ಸರ್ಕಾರಿ ಶಾಲೆಗಳ ಅಭಿವೃದ್ಧಿ ಕಾರಣದೆ ಹಲವು ವರ್ಷಗಳೇ ಆಗಿವೆ. ಕೆಲವೊಂದು ಶಾಲೆಗಳ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿದ್ದು, ಶಿಕ್ಷಕರು, ಮಕ್ಕಳು ಆತಂಕದಲ್ಲೇ ಕಾಲ ಕಳೆಯುತ್ತಿದ್ದಾರೆ. ಅದೇ ರೀತಿ, ಬಳ್ಳಾರಿ ಜಿಲ್ಲೆಯ ಕುರುಗೋಡು ತಾಲೂಕಿನ ಗುತ್ತಿಗನೂರು ಗ್ರಾಮದ ಸರ್ಕಾರಿ ಶಾಲೆಯಲ್ಲಿ ಕೊಠಡಿಗಳು ಶಿಥಿಲಗೊಂಡಿದೆ, ಮಕ್ಕಳಿಗೆ ಮರದಡಿ ಪಾಠ ಮಾಡಲಾಗುತ್ತಿದೆ.

ಬಳ್ಳಾರಿ ಜಿಲ್ಲೆಯ ಕುರುಗೋಡು ತಾಲೂಕಿನ ಗುತ್ತಿಗನೂರು ಗ್ರಾಮದ ಸರ್ಕಾರಿ ಶಾಲೆಯಲ್ಲಿ ಕೊಠಡಿಗಳು ಶಿಥಿಲಗೊಂಡಿದೆ.

1 ರಿಂದ 8 ನೇ ತರಗತಿ ಒಟ್ಟು 300 ಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಾಂಗ ಮಾಡುತ್ತಿರುವ ಈ ಶಾಲೆಯಲ್ಲಿ ಬಡವರ ಮಕ್ಕಳು, ರೈತರ ಮಕ್ಕಳೇ ಹೆಚ್ಚಿದ್ದಾರೆ.

ಪುಟ 2




# ಹೋಟೆಲ್‌ಗೆ ಬಂದ ಯುವತಿಗೆ ಅಸಭ್ಯ ವರ್ತನೆ

**ಬೆಂಗಳೂರು:** ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಹೆಣ್ಮಕ್ಕಳಿಗೆ ಸುರಕ್ಷತೆಯೇ ಇಲ್ಲದಂತಾಗಿದೆ. ಬಿಎಂಟಿಸಿ ಬಸ್, ಮೆಟ್ರೋ, ಮಾಲ್ ಗಳಲ್ಲಿ ಹೆಣ್ಮಕ್ಕಳ ಜೊತೆ ಅಸಭ್ಯವಾಗಿ ವರ್ತಿಸುವ ಕಾಮುಕರಿಗೆ ಕಡಿವಾಣ ಹಾಕುವವರಿಲ್ಲದಂತಾಗಿದೆ. ಇದೇ ರೀತಿಯ ಮತ್ತೊಂದು ಘಟನೆ ವಿಜಯನಗರದಲ್ಲಿ ನಡೆದಿದ್ದು ಕಾಮುಕರ ಕೃತ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ವಿಜಯನಗರದ ನಮ್ಮೂಟ ಹೋಟೆಲ್ ಬಳಿ ಹೆಣ್ಮಕ್ಕಳ್ನ ಟಚ್ ಮಾಡಿ ವಿಕೃತ ಸುಖ ಪಡುತ್ತಿದ್ದ ಕಾಮುಕರ ಕೃತ್ಯ ಸೆರೆಯಾಗಿದೆ. ಘಟನೆ ಸಂಬಂಧ ವಿಜಯನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಮೂವರು ಕಾಮುಕರು ಹೋಟೆಲ್ ಗೆ ಬರುವ ಯುವತಿಯರು, ಮಹಿಳೆಯರನ್ನು ಟಾರ್ಗೆಟ್ ಮಾಡಿ ಬೇಕು ಬೇಕು ಅಂತಲೇ ಟಚ್ ಮಾಡಿ ವಿಕೃತಿ ಮೆರೆಯುತ್ತಿದ್ದದ್ದು ಪತ್ತೆಯಾಗಿದೆ. ಬೇಕು



ಬೇಕಂತಲೇ ಯುವತಿಯನ್ನು ಟಚ್ ಮಾಡಿ ವಿಕೃತಿ ಮೆರೆದ ಕಾಮುಕನ ಕೃತ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಯುವತಿಯನ್ನ ಟಚ್ ಮಾಡೋ ಮೊದಲು ಮೂವರು ಕಾಮುಕರು ಪ್ಲಾನ್ ಮಾಡಿಕೊಂಡಿದ್ದು ಒಬ್ಬ ಟಚ್ ಮಾಡೋ ಉದ್ದೇಶದಿಂದ ಹೋದ್ರೆ, ಮತ್ತಿಬ್ಬರು ವಾಚ್ ಮಾಡ್ತಾರೆ.

ಪುಟ 2

### ಶೀಘ್ರದಲ್ಲೇ ಸಿಎಂ ಕೈ ಸೇರಲಿದೆ ಪಿಎಸ್‌ಐ ನೇಮಕಾತಿ ಅಕ್ರಮದ ವರದಿ

**ಬೆಂಗಳೂರು:** ರಾಜ್ಯದಲ್ಲಿ ನಡೆದ 545 ಪಿಎಸ್‌ಐ ನೇಮಕಾತಿ ಲಿಖಿತ ಪರೀಕ್ಷೆಯಲ್ಲಿ ಅಕ್ರಮ ಎಸಗಿದ ಪ್ರಕರಣ ಸಂಬಂಧ ತನಿಖೆಗೆ ಸರ್ಕಾರವು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಬಿ.ವೀರಪ್ಪ ನೇತೃತ್ವದಲ್ಲಿ ಸಮಿತಿ ರಚಿಸಿತ್ತು. ಅದರಂತೆ ತನಿಖೆ ನಡೆಸುತ್ತಿರುವ ಸಮೀತಿಯು ಶೀಘ್ರದಲ್ಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ತನಿಖಾ ವರದಿ ಸಲ್ಲಿಸಲಿದೆ.

ಬಿಜೆಪಿ ಸರ್ಕಾರದ ಅವಧಿಯಲ್ಲಿ 545 ಪಿಎಸ್‌ಐ ನೇಮಕಾತಿ ಲಿಖಿತ ಪರೀಕ್ಷೆಯಲ್ಲಿ ಅಕ್ರಮ ಎಸಗಲಾಗಿತ್ತು. ಮರು ತನಿಖೆ ನಡೆಸುವ ನಿಟ್ಟಿನಲ್ಲಿ ಕಾಂಗ್ರೆಸ್ ಸರ್ಕಾರವು ಪ್ರಕರಣದ ಮರು ತನಿಖೆಗಾಗಿ

ಪುಟ 2

## ನಾನೇ ಲಕ್ಷ್ಮಣ, ಅಯೋಧ್ಯೆಗೆ ಈಗ ಹೋಗೆಲ್ಲ: ಲಕ್ಷ್ಮಣ ಸವದಿ

**ಕಲಬುರಗಿ:** 'ಅಯೋಧ್ಯೆಯ ರಾಮಮಂದಿರ ಉದ್ಘಾಟನೆ ಕಾರ್ಯಕ್ರಮಕ್ಕೆ ನಾನು ಹೋಗುವುದಿಲ್ಲ. ಮುಂದೆ ಯಾವಾಗಲಾದರೂ ಹೋಗುವೆ. ನಾನೇ ಲಕ್ಷ್ಮಣ ಇದ್ದೇನೆ' ಎಂದು ಕಾಂಗ್ರೆಸ್ ಶಾಸಕ ಲಕ್ಷ್ಮಣ ಸವದಿ ಹೇಳಿದರು. ಕಲಬುರಗಿ ಏರ್‌ಪೋರ್ಟ್‌ನಲ್ಲಿ ಮಾತನಾಡಿದ ಅವರು, ಅಯೋಧ್ಯೆ ರಾಮ ಮಂದಿರ ಉದ್ಘಾಟನೆ, ಸಿಎಂ ಸಿದ್ದರಾಮಯ್ಯ, ಲೋಕಸಭೆ ಚುನಾವಣೆ, ಸಿಎಂ ವಿರುದ್ಧ ಬಿಜೆಪಿ ಸಂಸದ ಅನಂತಕುಮಾರ್ ಹೆಗಡೆ ಹೇಳಿಕೆ ಮತ್ತಿತರ ವಿಚಾರಗಳ ಬಗ್ಗೆ ಪ್ರತಿಕ್ರಿಯಿಸಿದರು.

ಲೋಕಸಭೆ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಗೆದ್ದರೆ 5 ವರ್ಷ ಸಿದ್ದರಾಮಯ್ಯ ಅವರೇ ಸಿಎಂ ಎಂಬ ಯತೀಂದ್ರ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯಿಸಿದ ಸವದಿ, ಅದು ಅವರ ವೈಯಕ್ತಿಕ ಅಭಿಪ್ರಾಯ ಎಂದರು. ಕಾಂಗ್ರೆಸ್ ಹೈಕಮಾಂಡ್ ಮನಸ್ಸು ಮಾಡಿದರೆ 5 ವರ್ಷವೂ ಅವರೇ ಸಿಎಂ ಆಗಬಹುದು. ಸಿಎಂ ಸ್ಥಾನದ ಬಗ್ಗೆ ಹೈಕಮಾಂಡ್ ತೀರ್ಮಾನ ತೆಗೆದುಕೊಳ್ಳಲಿದೆ. ಅದು ಐದು ವರ್ಷವೋ ಎರಡು ವರ್ಷವೋ ಎಂಬುದನ್ನೂ ಹೈಕಮಾಂಡೇ ನಿರ್ಧರಿಸಲಿದೆ ಎಂದು ಸವದಿ ಹೇಳಿದರು.

**ಅನಂತಕುಮಾರ್ ಹೆಗಡೆ ಹೇಳಿಕೆಗೆ ಆಕ್ಷೇಪ:** ಸಿಎಂ ಸಿದ್ದರಾಮಯ್ಯ ವಿರುದ್ಧ ಬಿಜೆಪಿ ಸಂಸದ ಅನಂತಕುಮಾರ್ ಹೆಗಡೆ ಏಕವಚನದಲ್ಲಿ ವಾಗ್ದಾಳಿ ನಡೆಸಿದ ವಿಚಾರವಾಗಿ ಪ್ರತಿಕ್ರಿಯಿಸಿದ ಸವದಿ, ಈ ರೀತಿಯ ಹೇಳಿಕೆಗಳಿಂದಲೇ ಅವರ ಬೆಲೆ ಕಡಿಮೆಯಾಗುತ್ತದೆ. ಅನಂತಕುಮಾರ್ ಹೆಗಡೆ 5 ವರ್ಷ ನಾಪತ್ತೆಯಾಗಿದ್ದರು. ಕ್ಷೇತ್ರದ ಜನರನ್ನೂ ಸಂಸದ ಅನಂತಕುಮಾರ್ ಹೆಗಡೆ ಭೇಟಿಯಾಗಿಲ್ಲ. ಈಗ ಲೋಕಸಭೆ ಟಿಕೆಟ್ ಪಡೆಯಲು ಅವರು ವಿವಾದಾತ್ಮಕ ಹೇಳಿಕೆ ನೀಡುತ್ತಿದ್ದಾರೆ ಎಂದು ಸವದಿ ಹೇಳಿದ್ದಾರೆ.

## ಶ್ರೀರಾಮನ ಕಟೌಟ್‌ಗೆ ಬ್ಲೇಡ್‌ನಿಂದ ಹಾನಿ

**ಕೋಲಾರ:** ಜನವರಿ 22ರಂದು ಅಯೋಧ್ಯೆಯಲ್ಲಿ ರಾಮಲಲ್ಲಾ ಪ್ರಾಣಪ್ರತಿಷ್ಠೆ ಹಿನ್ನೆಲೆಯಲ್ಲಿ ಹಲವೆಡೆ ಹಾಕಲಾಗಿದ್ದ ಶ್ರೀರಾಮನ ಕಟೌಟ್ ಹಾಗೂ ಫ್ಲೆಕ್ಸ್‌ಗಳಿಗೆ ಬ್ಲೇಡ್‌ನಿಂದ ಹಾನಿಗೊಳಿಸಿರುವ ಘಟನೆ ಕೋಲಾರ ಜಿಲ್ಲೆಯ ಮುಳಬಾಗಿಲು ನಗರದಲ್ಲಿ ನಡೆದಿದೆ. ಮಂಗಳವಾರ ತಡರಾತ್ರಿ 10.44ರ ಸುಮಾರಿಗೆ ಬ್ಲೇಡ್ ಹಾಕಿರುವ ಘಟನೆ ನಡೆದಿದೆ ಎಂದು ಹೇಳಲಾಗಿದೆ. ಅಯೋಧ್ಯೆಯಲ್ಲಿ ರಾಮಲಲ್ಲಾ ಪ್ರಾಣಪ್ರತಿಷ್ಠೆ ಹಿನ್ನೆಲೆಯಲ್ಲಿ ಸಂಕ್ರಾಂತಿ ಹಬ್ಬದ ದಿನದಂದು ಕಟೌಟ್‌ಗಳನ್ನ ಅಳವಡಿಸಲಾಗಿತ್ತು. ಆದ್ರೆ ಕಿಡಿಗೇಡಿಗಳು ಶ್ರೀರಾಮನ ಕಟೌಟ್ ಹಾಗೂ ಫ್ಲೆಕ್ಸ್‌ಗಳಿಗೆ ಬ್ಲೇಡ್ ಹಾಕಿ ಹಾನಿಗೊಳಿಸಿದ್ದಾರೆ. ಶ್ರೀರಾಮನ ಕಟೌಟ್ ಹಾನಿಗೊಂಡಿರುವ ಸ್ಥಳದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದೆ. ಸ್ಥಳಕ್ಕೆ ಮುಳಬಾಗಿಲು ನಗರ ಪೊಲೀಸರ ಭೇಟಿ ಪರಿಶೀಲನೆ ನಡೆಸಿದ್ದಾರೆ. ಸಿಸಿಟಿವಿ ದೃಶ್ಯಾವಳಿಗಳನ್ನ ಪರಿಶೀಲಿಸುತ್ತಿದ್ದಾರೆ. ಸ್ಥಳೀಯ ಯುವಕರು ಕಿಡಿಗೇಡಿಗಳ ವಿರುದ್ಧ ಕ್ರಮಕ್ಕೆ ಒತ್ತಾಯಿಸಿದ್ದಾರೆ. ಇದೇ ಜ.22ರಂದು ಉತ್ತರ ಪ್ರದೇಶದ ಅಯೋಧ್ಯೆ ರಾಮಮಂದಿರದಲ್ಲಿ ರಾಮಲಲ್ಲಾ ಪ್ರಾಣಪ್ರತಿಷ್ಠಾಪನೆ ನೆರವೇರಲಿದೆ.



# ಸಿಎಂ ಮುಂದುವರಿಸುವುದು ಬಿಡುವುದು ಹೈಕಮಾಂಡ್ ನಿರ್ಧಾರ

**ಬೆಂಗಳೂರು:** 'ಲೋಕಸಭಾ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಗೆದ್ದರೆ ಸಿದ್ದರಾಮಯ್ಯ 5 ವರ್ಷ ಸಿಎಂ'ಆಗಿರುತ್ತಾರೆ ಎಂದು ಹಾಸನದಲ್ಲಿ ಸಿಎಂ ಸಿದ್ದರಾಮಯ್ಯ ಪುತ್ರ ಡಾ.ಯತೀಂದ್ರ ಹೊಸ ಬಾಂಬ್ ಸಿಡಿಸಿದ್ದಾರೆ. ಸದ್ಯ ಈ ಹೇಳಿಕೆ ರಾಜಕೀಯ ವಲಯದಲ್ಲಿ ಭಾರಿ ಚರ್ಚೆಯಾಗುತ್ತಿದೆ. ಕಾಂಗ್ರೆಸ್‌ನ ಅನೇಕ ನಾಯಕರು ಈ ಬಗ್ಗೆ ಪ್ರತಿಕ್ರಿಯೆಗಳನ್ನು ನೀಡುತ್ತಿದ್ದಾರೆ. ಇದೀಗ ಮಾಜಿ ಶಾಸಕ ಯತೀಂದ್ರ ಹೇಳಿಕೆಗೆ ಸಚಿವ ಡಾ.ಪರಮೇಶ್ವರ್ ಪ್ರತಿಕ್ರಿಯೆ ನೀಡಿದ್ದು ಸಿಎಂ ಮುಂದುವರಿಸುವುದು ಬಿಡುವುದು ನಮ್ಮ ಹೈಕಮಾಂಡ್ ನಿರ್ಧಾರ ಮಾಡ್ತಾರೆ. ಸಿಎಂ ಬಗ್ಗೆ ನಿರ್ಧಾರ ಮಾಡುವುದು ನಾವಲ್ಲ. ಲೋಕಸಭೆ ಚುನಾವಣೆಯಲ್ಲಿ ಕೇವಲ ಸಿಎಂ ಸಿದ್ದರಾಮಯ್ಯ ಮಾತ್ರವಲ್ಲ, ಕೆಪಿಸಿಸಿ ಅಧ್ಯಕ್ಷರು ಸೇರಿದಂತೆ ನಾವೆಲ್ಲರೂ ಒಟ್ಟಾಗಿ ಕೆಲಸ ಮಾಡುತ್ತೇವೆ. ಲೋಕಸಭೆ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಗೆಲ್ಲಲು ಸಂಕಲ್ಪ ಮಾಡಿದ್ದೇವೆ ಎಂದು ಬೆಂಗಳೂರಿನಲ್ಲಿ ಗೃಹ ಇಲಾಖೆ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.



ಲೋಕಸಭೆಯಲ್ಲಿ ಕೇವಲ ಸಿದ್ದರಾಮಯ್ಯ ಮಾತ್ರವಲ್ಲ, ಕೆಪಿಸಿಸಿ ಅಧ್ಯಕ್ಷರು ಸೇರಿ ನಾವೆಲ್ಲ ಒಟ್ಟಾಗಿ ಕೆಲಸ ಮಾಡ್ತೇವೆ. ನಾವು ಗ್ಯಾರಂಟಿಗಳನ್ನೆಲ್ಲ ಅನುಷ್ಠಾನ ಮಾಡಿದ್ದೇವೆ. ನಾವು ಹೆಚ್ಚು ಸ್ಥಾನ ಗೆಲ್ಲಬೇಕು ಅಂತ ಸಂಕಲ್ಪ ಮಾಡಿದ್ದೇವೆ. ಸಿಎಂ ಮುಂದುವರಿಸುವುದು ಬಿಡುವುದು ಹೈಕಮಾಂಡ್ ನಿರ್ಧಾರ. ಅದನ್ನು ನಿರ್ಧಾರ ಮಾಡುವುದು ನಾವಲ್ಲ. ಲೋಕ ಸಭೆಗೆ 28 ಸಚಿವರನ್ನು ಕರೆಸಿಕೊಂಡು ಜವಾಬ್ದಾರಿ ಕೊಟ್ಟಿದ್ದಾರೆ. ನಮಗೆ ಒಂದೊಂದು ಕ್ಷೇತ್ರದ ಜವಾಬ್ದಾರಿ ಕೊಟ್ಟಿದ್ದಾರೆ. ನಮಗೆ ಸಚಿವರಿಗೆಲ್ಲ ಹೈಕಮಾಂಡ್ ಜವಾಬ್ದಾರಿ ಕೊಟ್ಟಿರುವುದು ಸತ್ಯ. ಯತೀಂದ್ರ ಹೇಳಿಕೆ ಗಮನಿಸಿಲ್ಲ, ಆದರೆ ಸಚಿವರಿಗೆಲ್ಲ ಜವಾಬ್ದಾರಿ ಕೊಡಲಾಗಿದೆ ಎಂದು ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು.

'ಏನೇನು ತೀರ್ಮಾನ ಆಗಿದೆ ಹೈಕಮಾಂಡ್‌ಗೆ ಗೊತ್ತು'

ಯತೀಂದ್ರ ಹೇಳಿಕೆ ಅವರ ವೈಯಕ್ತಿಕ ಅಭಿಪ್ರಾಯ ಎಂದು ಕಲಬುರಗಿಯಲ್ಲಿ ಮಾಜಿ ಡಿಸಿಎಂ ಲಕ್ಷ್ಮಣ ಸವದಿ ಹೇಳಿದರು. ನಮ್ಮಲ್ಲಿ ಹೈಕಮಾಂಡ್ ಇದೆ, ಆ ಬಗ್ಗೆ ತೀರ್ಮಾನಿಸುತ್ತೆ. ಹೈಕಮಾಂಡ್ ಮನಸ್ಸು ಮಾಡಿದ್ರೆ ಈ ಐದು ವರ್ಷ ಅಲ್ಲ, ಮುಂದೆಯೂ ಕೂಡ ಅವರೇ ಸಿಎಂ ಆಗಿರಬಹುದು. ಏನೇನು ತೀರ್ಮಾನ ಆಗಿದೆ ಹೈಕಮಾಂಡ್‌ಗೆ ಗೊತ್ತು. ಐದು ವರ್ಷನೋ, ಎರಡೂ ವರ್ಷನೋ ಅವ್ರಿಗೆ ಗೊತ್ತು ಎಂದು ಲಕ್ಷ್ಮಣ ಸವದಿ ಹೇಳಿದರು.

ಇನ್ನು ಮತ್ತೊಂದೆಡೆ ಈ ಬಗ್ಗೆ ಸಚಿವ ಸತೀಶ್ ಜಾರಕಿಹೊಳಿ ಮಾತನಾಡಿದ್ದು, ಯತೀಂದ್ರ ಅವರ ಹೇಳಿಕೆ ವೈಯಕ್ತಿಕ, ನನಗೆ ಸಂಬಂಧವಿಲ್ಲ. ಅವರು ಎಲ್ಲಿ? ಏನ್ ಮಾತನಾಡಿದ್ದಾರೆ ನನಗೆ ಗೊತ್ತಿಲ್ಲ. ಯತೀಂದ್ರ ವೈಯಕ್ತಿಕ ಹೇಳಿಕೆಗೆ ಪ್ರತಿಕ್ರಿಯೆ ಕೊಡಲ್ಲ ಎಂದರು.

## ಅವಹೇಳನಕಾರಿ ಹೇಳಿಕೆ ಕೇಸ್: ಕಲ್ಲಡ್ಕ ಪ್ರಭಾಕರ್ ಭಟ್‌ಗೆ ಜಾಮೀನು

**ಮಂಡ್ಯ:** ಮುಸ್ಲಿಂ ಮಹಿಳೆಯರ ಬಗ್ಗೆ ಅವಹೇಳನಕಾರಿ ಹೇಳಿಕೆ ಪ್ರಕರಣದಲ್ಲಿ ಆರ್ ಎಸ್‌ಎಸ್ ಮುಖಂಡ ಕಲ್ಲಡ್ಕ ಪ್ರಭಾಕರ್ ಭಟ್‌ಗೆ ಜಾಮೀನು ಸಿಕ್ಕಿದೆ. ಪ್ರಕರಣ ಸಂಬಂಧ ಪ್ರಭಾಕರ್ ಭಟ್ ಸಲ್ಲಿಸಿದ್ದ ಜಾಮೀನು ಅರ್ಜಿ ವಿಚಾರಣೆ ನಡೆಸಿದ್ದ ಶ್ರೀರಂಗಪಟ್ಟಣದ 3ನೇ ಅಪರ ಜಿಲ್ಲಾ ಮತ್ತ ಸತ್ರ ನ್ಯಾಯಾಲಯ, ಇಂದು ಜಾಮೀನು ನೀಡಿ ಆದೇಶ ಹೊರಡಿಸಿದೆ. ಸ್ಥಳೀಯ ಇಬ್ಬರು ಶ್ಯೂರಿಟಿ ಸೇರಿ 2 ಲಕ್ಷ ರೂ ಮೌಲ್ಯದ ಬಾಂಡ್ ನೀಡುವಂತೆ ಹೇಳಿ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.



**ಪ್ರಕರಣದ ಹಿನ್ನಲೆ:** ಡಿಸೆಂಬರ್ 24ರಂದು ಶ್ರೀರಂಗಪಟ್ಟಣದ ಹನುಮ ಸಂಕೀರ್ತನಾ ಯಾತ್ರೆಯಲ್ಲಿ ಮಾತನಾಡಿದ್ದ ಪ್ರಭಾಕರ್ ಭಟ್, 'ಮುಸ್ಲಿಂ ಮಹಿಳೆಯರಿಗೆ ದಿನಕ್ಕೊಬ್ಬ ಗಂಡಂದಿರು. ಅವರಿಗೆ ಪರ್ಮನೆಂಟ್ ಗಂಡ ಇರಲಿಲ್ಲ. ಅವರಿಗೆ ಪರ್ಮನೆಂಟ್ ಗಂಡನನ್ನು ಕೊಟ್ಟಿದ್ದೇ ಮೋದಿ ಸರ್ಕಾರ' ಎಂದು ಭಟ್ ಹೇಳಿದ್ದರು. ಇನ್ನು ಇದಕ್ಕೆ ಮುಸ್ಲಿಂ ಸಮುದಾಯ ಆಕ್ರೋಶ ವ್ಯಕ್ತಪಡಿಸಿತ್ತು. ಅಲ್ಲದೇ ಮುಸ್ಲಿಂ ಮಹಿಳೆಯರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವುದರಿಂದ ಸೂಕ್ತ ಕಾನೂನು ಕ್ರಮಕ್ಕೆಗೊಳ್ಳಬೇಕೆಂದು ಆಗ್ರಹಗಳು ವ್ಯಕ್ತವಾಗಿದ್ದವು. ಇನ್ನು ಈ ಬಗ್ಗೆ ಸಾಮಾಜಿಕ ಕಾರ್ಯಕರ್ತೆ ನಜ್ಮಾ ನಝೀರ್ ಚಿಕ್ಕನೇರಳೆ ದೂರು ನೀಡಿದ್ದರು. ದೂರಿನ ಮೇರೆಗೆ ಶ್ರೀರಂಗಪಟ್ಟಣ ಪೊಲೀಸ್ ಠಾಣೆಯಲ್ಲಿ ಭಾಕರ್ ಭಟ್ ವಿರುದ್ಧ ಐಪಿಸಿ ಸೆಕ್ಷನ್ 354, 294, 509, 506, 1530, 295 2950, 298ರ ಅಡಿ ಎಫ್‌ಐಆರ್ ದಾಖಲಾಗಿತ್ತು. ಬಳಿಕ ಈ ಎಫ್‌ಐಆರ್ ರದ್ದು ಕೋರಿ ಪ್ರಭಾಕರ್ ಭಟ್ ಹೈಕೋರ್ಟ್ ಮೆಟ್ಟಿಲೇರಿದ್ದಾರೆ. ಇನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಶ್ರೀರಂಗಪಟ್ಟಣದ 3ನೇ ಅಪರ ಜಿಲ್ಲಾ ಮತ್ತ ಸತ್ರ ನ್ಯಾಯಾಲಯ ಜಾಮೀನು ಮಂಜೂರು ಮಾಡಿದೆ.

## ದೇಶಪ್ರೇಮ, ದೇಶ ಭಕ್ತಿ ಬರೀ ಭಾಷಣಕ್ಕೆ ಸೀಮಿತವಾಗಿದೆ

**ಬೆಳಗಾವಿ:** ದೇಶಪ್ರೇಮ, ದೇಶ ಭಕ್ತಿ ಬರೀ ಭಾಷಣಕ್ಕೆ ಸೀಮಿತವಾಗಿದೆ. ಇಂದು ಅಧಿಕಾರದಲ್ಲಿರುವವರು ಸ್ವಾತಂತ್ರ್ಯಕ್ಕೆ ಹೋರಾಡಿದ್ರಾ? ಅವರು ಎಂದಾದರೂ ತ್ಯಾಗ, ಬಲಿದಾನ ಮಾಡಿದ್ದಾರೆಯೇ ಎಂದು ಸಿಎಂ ಸಿದ್ದರಾಮಯ್ಯ ಬಿಜೆಪಿಗೆ ಟಾಂಗ್ ನೀಡಿದ್ದಾರೆ.

ಜಿಲ್ಲೆಯ ಬೈಲಹೊಂಗಲ ತಾಲೂಕಿನ ಸಂಗೊಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ಸಂಗೊಳ್ಳಿ ರಾಯಣ್ಣ ಉತ್ಸವದಲ್ಲಿ ಮಾತನಾಡಿದ ಅವರು, ಸಿಪಾಯಿ ದಂಗೆಗೂ ಮೊದಲು ಟಿಪ್ಪು ಸುಲ್ತಾನ್, ವೆಂಕಟಪ್ಪ ನಾಯಕ, ಕಿತ್ತೂರು ಚೆನ್ನಮ್ಮ, ರಾಯಣ್ಣ ಸ್ವಾತಂತ್ರ್ಯಕ್ಕಾಗಿ ಹೋರಾಡಿದ್ದರು. ಇದನ್ನು ನಾವು ಯಾರೂ ಮರೆಯಲು ಸಾಧ್ಯವಿಲ್ಲ ಎಂದು ಪರೋಕ್ಷವಾಗಿ ಬಿಜೆಪಿಯವರ ವಿರುದ್ಧ ವಾಗ್ದಾಳಿ ಮಾಡಿದ್ದಾರೆ.

**ಸರ್ಕಾರದ ವತಿಯಿಂದ ಸೈನಿಕ ಶಾಲೆ:** ಸಂಗೊಳ್ಳಿ ರಾಯಣ್ಣ ಹೆಸರಿನಲ್ಲಿ ಸೈನಿಕ ಶಾಲೆಯನ್ನ ಸರ್ಕಾರ ನಿರ್ಮಿಸಿದೆ. ಯುವಕ, ಯುವತಿಯರಿಗೆ ರಾಯಣ್ಣ ಸೈನಿಕ ಶಾಲೆ ಸ್ಫೂರ್ತಿಯಾಗಬೇಕು. ದೇಶಭಕ್ತಿಯಿಂದ ವಿಮುಕ್ತರಾಗಬಾರದು ಎಂದು ಸೈನಿಕ ಶಾಲೆ ಸ್ಥಾಪನೆ ಮಾಡಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಪ್ರಾಧಿಕಾರ ರಚನೆ ಬಳಿಕ ರಾಯಣ್ಣ ಹೆಸರು ಶಾಶ್ವತವಾಗಿ ಇರಬೇಕು. ಪ್ರಾಧಿಕಾರಕ್ಕೆ ಅಂದು ನಮ್ಮ ಸರ್ಕಾರ 100 ಎಕರೆ ಜಮೀನು ನೀಡಿತ್ತು ಎಂದು ಹೇಳಿದ್ದಾರೆ. ಸಂಗೊಳ್ಳಿ ರಾಯಣ್ಣ ಶೌರ್ಯವಂತ, ಶೂರನಾಗಿದ್ದರು, ದೇಶ ಭಕ್ತಿ ಇಟ್ಟುಕೊಂಡಿದ್ದರು. 267 ಕೋಟಿ ರೂ. ಖರ್ಚು ಮಾಡಿ ಸೈನಿಕ ಶಾಲೆ, ರಾಕ್ ಗಾರ್ಡನ್, ಸಮಾಧಿ ಅಭಿವೃದ್ಧಿ ಮಾಡಲಾಗಿದೆ. 2018ರಲ್ಲಿ ಘೋಷಣೆ ಮಾಡಿ ನಾನೇ ಇಲ್ಲಿಗೆ ಬಂದು ಶಂಕುಸ್ಥಾಪನೆ ನೆರವೇರಿಸಿದ್ದೆ. ಈಗ 230 ವಿದ್ಯಾರ್ಥಿಗಳು ಈಗ ಕಲಿಯುತ್ತಿದ್ದು ಬಹಳ ಸಂತೋಷ ಆಗುತ್ತಿದೆ ಎಂದಿದ್ದಾರೆ. ಈ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟವರು ಕಾಂಗ್ರೆಸ್‌ನವರು ಮಹಾತ್ಮ ಗಾಂಧಿ. ದೇಶ ಪ್ರೇಮದ ಬಗ್ಗೆ ಉದ್ದೂದ ಭಾಷಣ ಮಾಡುತ್ತಾರೆ. ಇದನ್ನ ಅರ್ಥ ಮಾಡಿಕೊಳ್ಳಬೇಕು ಂದು ಹೇಳಿದ್ದಾರೆ.

## ಕರ್ನಾಟಕ ವಿವಿಯಲ್ಲಿ 10 ವರ್ಷ ಹಿಂದಿನ ಅಕ್ರಮಗಳ ತನಿಖೆಗೆ ಮರುಜೀವ ಆರೋಪಿಗಳ ಎದೆಯಲ್ಲಿ ಢವಢವ

**ಧಾರವಾಡ:** ಧಾರವಾಡದ ಪ್ರತಿಷ್ಠಿತ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಹತ್ತು ವರ್ಷಗಳ ಹಿಂದೆ ನಡೆದಿದೆ ಎನ್ನಲಾದ ಅಕ್ರಮ ನೇಮಕಾತಿ, ಅಂಕಪಟ್ಟಿ, ಕಾಮಗಾರಿ ಹಾಗೂ ಖರೀದಿ ಹಗರಣಕ್ಕೆ ಮರುಜೀವ ಬಂದಿದೆ. ಹಗರಣಕ್ಕೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್ ಮತ್ತು ಸಿವಿಲ್ ಪ್ರಕರಣಗಳ ಕುರಿತ ಕಾರ್ಯನಿರ್ವಹಣಾ ವರದಿ ಸಲ್ಲಿಸುವಂತೆ ರಾಜ್ಯಪಾಲರು ಸರ್ಕಾರಕ್ಕೆ ಸೂಚಿಸಿದ್ದಾರೆ. ಇದರಿಂದಾಗಿ ಈ ಹಗರಣದಲ್ಲಿ ಭಾಗಿಯಾದವರ ಎದೆಯಲ್ಲಿ ಢವಢವ ಶುರುವಾಗಿದೆ.

ಧಾರವಾಡದ ಪ್ರತಿಷ್ಠಿತ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಹತ್ತು ವರ್ಷಗಳ ಹಿಂದೆ ನಡೆದಿದೆ ಎನ್ನಲಾದ ಅಕ್ರಮ ನೇಮಕಾತಿ, ಅಂಕಪಟ್ಟಿ, ಕಾಮಗಾರಿ ಹಾಗೂ ಖರೀದಿ ಹಗರಣಕ್ಕೆ ಮರುಜೀವ ಬಂದಿದೆ. 2014ರಲ್ಲಿ ಕುಲಪತಿಯಾಗಿದ್ದ ಪ್ರೊ. ಎಚ್.ಬಿ. ವಾಲೀಕಾರ, ಅಂದಿನ ಮೌಲ್ಯಮಾಪನ ಕುಲಸಚಿವ ಡಾ. ಎಚ್.ಟಿ. ಪೋತೆ ಸೇರಿ 7 ಜನರ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್, ಸಿವಿಲ್ ಪ್ರಕರಣಗಳ ಕಾರ್ಯನಿರ್ವಹಣಾ ವರದಿ ಸಲ್ಲಿಸಬೇಕು ಎಂದು ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಆರ್. ಪ್ರಭುಶಂಕರ ಅವರು ಉನ್ನತ ಶಿಕ್ಷಣ ಇಲಾಖೆಯ ವಿಶೇಷ ಕಾರ್ಯದರ್ಶಿ ಶ್ರೀಕರ ಅವರಿಗೆ ಸೂಚಿಸಿದ್ದಾರೆ.

ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ನಡೆದಿದೆ ಎನ್ನಲಾದ ಅಕ್ರಮ ನೇಮಕಾತಿ, ಅಂಕಪಟ್ಟಿ, ಕಾಮಗಾರಿ ಮತ್ತು ಖರೀದಿ ಹಗರಣಗಳ ಕುರಿತ ತನಿಖೆಗೆ ಸರ್ಕಾರ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಬಿ. ಪದ್ಮರಾಜ ನೇತೃತ್ವದ ಆಯೋಗ ರಚಿಸಿತ್ತು. ಆಯೋಗದ ವರದಿಯನ್ವಯ ರಾಜ್ಯಪಾಲರ ಆದೇಶದಂತೆ ಧಾರವಾಡ ಲೋಕಾಯುಕ್ತ ಠಾಣೆಯಲ್ಲಿ ಕವಿವಿಯ ಅಂದಿನ ಕುಲಪತಿ ಪ್ರೊ. ವಾಲೀಕಾರ ವಿರುದ್ಧ 2014ರ ಅ. 7ರಂದು ಪ್ರಕರಣ ದಾಖಲಾಗಿತ್ತು. ಕುಲಪತಿ ಪ್ರೊ. ಅವರ ಸೇವಾವಧಿಯ ವಾಲೀಕಾರ ಕೆಲವೇ ದಿನಗಳು ಬಾಕಿ ಇದ್ದಾಗ ಅವರ ಕಚೇರಿಯಿಂದಲೇ ಲೋಕಾಯುಕ್ತ ಪೊಲೀಸರಿಂದ ಬಂಧನಕ್ಕೊಳಗಾಗಿ ನಂತರ ಕುಲಪತಿ ಹುದ್ದೆಯಿಂದ ಅಮಾನತುಗೊಂಡಿದ್ದರು.

ತಮ್ಮ ವಿರುದ್ಧದ ಕ್ರಮವನ್ನು ಪ್ರಶ್ನಿಸಿ ಪ್ರೊ. ಎಚ್.ಬಿ. ವಾಲೀಕಾರ ಅವರು ಹೈಕೋರ್ಟ್ ಮೊರೆ ಹೋಗಿದ್ದರು. ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ ಅನ್ವಯ ತನಿಖಾ ಆಯೋಗದ ವರದಿಯನ್ವಯ ಸರ್ಕಾರ ಕ್ರಮ ವಹಿಸಲು ಆದೇಶಿಸಬೇಕಿತ್ತು. ಆದರೆ, ಕುಲಾಧಿಪತಿಗಳೇ ನೇರವಾಗಿ ಕ್ರಮಕ್ಕೆ ಆದೇಶ ಹೊರಡಿಸಿದ್ದು ತಾಂತ್ರಿಕವಾಗಿ ಸಿಂಧುವಲ್ಲ ಎಂಬ ಕಾರಣಕ್ಕೆ ಕುಲಾಧಿಪತಿಗಳ ಆದೇಶ ಮತ್ತು ಎಫ್ ಐಆರ್ ರದ್ದುಗೊಳಿಸಿ ನ್ಯಾಯಾಲಯ ಆದೇಶಿಸಿತ್ತು.

ಆದರೆ, ಹಗರಣಗಳ ಬಗ್ಗೆ ರಾಜ್ಯ ಸರ್ಕಾರ ನಿಯಮಾನುಸಾರ ಪ್ರಕ್ರಿಯೆ ಅನುಸರಿಸಿ ಕಾನೂನು ಕ್ರಮ ಜರುಗಿಸಬಹುದು ಎಂದು ತೀರ್ಪಿನಲ್ಲಿ ತಿಳಿಸಿತ್ತು. ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿದ್ದ ಪ್ರೊ. ವಾಲೀಕಾರ ಅವರು, ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದರು. ಪ್ರೊ. ವಾಲೀಕಾರ ಹಾಗೂ ಇತರರ ವಿರುದ್ಧ ಕಾನೂನು ಕ್ರಮ ಜರುಗಿಸಲು ಯಾವುದೇ ಅಡೆತಡೆ ಇಲ್ಲ ಎಂದು ಸುಪ್ರೀಂ ಕೋರ್ಟ್‌ನ ತ್ರಿಸದಸ್ಯ ಪೀಠ ಆದೇಶಿಸಿತ್ತು.

ಇದೀಗ ರಾಜ್ಯಪಾಲರು ಕರ್ನಾಟಕ ವಿಶ್ವವಿದ್ಯಾಲಯದ ಪ್ರಕರಣಗಳಿಗೆ ಸಂಬಂಧಿಸಿ ಕಾರ್ಯನಿರ್ವಹಣಾ ವರದಿ ಸಲ್ಲಿಸುವಂತೆ ಸರ್ಕಾರಕ್ಕೆ ಸೂಚಿಸಿದ್ದಾರೆ. ಆದರೆ, ಅದೇ ಕಾಲಘಟ್ಟದಲ್ಲಿ ಜರುಗಿದ್ದ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ 14 ಗಂಭೀರ ಹಗರಣಗಳ ಬಗ್ಗೆ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಕೆ. ಭಕ್ತವತ್ಸಲ ನೇತೃತ್ವದ ಆಯೋಗ ಸಲ್ಲಿಸಿದ್ದ ವರದಿಗಳ ಕುರಿತು ವರದಿ ಕೇಳದಿರುವುದು ಕುತೂಹಲ ಮೂಡಿಸಿದೆ.

## ದರ್ಬಾರ್‌ನಲ್ಲಿ ಗಣ್ಯರು

ಸ್ಪೀಕರ್ ಯು.ಟಿ ಖಾದರ್, ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್, ಮಾಜಿ ಸಿಎಂ ಯಡಿಯೂರಪ್ಪ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸೇರಿದಂತೆ ರಾಜಕೀಯ ನಾಯಕರ ಜತೆ ಸ್ಥಳೀಯ ಶಾಸಕರೂ ಭಾಗಿಯಾದರು.

ಪುತ್ತಿಗೆ ಶ್ರೀಗಳ ಪರ್ಯಾಯ ಪೀಠಾರೋಹಣಕ್ಕೆ ಇತರ ಮಠಗಳ ಶ್ರೀಗಳು ಗೈರಾಗುತ್ತಿದ್ದಾರೆ. ಇದರೊಂದಿಗೆ 2008ರ ಇತಿಹಾಸ ಪುನರಾವರ್ತನೆಯಾದಂತಾಗಿದೆ.

2008 ರಲ್ಲಿ ಕೂಡ ಪುತ್ತಿಗೆ ಶ್ರೀಗಳ ಪರ್ಯಾಯ ಪೀಠಾರೋಹಣಕ್ಕೆ ವಿರೋಧ ವ್ಯಕ್ತವಾಗಿತ್ತು. ಆ ಸಂದರ್ಭ ಅಂದಿನ ಶೀರೂರು ಶ್ರೀಗಳು ಅವರ ಜೊತೆ ನಿಂತಿದ್ದರು. ಉಳಿದ 6 ಮಠಗಳ ಶ್ರೀಗಳು ಪರ್ಯಾಯದಿಂದ ದೂರ ಉಳಿದಿದ್ದರು.

**ಯಾಕಾಗಿ ವಿರೋಧ :** ಉಡುಪಿ ಅಷ್ಟ ಮಠಗಳ ಪರಂಪರೆಯಂತೆ ಅಲ್ಲಿನ ಯಾವುದೇ ಶ್ರೀಗಳು ಸಮುದ್ರೋಲ್ಲಂಘನೆ ಮಾಡುವಂತಿಲ್ಲ. ಆದರೆ, ಪುತ್ತಿಗೆ ಶ್ರೀಗಳು ಸಮುದ್ರೋಲ್ಲಂಘನೆ ಮಾಡಿ ವಿದೇಶ ಪ್ರವಾಸ ಕೈಗೊಂಡಿದ್ದಾರೆ. ಸುಮಾರು 16 ದೇಶಗಳ ಪ್ರವಾಸ ಮಾಡಿದ್ದಾರೆ. ಹೀಗಾಗಿ ಅವರ ಪರ್ಯಾಯ ಪೀಠಾರೋಹಣಕ್ಕೆ ಇತರ ಮಠಾಧೀಶರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ.

ಏನಿದು ಉಡುಪಿ ಪರ್ಯಾಯ : ಉಡುಪಿಯ ಕೃಷ್ಣ ದೇಗುಲದಲ್ಲಿ 8 ಮಠಗಳು ಇದ್ದು, ಎರಡು ವರ್ಷಗಳಿಗೊಮ್ಮೆ ನಡೆಯುವ ಪರ್ಯಾಯ ಮಹೋತ್ಸವದ ವೇಳೆ ಎರಡು ವರ್ಷಗಳ ಕಾಲ ಕೃಷ್ಣನ ಸೇವೆ ಮಾಡುವ ಜವಾಬ್ದಾರಿಯನ್ನು ಮತ್ತೊಂದು ಮಠಕ್ಕೆ ಬಿಟ್ಟುಕೊಡಲಾಗುತ್ತದೆ. ಸರದಿಯಂತೆ ಅಷ್ಟ ಮಠಗಳ ಯತಿಗಳು ಎರಡು ವರ್ಷ ಕಾಲ ಶ್ರೀಕೃಷ್ಣನ ಪೂಜೆ, ಸೇವೆ ಮಾಡುತ್ತಾ ಬರುತ್ತಾರೆ.

### ವಿಗ್ರಹವೇ ಪ್ರತಿಷ್ಠಾಪನೆ

ಅದರಂತೆ, ಸೋಮವಾರ ಅದ್ದೂರಿಯಾಗಿ ದೇಗುಲ ಲೋಕಾರ್ಪಣೆಗೆ ಸಕಲ ಸಿದ್ಧತೆ ನಡೆಸಲಾಗುತ್ತಿದೆ. ಅಯೋಧ್ಯೆಯಲ್ಲಿ ರಾಮಮಂದಿರ ಲೋಕಾರ್ಪಣೆಯ ಪೂಜಾ ಕೈಂಕರ್ಯದಂತೆ ಇಲ್ಲಿಯೂ ದೇಗುಲ ಉದ್ಘಾಟನೆ ಮಾಡಲಾಗುತ್ತಿದೆ. ಲೇಬರ್ ಕಾಲೋನಿ ನಿವಾಸಿಗಳೇ ಟ್ರಸ್ಟ್ ರಚಿಸಿಕೊಂಡು ಈ ರಾಮ ಮಂದಿರವನ್ನು ನಿರ್ಮಿಸಿದ್ದಾರೆ. ದೇವಾಲಯ ಲೋಕಾರ್ಪಣೆ ದಿನ ಹತ್ತಿರವಾಗುತ್ತಿದ್ದಂತೆ ನಿವಾಸಿಗಳಲ್ಲಿ ಸಂಭ್ರಮ ಮನೆ ಮಾಡಿದೆ.

### ರಜೆ ಘೋಷಣೆ

ದೈವಿಕ ಅನುಗ್ರಹವನ್ನು ಸಂಕೇತಿಸುವ ಈ ಪವಿತ್ರ ಉಡುಗೊರೆಯನ್ನು ಮನೆ ತೋಟಗಳಲ್ಲಿ ಅಥವಾ ಹೂವಿನ ಕುಂಡಗಳಲ್ಲಿ ಬಳಸಬಹುದು, ಆಧ್ಯಾತ್ಮಿಕ ವಾತಾವರಣವನ್ನು ಹೆಚ್ಚಿಸುತ್ತದೆ. ಪ್ರಾಣ ಪ್ರತಿಷ್ಠಾ ಕಾರ್ಯಕ್ರಮಕ್ಕೆ ಹಾಜರಾಗಲು ಸಾಧ್ಯವಾಗದವರೂ ಭವಿಷ್ಯದಲ್ಲಿ ಈ ಅರ್ಥಪೂರ್ಣ ಉಡುಗೊರೆಯನ್ನು ಪಡೆಯಬಹುದು.

ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ನಿರ್ದೇಶನದಂತೆ ಜನವರಿ 22 ರಂದು ಉತ್ತರ ಪ್ರದೇಶದ ಶಿಕ್ಷಣ ಸಂಸ್ಥೆಗಳು ರಾಮಮಂದಿರ ಪ್ರಾಣ ಪ್ರತಿಷ್ಠೆ ಸಮಾರಂಭದ ದೃಷ್ಟಿಯಿಂದ ಮುಚ್ಚಿರುತ್ತವೆ ಎಂದು ಸುದ್ದಿ ಸಂಸ್ಥೆ ಐಂಖ ವರದಿ ಮಾಡಿದೆ. ಹೆಚ್ಚುವರಿಯಾಗಿ, ಅಂದು ರಾಜ್ಯದಾದ್ಯಂತ ಮದ್ಯದಂಗಡಿಗಳನ್ನು ಕೂಡ ಮುಚ್ಚಲಾಗುವುದು.

ಮಧ್ಯಪ್ರದೇಶ ಮಧ್ಯಪ್ರದೇಶದಲ್ಲಿ ಮುಖ್ಯಮಂತ್ರಿ ಮೋಹನ್ ಯಾದವ್ ಅವರು ಜನವರಿ 22 ರಂದು ಶಾಲಾ ರಜೆ ಎಂದು ಘೋಷಿಸಿದ್ದಾರೆ, ಜನರು ಈ ದಿನವನ್ನು ಹಬ್ಬದಂತೆ ಆಚರಿಸಲು ಪ್ರೋತ್ಸಾಹಿಸಿದ್ದಾರೆ. ಯಾದವ್ ಅವರು ಜನವರಿ 22 ರಂದು ರಾಜ್ಯದಲ್ಲಿ ಡ್ರೈ ಡೇ ಘೋಷಿಸಿದ್ದಾರೆ, ಮದ್ಯ ಮತ್ತು ಭಾಂಗ್ ಮಳಿಗೆಗಳು ಸೇರಿದಂತೆ ಎಲ್ಲಾ ರೀತಿಯ ಅಂಗಡಿಗಳನ್ನು ಮುಚ್ಚುವಂತೆ ಆದೇಶ ಹೊರಡಿಸಿದ್ದಾರೆ.

ಗೋವಾ ಲೈವ್ ಮಿಂಟ್ ವರದಿಯ ಪ್ರಕಾರ ಅಯೋಧ್ಯೆಯ ರಾಮ ಜನ್ಮಭೂಮಿ ದೇವಾಲಯದಲ್ಲಿ ಪ್ರಾಣ ಪ್ರತಿಷ್ಠಾ ಸಮಾರಂಭದ ಹಿನ್ನೆಲೆಯಲ್ಲಿ ಗೋವಾ ಸರ್ಕಾರವು ಜನವರಿ 22 ರಂದು ಸರ್ಕಾರಿ ನೌಕರರು ಮತ್ತು ಶಾಲೆಗಳಿಗೆ ರಜೆ ಘೋಷಿಸಿದೆ. ಶಾಲೆಗಳೊಂದಿಗೆ ಸರ್ಕಾರಿ ನೌಕರರಿಗೆ ಮಾತ್ರ ಸಾರ್ವಜನಿಕ ರಜೆ ಇರುತ್ತದೆ ಎಂದು ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಅವರು ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಛತ್ತೀಸ್‌ಗಢ ಅಯೋಧ್ಯೆಯ ರಾಮಮಂದಿರದಲ್ಲಿ ನೂತನ ವಿಗ್ರಹ ಪ್ರತಿಷ್ಠಾಪನೆ ಕಾರ್ಯಕ್ರಮವನ್ನು ಆಚರಿಸಲು ಛತ್ತೀಸ್ ಗಢ ಸರ್ಕಾರವು ಎಲ್ಲಾ ರಾಜ್ಯ ಸರ್ಕಾರಿ ಶಾಲಾ-ಕಾಲೇಜುಗಳಿಗೆ ಜನವರಿ 22 ರಂದು ರಜೆ ಘೋಷಿಸಿದೆ. ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ ಅವರು ಎಕ್ಸ್ ನಲ್ಲಿ ಬರೆದುಕೊಂಡಿದ್ದಾರೆ.

ಹರ್ಯಾಣ ರಾಮಮಂದಿರ ಉದ್ಘಾಟನೆ ಹಿನ್ನೆಲೆಯಲ್ಲಿ ಹರ್ಯಾಣ ಸರ್ಕಾರ ಜನವರಿ 22 ರಂದು ಶಾಲೆಗಳನ್ನು ಮುಚ್ಚುವುದಾಗಿ ಘೋಷಿಸಿದೆ. ಅಲ್ಲದೆ, ಮಹಾಮಸ್ತಕಾಭಿಷೇಕದ ದಿನದಂದು ರಾಜ್ಯದಲ್ಲಿ ಎಲ್ಲಿಯೂ ಮದ್ಯ ಸೇವನೆಯನ್ನು ಅನುಮತಿಸಲಾಗುವುದಿಲ್ಲ ಎಂದು ಕೂಡ ತಿಳಿಸಿದೆ.

### ಭೇಟಿಯಾದ ಕುಮಾರಸ್ವಾಮಿ

**ಜನವರಿ 22ರ ನಂತರ ಸೀಟು ಹಂಚಿಕೆ ಚರ್ಚೆ;** ಜೆಡಿಎಸ್ ಬಿಡುಗಡೆ ಮಾಡಿರುವ ಹೇಳಿಕೆಯ ಪ್ರಕಾರ, ಜನವರಿ 22 ರಂದು ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆಯ ನಂತರವೇ ಸೀಟು ಹಂಚಿಕೆ ಮತ್ತು ಎನ್ ಡಿಎ ಮೈತ್ರಿಕೂಟದೊಂದಿಗೆ ಜೆಡಿಎಸ್ ಔಪಚಾರಿಕವಾಗಿ ಸೇರ್ಪಡೆಗೊಳ್ಳುವ ಮಾತುಕತೆ ನಡೆಯಲಿದೆ ಎಂದು ಅಮಿತ್ ಶಾ ಅವರು ಕುಮಾರಸ್ವಾಮಿಗೆ ತಿಳಿಸಿದ್ದಾರೆ.

ರಾಜ್ಯಕ್ಕೆ ಸಂಬಂಧಿಸಿದ ಹಲವು ವಿಷಯಗಳ ಕುರಿತು ನಾವು ಬಿಜೆಪಿ ನಾಯಕರೊಂದಿಗೆ ಚರ್ಚೆ ನಡೆಸಿದ್ದೇವೆ. ಪ್ರಧಾನಿ ಮೋದಿ ನೇತೃತ್ವದಲ್ಲಿ ಎನ್‌ಡಿಎ ಮತ್ತೆ ಅಧಿಕಾರಕ್ಕೆ ತರಲು ಬಿಜೆಪಿ ಮತ್ತು ಜೆಡಿಎಸ್ ಶ್ರಮಿಸಲಿವೆ ಎಂದು ಕುಮಾರಸ್ವಾಮಿ ಹೇಳಿದರು.

**6 ಸ್ಥಾನಗಳ ಮೇಲೆ ಕಣ್ಣಿಟ್ಟಿರುವ ಜೆಡಿಎಸ್:** ಬಿಜೆಪಿ ನಾಯಕರ ಜತೆಗಿನ ಚರ್ಚೆ ವೇಳೆ ಜೆಡಿಎಸ್ ಗೆ ಕನಿಷ್ಠ ನಾಲ್ಕು ಸ್ಥಾನಗಳ ಖಾತರಿ ದೊರೆತಿದೆ ಎನ್ನಲಾಗಿದೆ. ಆದರೆ, ಇನ್ನೆರಡು ಸ್ಥಾನಗಳಿಗೆ ಚೌಕಾಸಿ ಮಾಡುವತ್ತ ಜೆಡಿಎಸ್ ಕಣ್ಣಿಟ್ಟಿದೆ. ಮಂಡ್ಯ, ಹಾಸನ, ತುಮಕೂರು, ಕೋಲಾರದಲ್ಲಿ ಜೆಡಿಎಸ್ ಗೆಲ್ಲುವ ನಿರೀಕ್ಷೆ ಇದೆ. ಪ್ರಾದೇಶಿಕ ಪಕ್ಷವು ಬೆಂಗಳೂರು ಗ್ರಾಮಾಂತರ ಮತ್ತು ಚಿಕ್ಕಬಳ್ಳಾಪುರ ಕ್ಷೇತ್ರಗಳಲ್ಲಿ ಕೂಡ ಪಕ್ಷದ ಅಭ್ಯರ್ಥಿಗಳನ್ನೇ ಕಣಕ್ಕಿಳಿಸಲು ಜೆಡಿಎಸ್ ಚಿಂತನೆ ನಡೆಸಿದೆ. ಆದರೆ, ಇದಕ್ಕೆ ಎನ್ ಡಿಎ ಮೈತ್ರಿಕೂಟದ ಸಮ್ಮತಿಯೂ ಬೇಕಾಗಿದೆ.

ಲೋಕಸಭೆ ಚುನಾವಣೆಗೆ ಸ್ಪರ್ಧಿಸುವುದಿಲ್ಲ ಎಂದು ಮಾಜಿ ಪ್ರಧಾನಿ, ಜೆಡಿಎಸ್ ಅಧ್ಯಕ್ಷ ಹೆಚ್ ಡಿ ದೇವೇಗೌಡ ಈಗಾಗಲೇ ಸ್ಪಷ್ಟಪಡಿಸಿದ್ದಾರೆ. ಮಂಡ್ಯದಿಂದ ಕಣಕ್ಕಿಳಿಯುವಂತೆ ಜೆಡಿಎಸ್‌ನ ಹಲವು ಮುಖಂಡರು ಕುಮಾರಸ್ವಾಮಿ ಅವರನ್ನು ಒತ್ತಾಯಿಸುತ್ತಿದ್ದರೂ ಅವರ ಉಮೇದುವಾರಿಕೆ ಬಗ್ಗೆ ಇನ್ನೂ ಸ್ಪಷ್ಟತೆ ಸಿಕ್ಕಿಲ್ಲ. ವರದಿಗಳ ಪ್ರಕಾರ, ಲೋಕಸಭೆ ಚುನಾವಣೆಗೆ ಸ್ಪರ್ಧಿಸಿ ತಮ್ಮ ಸಂಪುಟಕ್ಕೆ ಸೇರ್ಪಡೆಗೊಳ್ಳುವಂತೆ ಕುಮಾರಸ್ವಾಮಿ ಅವರನ್ನು ಪ್ರಧಾನಿ ಮೋದಿ ಕೇಳಿಕೊಂಡಿದ್ದಾರೆ ಎನ್ನಲಾಗಿದೆ.

### ಯೋಧರಿಗೆ ಗಾಯ

ತೌಬಲ್ ಜಿಲ್ಲೆಯಲ್ಲಿ ಮತ್ತೊಂದು ಘಟನೆಯ ಬಗ್ಗೆ ಮಾಹಿತಿ ನೀಡಿದ ರಾಜ್ಯ ಪೊಲೀಸರು, ಗಡಿ ಭದ್ರತಾ ಪಡೆ (ಬಿಎಸ್ ಎಫ್) ಸಿಬ್ಬಂದಿಯ ಮೇಲೆ ಗುಂಪು ಗುಂಡು ಹಾರಿಸಿದೆ ಎಂದು ಹೇಳಿದರು. ಈ ಗುಂಡಿನ ದಾಳಿಯಲ್ಲಿ ಮೂವರು ಯೋಧರು ಗಾಯಗೊಂಡಿದ್ದು, ಅವರನ್ನು ಚಿಕಿತ್ಸೆಗಾಗಿ ರಾಜ್ ಮೆಡಿಸಿಟಿಗೆ ವರ್ಗಾಯಿಸಲಾಗಿದೆ.

ಮಣಿಪುರದಲ್ಲಿ ಮತ್ತೆ ಹಿಂಸಾಚಾರ ಉಲ್ಬಣಗೊಂಡಿದ್ದು, ಕಮಾಂಡೋ ಹತ್ಯೆ ಮಾಡಲಾಗಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಮಂಗಳವಾರ ಇಂಫಾಲ್ ಪಶ್ಚಿಮ ಜಿಲ್ಲೆಯ ಕೌತ್ರುಕ್ ಗ್ರಾಮದಲ್ಲಿ ಭಾರೀ ಗುಂಡಿನ ಚಕಮಕಿ ವರದಿಯಾದ ನಂತರ ಕಲಹ ಪೀಡಿತ ಮಣಿಪುರದಲ್ಲಿ ಹೊಸ ಹಿಂಸಾಚಾರ ಸಂಭವಿಸಿತ್ತು.

ಕಳೆದ ವರ್ಷ ಮೇ 3 ರಂದು ಕಣಿವೆಯ ಬಹುಸಂಖ್ಯಾತ ಮೈತಿ ಮತ್ತು ಗುಡ್ಡಗಾಡು ಬಹುಸಂಖ್ಯಾತ ಕುಕಿಗಳ ನಡುವೆ ಜನಾಂಗೀಯ ಹಿಂಸಾಚಾರ ಭುಗಿಲೆದ್ದಿತ್ತು.

### ಯುವತಿಗೆ ಅಸಭ್ಯ ವರ್ತನೆ

ಬಳಿಕ ಏನಾದ್ರು ಗಲಾಟೆಯಾದ್ರೆ ಏನು ತಪ್ಪಿಲ್ಲ ಎಂಬಂತೆ ಎಸ್ಕೇಪ್ ಆಗ್ತಾರೆ. ಇದೇ ರೀತಿ ವಿಜಯನಗರದ ನಮ್ಮೂಟ ಹೋಟೆಲ್ ಬಳಿ ಯುವತಿಯನ್ನು ಕಾಮುಕ ಟಚ್ ಮಾಡಿ ಅಟ್ಟಹಾಸ ಮೆರೆದಿದ್ದಾನೆ. ಈ ವೇಳೆ ಗಲಾಟೆ ನಡೆದಿದ್ದು ಸಂಪೂರ್ಣ ದೃಶ್ಯ ಸೆರೆಯಾಗಿದೆ. ಘಟನೆ ಸಂಬಂಧ ವಿಜಯನಗರ

**ಮೊದಲನೆ ಪುಟದಿಂದ...**

ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದ್ದು ಪೊಲೀಸರು ಆರೋಪಿಗಳಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ.

ಇನ್ನು ವಿಜಯನಗರ ಆರ್ ಪಿಸಿ ಲೇಔಟ್ ನಲ್ಲಿರುವ ನಮ್ಮೂಟ ಹೋಟೆಲ್ ನಲ್ಲಿ 2023 ಡಿಸಂಬರ್ 30 ರ ಸಂಜೆ 7.30 ಕ್ಕೆ ಈ ಘಟನೆ ನಡೆದಿತ್ತು. ತಡವಾಗಿ ಅಂದರೆ 2024 ರ ಜನವರಿ 10 ರಂದು ಈ ಘಟನೆ ಸಂಬಂಧ ಎಫ್‌ಐಆರ್ ದಾಖಲಾಗಿದೆ. ಹೋಟೆಲ್ ಗೆ ಬಂದ ಮೂವರು ಹುಡುಗರು ದೋಸೆ ತಿನ್ನುತ್ತ ಅಲ್ಲೇ ನಿಂತು ಹರಟೆ ಹೊಡೆಯುತ್ತಿದ್ದರು. ಈ ವೇಳೆ ಹೋಟೆಲ್ ಗೆ ಬಂದ ಯುವತಿ ಜೊತೆಗೆ ಅನುಚಿತ ವರ್ತನೆ ತೋರಿದ್ದಾರೆ. ಓರ್ವ ಕಾಮುಕ ಯುವತಿಯ ಹಿಂಬದಿಗೆ ಕೈ ನಿಂದ ಹೊಡೆದು ಅನುಚಿತ ವರ್ತನೆ ತೋರಿದ್ದಾನೆ. ಉಳಿದಿಬ್ಬರು ಅದನ್ನು ನೋಡಿ ಖುಷಿ ಪಟ್ಟಿದ್ದಾರೆ. ಈ ವೇಳೆ ಯುವತಿ ಯುವಕರ ಜೊತೆ ಗಲಾಟೆ ಮಾಡಿ ಕೂಗಾಡಿದ್ದು ಸ್ಥಳೀಯರೆಲ್ಲರೂ ಜಮಾಯಿಸಿದ್ದಾರೆ. ಜನ ಸೇರುತ್ತಿದ್ದಂತೆ ಮೂವರು ಯುವಕರು ಪರಾರಿಯಾಗಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

### ವರದಿ

ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಬಿ.ವೀರಪ್ಪ ನೇತೃತ್ವದಲ್ಲಿ ಸಮಿತಿ ರಚಿಸಿತ್ತು. ಸರ್ಕಾರದ ನಿರ್ದೇಶನದಂತೆ ವಿಚಾರಣಾ ಆಯೋಗವು ಕಖಖ ನೇಮಕಾತಿಯ ಅಕ್ರಮದ ವರದಿ ಸಿದ್ದಪಡಿಸಿದೆ.

ಇದೇ ವಾರದಲ್ಲಿ ಸಿಎಂ ಸಿದ್ದರಾಮಯ್ಯ ಅವರಿಗೆ ವಿಚಾರಣಾ ಆಯೋಗವು ಕಖಖ ಅಕ್ರಮದ ವರದಿ ಸಲ್ಲಿಸುವ ಸಾಧ್ಯತೆ ಇದೆ. ಅಕ್ರಮ ಪ್ರಕರಣದಲ್ಲಿ ಈಗಾಗಲೇ ಪೊಲೀಸ್ ನೇಮಕಾತಿ ವಿಭಾಗ ಎಡಿಜಿಪಿ ಅಮೃತ್ ಪಾಲ್ ಸೇರಿದಂತೆ ಕೆಲ ಪೊಲೀಸ್ ಅಧಿಕಾರಿಗಳ ಬಂಧಿಸಿ ಜಾಮೀನಿನ ಮೇಲೆ ಬಿಡುಗಡೆ ಮಾಡಲಾಗಿದೆ. ಪ್ರಭಾವಿ ರಾಜಕೀಯ ಮುಖಂಡರೂ ಭಾಗಿಯಾಗಿದ್ದಾರೆ ಎಂಬ ಆರೋಪದಡಿ ಕೆಲ ರಾಜಕಾರಣಿಗಳಿಗೆ ನೋಟಿಸ್ ನೀಡಿ ವಿಚಾರಣೆ ನಡೆಸಲಾಗಿತ್ತು.

### ಮಕ್ಕಳಿಗೆ ಪಾಠ!

ಆದರೆ, 300ಕ್ಕೂ ಅಧಿಕ ಮಕ್ಕಳಿರುವ ಈ ಶಾಲೆಗೆ ಕನಿಷ್ಠ ಮೂಲಭೂತ ಸೌಕರ್ಯಗಳು ಕೂಡ ಇಲ್ಲ.

ಶಾಲೆಯಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ. 1 ರಿಂದ 8 ನೇ ತರಗತಿವರಗೆ ಕೇವಲ ನಾಲ್ಕು ಕೊಠಡಿಗಳು ಇವೆ.

ಸದ್ಯ, ಇರುವ ಕೊಠಡಿಗಳು ಅಲ್ಲಲ್ಲಿ ಬಿರುಕು ಬಿಟ್ಟಿದ್ದು, ಕುಸಿದು ಬೀಳುವ ಹಂತದಲ್ಲಿವೆ. ಕೊಠಡಿಗಳ ಕೊರತೆಯಿಂದ ಹಾಗೂ ಇರುವ ಕೊಠಡಿಗಳು ಶಿಥಿಲಗೊಂಡ ಹಿನ್ನೆಲೆ ಮುಂಜಾಗ್ರತಾ ಕ್ರಮವಾಗಿ ಶಿಕ್ಷಕರು ಮಕ್ಕಳಿಗೆ ಬಯಲಲ್ಲಿ ಪಾಠ ಮಾಡುತ್ತಿದ್ದಾರೆ. ಈ ಶಾಲೆಯಲ್ಲಿ ನಾಲ್ಕು ಸರ್ಕಾರಿ ಶಿಕ್ಷಕರು ಹಾಗೂ ಆರು ಅತಿಥಿ ಶಿಕ್ಷಕರು ಮಕ್ಕಳಿಗೆ ಪಾಠ ಮಾಡುತ್ತಿದ್ದಾರೆ.

ಮೇಲಾಧಿಕಾರಿಗಳಿಗೆ, ಜನಪ್ರತಿನಿಧಿಗಳಿಗೆ ಈ ಬಗ್ಗೆ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಸೂಕ್ತ ಕೊಠಡಿಗಳ ವ್ಯವಸ್ಥೆ ಮಾಡಿಕೊಡಿ ಎಂದು ವಿದ್ಯಾರ್ಥಿಗಳು ಮನವಿ ಮಾಡುತ್ತಿದ್ದಾರೆ.

### ಬಂಧನ

ಆಕೆ ಇಂದಿರಾಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ಇರುವ ಹೋಟೆಲ್ ನಲ್ಲಿ ಲಕ್ಷಗಟ್ಟಲೆ ವಂಚಿಸಿದ್ದಾಳೆ. ಆಹಾರ, ಪಾನೀಯ ಮತ್ತು ಸ್ಪಾಗೆ ಯುಪಿಐ ಮೂಲಕ ಹಣ ಪಾವತಿಸುತ್ತಿದ್ದಳು, ಆದರೆ ಮೊತ್ತ ಮಾತ್ರ ಹೋಟೆಲ್ ನ ಬ್ಯಾಂಕ್ ಖಾತೆಗೆ ಹೋಗಿರಲಿಲ್ಲ ಎಂಬುದು ನಂತರ ತಿಳಿದುಬಂದಿದೆ.

ಈ ಬಗ್ಗೆ ಹೋಟೆಲ್ ಸಿಬ್ಬಂದಿ ಬಂದು ಕೇಳಿದಾಗ ಗಲಾಟೆ ಮಾಡಿದ್ದಾರೆ. ಆಕೆಯ ಈ ಅವಧಿಯ ಸ್ಪಾ ಬಿಲ್ 2.11 ಲಕ್ಷ ರೂ. ಆಗಿದೆ. ಹೋಟೆಲ್ ನ ಒಟ್ಟು ಮೊತ್ತ 5.88 ಲಕ್ಷ ರೂ. ಆಗಿದೆ.

ಎಎಸ್ ಐ ಪ್ರದೀಪ್ ಹಾಗೂ ಮಹಿಳಾ ಪೇದೆ ಸೋನು ಹೋಟೆಲ್ ಗೆ ಬಂದು ಆಕೆಯನ್ನು ವಂಚನೆ ಪ್ರಕರಣದಲ್ಲಿ ಬಂಧಿಸಿದ್ದಾರೆ. ಹಣದ ಬಗ್ಗೆ ಹೋಟೆಲ್ ಸಿಬ್ಬಂದಿ ಕೇಳಿದಾಗ, ಆಕೆ ಪರಾರಿಯಾಗಲು ಪ್ರಯತ್ನಿಸಿದ್ದಳು ಎಂದು ಅವರು ತಿಳಿಸಿದ್ದಾರೆ. ಆಂಧ್ರಪ್ರದೇಶದ ಝಾನ್ಸಿ ರಾಣಿ ಸ್ಯಾಮ್ಯುಯೆಲ್ ಎಂಬ ಮಹಿಳೆ ಡಿಸೆಂಬರ್ 13 ರಂದು ಹೋಟೆಲ್ ಅನ್ನು ಬುಕ್ ಮಾಡಿದ್ದರು. ಪೊಲೀಸ್ ಅಧಿಕಾರಿಯ ಪ್ರಕಾರ, ಪುಲ್‌ಮನ್ ಹೋಟೆಲ್ ಅಧಿಕಾರಿಗಳು ತಮ್ಮ ದೂರಿನಲ್ಲಿ ಸ್ಯಾಮ್ಯುಯೆಲ್ ಹೋಟೆಲ್ ಸೇವೆಗಳಿಗೆ ಮೋಸದ ಪಾವತಿ ವಿಧಾನಗಳನ್ನು ಬಳಸಿದ್ದಾರೆ ಎಂದು ಹೇಳಿದ್ದಾರೆ.

ಹಣ ನೀಡುವಂತೆ ಕೇಳಿದಾಗ ಆಕೆ ಸಿಬ್ಬಂದಿಯ ಮೇಲೆ ಹಲ್ಲೆ ನಡೆಸಿ ಪರಾರಿಯಾಗಲು ಯತ್ನಿಸಿದ್ದಾಳೆ ಎಂದು ಆರೋಪಿಸಿದ್ದಾರೆ. ಐಪಿಸಿಯ ಸೆಕ್ಷನ್ 420 (ವಂಚನೆ) ಅಡಿಯಲ್ಲಿ ಐಜಿಐ ಏರ್ ಪೋರ್ಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. ಮಹಿಳೆಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಯಿತು ಎಂದು ಅಧಿಕಾರಿ ತಿಳಿಸಿದ್ದಾರೆ. ಈ ಮೊದಲು ಅಂಕುಶ್ ದತ್ತಾ ಎಮಬುವವರ ಹೋಟೆಲ್ ನಲ್ಲಿ 603 ದಿನಗಳಿದ್ದರು, ಚೆಕ್ ಔಟ್ ಮಾಡುವಾಗ ಯಾವುದೇ ಹಣ ನೀಡಿರಲಿಲ್ಲ, 2019ರ ಮೇ 30ರಿಂದ 2021ರ ಜನವರಿ 22ರವರೆಗೆ ಇದ್ದರು

### ವಂಚಕ

ಕೊಟ್ಟಿದ್ದಾರೆ. ಬೆಂಗಳೂರಿನ ಹಲಸೂರಿನಲ್ಲಿ ಈ ಘಟನೆ ನಡೆದಿದೆ.

ಸೋಶಿಯಲ್ ಮೀಡಿಯಾದಲ್ಲಿ ವಿಡಿಯೋ ನೋಡಿದ ವೃದ್ಧ ವಿಡಿಯೋದಲ್ಲಿರುವ ಫೋನ್ ನಂಬರ್ ಗೆ ಕರೆ ಮಾಡಿದ್ದಾನೆ. ತನ್ನ ಬಳಿ 2 ರೂಪಾಯಿ, 5 ರೂಪಾಯಿ ಇದೆ ಎಂದು ತಿಳಿಸಿದ್ದಾನೆ. ವೃದ್ಧನಿಂದ ಕರೆ ಸ್ವೀಕರಿಸಿದ ನಂತರ, ಸೈಬರ್ ಅಪರಾಧಿಗಳು ಇದು ಅಸಲಿ ವ್ಯವಹಾರವೆಂದು ನಂಬಿಸಿದ್ದಾರೆ. ವಿಡಿಯೋ ಕಾಲ್ ಮಾಡಿ ಕೆಲವು ಹಳೆಯ ನಾಣ್ಯಗಳನ್ನು ಎಣಿಸುವ ದೃಶ್ಯಗಳನ್ನು ತೋರಿಸಿದ್ದಾರೆ. ಇದೆ ಮಾದರಿ ನಾಣ್ಯಗಳ ಫೋಟೋ ತೆಗೆದು ಕಳುಹಿಸುವಂತೆ ವೃದ್ಧನಿಗೆ ಸೂಚಿಸಿದ್ದಾರೆ. ಅದರಂತೆ 2 ಮತ್ತು 5 ರೂ ನಾಣ್ಯಗಳು ಮತ್ತು 1 ರೂ ನಾಣ್ಯಗಳ ಫೋಟೋ ತೆಗೆದು ಕಳುಹಿಸಿದ್ದಾರೆ. ಈ ಹಳೆಯ ನಾಣ್ಯಗಳು 1980-1990ರ ಅವಧಿಯಲ್ಲಿ ಚಲಾವಣೆಯಲ್ಲಿದ್ದವು. ಈ ಹಳೆಯ ನಾಣ್ಯಗಳ ಮೇಲೆ ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರ ಆಕೃತಿಯ ಜೊತೆಗೆ ಭಾರತದ ನಕ್ಷೆಯೂ ಇತ್ತು. ಅದನ್ನು ಪರಿವೀಕ್ಷಿಸುವಂತೆ ಮಾಡಿದ ವಂಚಕರು ಆ ಹಳೆಯ ನಾಣ್ಯಗಳು 31 ಲಕ್ಷ ರೂ. ಬಾಳುತ್ತದೆ ಎಂದಿದ್ದಾರೆ.

ಸ್ವಲ್ಪ ಸಮಯದ ನಂತರ, ಸೈಬರ್ ಅಪರಾಧಿಗಳು ವಿವಿಧ ಹೆಸರುಗಳು, ತೆರಿಗೆ ನಿಯಮಗಳನ್ನು ಉಲ್ಲೇಖಿಸುತ್ತಾ ವೃದ್ಧನ ಖಾತೆಯಿಂದ 2.3 ಲಕ್ಷ ರೂ. ಎಗರಿಸಿದ್ದಾರೆ. ಆದರೆ ಅಪರಾಧಿಗಳು ಇನ್ನೂ ಹೆಚ್ಚಿನ ಹಣ ಬೇಕಾದೀತು ಎಂದು ಕೇಳಿದಾಗ ವೃದ್ಧನಿಗೆ ಅನುಮಾನ ಬಂದಿದೆ. ವಂಚಕರು ಕೇಳಿದಷ್ಟು ಹಣ ಕಳುಹಿಸಲು ಆಗುವುದಿಲ್ಲ ಎಂದು ವೃದ್ಧ ಹೇಳಿದ್ದಾರೆ. ಸಂತ್ರಸ್ತೆಯಿಂದ ಹಣ ಪಡೆದ ನಂತರ ಆರೋಪಿಗಳು ಅಲರ್ಟ್ ಆಗಿದ್ದಾರೆ.

ಆದರೂ ಅಷ್ಟಕ್ಕೆ ನಿಲ್ಲದೆ ಮುಂಬೈ ಪೊಲೀಸರ ಹೆಸರಿನಲ್ಲಿ ನಕಲಿ ಕರೆ ಮಾಡಿದ್ದಾರೆ. ತಾವು ಮುಂಬೈ ಪೊಲೀಸ್ ಅಧಿಕಾರಿಗಳು, ನಿಮ್ಮ ಮೇಲೆ ಮನಿ ಲಾಂಡ್ರಿಂಗ್ ಕೇಸ್ ಇದೆ ಎಂದು ಸಂತ್ರಸ್ತ ವೃದ್ಧನಿಗೆ ಮನವರಿಕೆ ಮಾಡಿಕೊಟ್ಟಿದ್ದಾರೆ. ನಿಮ್ಮ ವಿರುದ್ಧ ಅಕ್ರಮ ಹಣ ವರ್ಗಾವಣೆ ಪ್ರಕರಣ ದಾಖಲಾಗಿದೆ ಎಂದು ನಕಲಿ ವಿಡಿಯೋ ಕರೆಯನ್ನೂ ಮಾಡಿ, ಹೆದರಿಸಿದ್ದಾರೆ. ಆಗ ವೃದ್ಧ ಸ್ಥಳೀಯ ಪೊಲೀಸರನ್ನು ಸಂಪರ್ಕಿಸಿದ್ದಾರೆ. ತಾನು ಯಾವುದೇ ತಪ್ಪು ಮಾಡಿಲ್ಲ, ಸೋಶಿಯಲ್ ಮೀಡಿಯಾದಲ್ಲಿ ವಿಡಿಯೋ ನೋಡಿ ಹಣ ಕಳೆದುಕೊಂಡಿದ್ದು, ನೆರವು ನೀಡಿ ಎಂದು ಹಲಸೂರು ಪೊಲೀಸರ ಮೊರೆ ಹೋಗಿದ್ದಾರೆ.

ಸಂತ್ರಸ್ತ ವ್ಯಕ್ತಿಯ ದೂರಿನ ಆಧಾರದ ಮೇಲೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಅಪರಾಧಿಗಳ ದೂರವಾಣಿ ಸಂಖ್ಯೆಗೆ ಕರೆ ಮಾಡಿ ಎಚ್ಚರಿಕೆ ನೀಡಿದ್ದಾರೆ. ಆದರೆ ಮರುದಿನವೂ ಮತ್ತೆ ಸಂತ್ರಸ್ತ ವೃದ್ಧನಿಗೆ ಕರೆ ಮಾಡಿದ ಸೈಬರ್ ಕ್ರಿಮಿನಲ್‌ಗಳು ತಾವು ಕೇಂದ್ರ ತನಿಖಾ ಸಂಸ್ಥೆಯ ಅಧಿಕಾರಿಗಳು ಎಂದು ಹೇಳುತ್ತಾ, ಸ್ಥಳೀಯ ಪೊಲೀಸರಿಗೆ ಹೆದರುವುದಿಲ್ಲ, ಜನವರಿ 20ರೊಳಗೆ ನಿಮ್ಮನ್ನು (ವೃದ್ಧ) ಬಂಧಿಸುವುದಾಗಿ ಬೆದರಿಕೆ ಹಾಕಿದ್ದಾರೆ. ಆಗ ಪೊಲೀಸರು ಐಪಿಸಿ 420 ಅಡಿ ನತ್ತು ಐಟಿ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ

### ವಾಗ್ದಾಳಿ

ಇನ್ನು ಅಪ್ಪ ಅಮ್ಮ ಗೊತ್ತಿಲ್ಲದವರು ಜಾತ್ಯತೀತ ಅಂತಾ ಹೇಳ್ತಾರೆ ಎಂದು ಪರೋಕ್ಷವಾಗಿ ಸಿದ್ದರಾಮಯ್ಯ ವಿರುದ್ಧ ಮತ್ತೊಮ್ಮೆ ಅನಂತ್ ಕುಮಾರ್ ಹೆಗಡೆ ವಾಗ್ದಾಳಿ ನಡೆಸಿದ್ದಾರೆ. ಖಾನಾಪುರ ಪಟ್ಟಣದಲ್ಲಿ ಮಾತನಾಡಿದ ಸಂಸದ ಅನಂತಕುಮಾರ್ ಹೆಗಡೆ ಮತ್ತೆ ಸಿಎಂ ಸಿದ್ದರಾಮಯ್ಯ ವಿರುದ್ಧ ಪರೋಕ್ಷವಾಗಿ ಕಿಡಿಕಾರಿದ್ದಾರೆ.

ಈಗಾಗಲೇ ರಾಮ ಮಂದಿರ ಉದ್ಘಾಟನೆ ಅಕ್ಷತೆ ಮನೆ ಮನೆಗೆ ಹೋಗಿದೆ. ಐನೂರು ವರ್ಷದ ನಂತರ ನಮಗೆ ಜಯ ಸಿಕ್ಕಿದೆ. ರಾಮ ಮಂದಿರವನ್ನು ಯಾರೋ ಉದ್ಯಮಿ, ಕೈಗಾರಿಕೋದ್ಯಮಿಗಳು ಕಟ್ಟಿಲ್ಲ. ಹಳ್ಳಿ ಹಳ್ಳಿಯಿಂದ ಇಟ್ಟಿಗೆ ಕಳಿಸಿದ್ದೇವೆ, ಇಡೀ ದೇಶದ ಜನ ಜಾಗೃತರಾಗಿ ಕಟ್ಟಿದ್ದು. ಅಯೋಧ್ಯ ಹಿಂದೂಗಳ ಪ್ರತೀಕ, ಸೌರಾಷ್ಟ್ರದ ಸೋಮನಾಥ ದೇವಾಲಯ ಸರ್ಕಾರ ಕಟ್ಟಿದ್ದು. ರಾಮ ಮಂದಿರ ಸರ್ಕಾರ ಕಟ್ಟಿಲ್ಲ, ಹಿಂದೂಗಳು ಕಟ್ಟಿದ್ದಾರೆ. ಅಪಮಾನವನ್ನ ತೊಳೆದು ರಾಮ ಮಂದಿರ ಕಟ್ಟಲಾಗಿದೆ. ನಾವು ಹಿಂದೂಗಳು ಎಂದು ಮರೆತು ಹೋಗಿತ್ತು. ಈಗಲೂ ಸಾಕಷ್ಟು ಜನ ತಕ್ಷಣ ಕೇಳಿದ್ರೇ ಅವರ ಜಾತಿ ಹೆಸರು ಹೇಳ್ತಾರೆ. ಹಿಂದೂ ಅಂತಾ ನೆನಪು ಮಾಡಿಕೊಂಡು ಹೇಳ್ತಾರೆ. ಸಂಸ್ಕಾರ ಇದ್ರೇ ಹಿಂದೂ ಅಂತಾ ಹೇಳ್ತಾರೆ. ಕೆಲವು ಮಂದಿ ಜಾತ್ಯತೀತ ಅಂತಾ ಹೇಳ್ತಾರೆ. ಅಪ್ಪ ಅಮ್ಮ ಗೊತ್ತಿಲ್ಲದವರು ಜಾತ್ಯಾತೀತ ಅಂತಾ ಹೇಳ್ತಾರೆ ಎಂದು ಪರೋಕ್ಷವಾಗಿ ಸಿದ್ದರಾಮಯ್ಯ ವಿರುದ್ಧ ಮತ್ತೊಮ್ಮೆ ಅನಂತ್ ಕುಮಾರ್ ಹೆಗಡೆ ವಾಗ್ದಾಳಿ ನಡೆಸಿದ್ದಾರೆ.

ಜಾತಿ ಹೆಸರಲ್ಲಿ, ಭಾಷೆ ಹೆಸರಲ್ಲಿ ನಮ್ಮನ್ನ ಒಡೆದ್ರು. ಮರಾಠಿ, ಕನ್ನಡ ಒಂದಾಗ್ತಾರೆ ಅಂದ್ರೇ ಕತ್ತಿ ತಗೊಂಡು ಬರ್ತಾರೆ. ಈ ರೀತಿ ಒಡೆದು ಇಟ್ರೇ ಅವರ ರಾಜಕಾರಣ ನಡೆಯುವುದು. ಸ್ವಾತಂತ್ರ್ಯದ ನಂತರ ಮರಾಠಿ-ಕನ್ನಡ ಜಗಳ ಶುರುವಾಯಿತು. ಸ್ವಾತಂತ್ರ್ಯ ನಂತರ ಎಲ್ಲದರಲ್ಲೂ ನಮ್ಮನ್ನ ಒಡೆದ್ರು. ಇದನ್ನ ಹೊರತಾಗಿ ಒಟ್ಟಾಗಿ ಒಂದಾಗಿ ಹಿಂದೂ ಹೆಸರಲ್ಲಿ ಎದ್ದು ನಿಂತೆವು. ರಣ ಭೈರವ ರೀತಿಯಲ್ಲಿ ನಾವು ಈಗ ಏಳುತ್ತಿದ್ದೇವೆ. ನಾವು ಏಳ್ತಾಯಿದೀವಿ ಅಂದ ತಕ್ಷಣ ಇಡೀ ಜಗತ್ತು ಅಲ್ಲಾಡಿದೆ ಎದ್ರೇ ಹೇಗಿರಬಹುದು. ಐನೂರು ವರ್ಷದ ಪಾಪವನ್ನ ಇಂದು ತೊಳೆದುಕೊಂಡು ರಾಮ ಮಂದಿರ ಕಟ್ಟುತ್ತಿದ್ದೇವೆ. ಇನ್ನೂ ಕಾಶಿ ಇದೆ, ಮಥುರಾ ಇದೆ ಹಳ್ಳಿ ಹಳ್ಳಿಗಳಲ್ಲಿ ಅಪಮಾನ ಆದ ತುಂಬಾ ದೇವಸ್ಥಾನ ಇವೆ. ಹಳ್ಳಿ ಹಳ್ಳಿಯಲ್ಲಿ ಆಗಿರುವ ಅಪಮಾನ ಸೇಡು ತೀರಿಸಿಕೊಳ್ಳಬೇಕು ಎಂದರು.

## ಭಾರತ ಚುನಾವಣಾ ಆಯೋಗದಿಂದ ಕರ್ನಾಟಕಕ್ಕೆ ಎರಡು ಪ್ರತಿಷ್ಠಿತ ಪ್ರಶಸ್ತಿ

**ಬೆಂಗಳೂರು:** ಭಾರತ ಚುನಾವಣಾ ಆಯೋಗ ಅತ್ಯುತ್ತಮ ಚುನಾವಣಾ ಅಭ್ಯಾಸಗಳನ್ನು ಪ್ರೋತ್ಸಾಹಿಸಲು ಪ್ರತಿವರ್ಷ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ನೀಡುವ ರಾಷ್ಟ್ರಮಟ್ಟದ ಪ್ರಶಸ್ತಿಗೆ ನಮ್ಮ ರಾಜ್ಯದ (ಕರ್ನಾಟಕ) ಇಬ್ಬರು ಅಧಿಕಾರಿಗಳು ಭಾಜನರಾಗಿದ್ದಾರೆ.

2023ನೇ ಸಾಲಿನ ರಾಷ್ಟ್ರಮಟ್ಟದ ಪ್ರಶಸ್ತಿಗಳಿಗೆ ಸಾಮಾನ್ಯ ಪ್ರಶಸ್ತಿ ವರ್ಗದಡಿಯಲ್ಲಿ ಚಿತ್ರದುರ್ಗ ಜಿಲ್ಲೆಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಮುಖ್ಯ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ದಿವ್ಯಾ ಪ್ರಭು ಹಾಗೂ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಸರ್ಕಾರಿ ಇಲಾಖೆ ಅಥವಾ ಸಂಸ್ಥೆಗಳಿಗೆ ನೀಡುವ ಪ್ರಶಸ್ತಿಗೆ ವಾಣಿಜ್ಯ ತೆರಿಗೆ ಇಲಾಖೆಯ ಆಯುಕ್ತರಾದ ಶಿಖಾ.ಸಿ ಅವರು ಪ್ರಶಸ್ತಿಗೆ ಭಾಜನರಾಗಿದ್ದಾರೆ.

ದಿವ್ಯಾ ಅವರು ಮತದಾರರ ಪಟ್ಟಿ ನಿರ್ವಹಣೆಯಲ್ಲಿ ಯುವ ಮತದಾರರ ನೋಂದಣಿ, ವಿಶೇಷ ಮತದಾರರ ನೋಂದಣಿ ಹೆಚ್ಚಳ ಸೇರಿದಂತೆ ಅವರು ಚುನಾವಣೆಯಲ್ಲಿ ನಿರ್ವಹಿಸಿದ ಕಾರ್ಯಗಳ ಮೂಲಕ ರಾಷ್ಟ್ರಮಟ್ಟದಲ್ಲಿ ಅತ್ಯುತ್ತಮರಾಗಿ ಗುರುತಿಸಿಕೊಂಡಿದ್ದನ್ನು ಆಯೋಗ ಪ್ರಶಸ್ತಿಗೆ ಪರಿಗಣಿಸಿದೆ.

ಶಿಖಾ ಅವರು ಕಳೆದ 2023ರ ಸಾಲಿನಲ್ಲಿ ನಡೆದ ರಾಜ್ಯ ವಿಧಾನಸಭಾ ಚುನಾವಣಾ ಸಂದರ್ಭದಲ್ಲಿ ವಾಣಿಜ್ಯ ತೆರಿಗೆ ಆಯುಕ್ತರಾಗಿ ಇಲಾಖೆಯ ಮೂಲಕ ಮತದಾರರಲ್ಲಿ ಉಚಿತ ಉಡುಗೊರೆಗಳ ಕುರಿತು ಹಮ್ಮಿಕೊಂಡಿದ್ದ ಜನಜಾಗೃತಿ, ವಾಣಿಜ್ಯ ಕ್ಷೇತ್ರದಲ್ಲಿ ಚುನಾವಣಾ ನೀತಿ ಸಂಹಿತೆ ಪಾಲನೆ ಸೇರಿದಂತೆ ಕಟ್ಟುನಿಟ್ಟಿನ ಚುನಾವಣೆ ನಡೆಸಲು ಪ್ರಮುಖ ಪಾತ್ರವಹಿಸಿದ್ದಕ್ಕಾಗಿ ಆಯೋಗ ಅವರನ್ನು ಹಾಗೂ ಇಲಾಖೆಯನ್ನು ಈ ಪ್ರಶಸ್ತಿಗೆ ಪರಿಗಣಿಸಿದೆ. ಆಯೋಗವು ಚುನಾವಣೆಗಳಲ್ಲಿ ಕಾರ್ಯನಿರ್ವಹಿಸಿದ ಅಧಿಕಾರಿಗಳನ್ನು ಪ್ರೋತ್ಸಾಹಿಸಲು ಹಾಗೂ ಅವರನ್ನು ಅಭಿನಂದಿಸಲು ಪ್ರತಿ ವರ್ಷ ಸಾಮಾನ್ಯ ವರ್ಗ, ವಿಶೇಷ ವರ್ಗ, ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಸರ್ಕಾರಿ ಇಲಾಖೆ ಅಥವಾ ಸಂಸ್ಥೆಗಳು ಹಾಗೂ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸಿದ ರಾಜ್ಯ ಎಂದು ನಾಲ್ಕು ವಿಭಾಗಗಳಲ್ಲಿ ಪ್ರಶಸ್ತಿಗಳನ್ನು ನೀಡಿ ಗೌರವಿಸುತ್ತದೆ.

## ತಂತ್ರಜ್ಞಾನಕ್ಕೆ ಅನುಗುಣವಾಗಿ ವಿದ್ಯಾರ್ಥಿಗಳನ್ನು ಅಣಿಗೊಳಿಸಿ

**ಪಿರಿಯಾಪಟ್ಟಣ:** ಕಾಲಕಾಲಕ್ಕೆ ತಕ್ಕಂತೆ ಬದಲಾಗುತ್ತಿರುವ ಹೊಸ ತಂತ್ರಜ್ಞಾನ ಮತ್ತು ಕಾನೂನಿಗೆ ಅನುಗುಣವಾಗಿ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ಬದ್ರಭೂನಾದಿ ಹಾಕಬೇಕು ಎಂದು ಹಿರಿಯ ನ್ಯಾಯಾಧೀಶ ಎ.ಸಮೀವುಲ್ಲಾ ತಿಳಿಸಿದರು.

ಪಟ್ಟಣದ ಹರವೆ ಮಲ್ಲರಾಜ ಪಟ್ಟಣದ ಬಸವ ನಿಕೇತನ ಶಾಲಾ ಸಮೂಹಗಳ ವಾರ್ಷಿಕೋತ್ಸವ ಸಮಾರಂಭದಲ್ಲಿ ಮಾತನಾಡಿದರು. ಶಿಕ್ಷಣ ಕ್ಷೇತ್ರದಲ್ಲಿ ಪ್ರತಿದಿನ ಹೊಸಹೊಸ ಕಾನೂನಿಗೆ ತಕ್ಕಂತೆ ಆವಿಷ್ಕಾರ, ತತಂತ್ರಜ್ಞಾನದ ಬದಲಾವಣೆ ನಡೆಯುತ್ತಿದ್ದು ಇದಕ್ಕೆ ತಕ್ಕಂತೆ ಶಿಕ್ಷಕರು ವಿದ್ಯಾರ್ಥಿಗಳನ್ನು ಪ್ರೇರೇಪಿಸಬೇಕು. ಹಿಂದೆ ಶಿಕ್ಷಣದ ವ್ಯವಸ್ಥೆ ಅತ್ಯಂತ ಕಷ್ಟಕರವಾಗಿತ್ತು. ಆದರೆ ಇಂದು ಶಿಕ್ಷಣ ಎಂಬುದು ಎಲ್ಲರ ಕೈಗೆಟುಕುವಂತಹದ್ದಾಗಿದೆ. ಶಿಕ್ಷಣ ಕ್ಷೇತ್ರದಲ್ಲಿ ಹಿಂದೆಂದು ಕಾಣದಷ್ಟು ಬದಲಾವಣೆಗಳು, ಅವಿಷ್ಕಾರಗಳು ಆಗುತ್ತಿವೆ. ಈ ಬದಲಾವಣೆಗೆ ಎಲ್ಲರೂ ಸಿದ್ದರಿರಬೇಕು. ಆಗ ಮಾತ್ರ ನಮ್ಮ ಪ್ರಗತಿ ಸಾಧ್ಯ. ಕಂಪ್ಯೂಟರ್, ಲ್ಯಾಪ್‌ಟಾಪ್, ಮೊಬೈಲ್‌ಗಳು ತಂತ್ರಜ್ಞಾನದ ಫಲವಾಗಿವೆ. ಪೋಷಕರು ವಾಹನ ಖರೀದಿಸುವುದು ದೊಡ್ಡ ವಿಷಯವಲ್ಲ, ಅವುಗಳಿಗೆ ಇನ್ಸೂರೆನ್ಸ್ ಮಾಡಿಸುವುದು ದೊಡ್ಡ ವಿಷಯ, ಕೆಲವೊಮ್ಮೆ ಲಕ್ಷಾಂತರ ಖರ್ಚು ಮಾಡಿ ವಾಹನ ಖರೀದಿ ಮಾಡುವ ನಾವು ಕೇವಲ ಸಾವಿರ ರೂಪಾಯಿ ಕೊಟ್ಟು ಇನ್ಸೂರೆನ್ಸ್ ಮಾಡಿಸದೆ ಕುಟುಂಬವನ್ನೇ ಬೀದಿಗೆ ತಂದಿರುವ ಉದಾಹರಣೆಗಳು ಸಾಕಷ್ಟಿವೆ ಹಾಗಾಗಿ ಯಾವುದೇ ಕುಟುಂಬಗಳಿಗೂ ಈ ಸಮಸ್ಯೆ ಬಾರದಂತೆ ಎಚ್ಚರಿಕೆ ವಹಿಸಬೇಕು ಎಂದು ಮನವಿ ಮಾಡಿದರು.

ಬಸವ ನಿಕೇತನ ಎಜುಕೇಷನ್ ಟ್ರಸ್ಟ್ ಅಧ್ಯಕ್ಷ ಮಾಜಿ ಶಾಸಕ ಹೆಚ್.ಸಿ.ಬಸವರಾಜು ಮಾತನಾಡಿ ಸಮಾಜದಲ್ಲಿ ಮಾನವೀಯ ಮೌಲ್ಯಗಳು ಇತ್ತೀಚಿನ ದಿನದಲ್ಲಿ ಕಣ್ಮರೆಯಾಗುತ್ತಿದೆ. ಆ ಮೌಲ್ಯವನ್ನು ಬೆಳೆಸುವಂತಹ ಶಿಕ್ಷ ಣ ಇಂದಿನ ಸಮಾಜಕ್ಕೆ ಅಗತ್ಯವಿದೆ. ಶಿಕ್ಷ ಣ ಪಡೆಯುವುದು ಉದ್ಯೋಗಕ್ಕಾಗಿ ಎಂಬ ಭಾವನೆ ಉಂಟಾಗಿದೆ. ಇದರಿಂದ ಕುಟುಂಬದಲ್ಲಿ ಹೊಂದಾಣಿಕೆ, ನೆಮ್ಮದಿಯ ಕೊರತೆ ಹೆಚ್ಚುತ್ತಿದೆ. ಶಿಕ್ಷಣದಿಂದ ಉತ್ತಮ ಸಮಾಜ ನಿರ್ಮಾಣವಾಗಬೇಕು ಎಂದರು. ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ನೋಡುಗರ ಕಣ್ಮನ ಸೆಳೆದವು.

ಈ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಜಂಟಿ ನಿರ್ದೇಶಕ ಟಿ.ಸಿ.ವಸಂತ ರಾಜೇ ಅರಸ್, ಸಂಸ್ಥೆಯ ಕಾರ್ಯದರ್ಶಿ ಶಿವಸ್ವಾಮಿ, ಖಜಾಂಚಿ ಮಂಜುನಾಥಸ್ವಾಮಿ, ನಿರ್ದೇಶಕರಾದ ಆರ್.ಎಸ್.ಕುಮಾರವಿ ಜಯ್, ಆದರ್ಶ ಪಟೇಲ್, ಪ್ರಸನ್ನ ಸದಾಶಿವಯ್ಯ, ಆರ್.ಎಸ್.ವೀರಣ್ಣ, ಆರ್ .ವಿ.ಗಣೇಶ್, ಸಹನಾ ಪ್ರಸನ್ನ, ಸಂಪನ್ಮೂಲ ವ್ಯಕ್ತಿ ರವಿಕುಮಾರ್ ಪ್ರಾಂಶುಪಾಲ ರುದ್ರೇಶ್, ಶಿಕ್ಷಕ ಲೋಕೇಶ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಹೊಸದಾಗಿ ಆಯೋಗದ ಕಾನೂನು ಕೋಶದ ಮುಖ್ಯಸ್ಥರ ಗುತ್ತಿಗೆ ಆಧಾರದ ಅಧಿಸೂಚನೆ ರದ್ದು

**ಬೆಂಗಳೂರು:** ಕೆಪಿಎಸ್‌ಸಿ ಆಯೋಗದ ಅಧ್ಯಕ್ಷರು ಹಾಗೂ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳೆಲ್ಲರೂ ಚರ್ಚಿಸಿ ಈಗಾಗಲೇ ನೇಮಕಾತಿ ಪೂರ್ಣಗೊಂಡಿರುವ ಕಾನೂನು ಕೋಶದ ಮುಖ್ಯಸ್ಥರ ಹುದ್ದಗೆ ಈ ಹಿಂದೆ ನವೆಂಬರ್ 15, 2023 ರಂದು ಜಾರಿ ಮಾಡಿರುವ ಅಧಿಸೂಚನೆಯನ್ನು ಹಿಂಪಡೆದಿರುವುದು ಮತ್ತು ಸದರಿ ಹುದ್ದೆಗೆ ಆಯೋಗದ ಗಮನಕ್ಕೆ ತರದೇ ಹೊಸದಾಗಿ ನೇಮಕಾತಿ ಆರಂಭಿಸಲು ಜನವರಿ 9, 2024 ರಂದು ಕಾರ್ಯವ್ಯಾಪ್ತಿಯನ್ನು ಮೀರಿ ಅಧಿಸೂಚನೆಯನ್ನು ಜಾರಿ ಮಾಡಿರುವುದನ್ನು ರದ್ದುಪಡಿಸಿ ಅದನ್ನು ಆಯೋಗದ ವೆಬ್ ಸೈಟ್‌ನಲ್ಲಿ ಪ್ರಕಟಿಸಬೇಕೆಂದು ನಿರ್ಣಯಿಸಲಾಯಿತು. ಜನವರಿ 9, 2024 ರಂದು ಆಯೋಗದ ಕಾರ್ಯದರ್ಶಿಯವರು ಜಾರಿ ಮಾಡಿರುವ ಅಧಿಸೂಚನೆಯು, ಆಯೋಗದ ಗಮನಕ್ಕೆ ತರದೇ ಮತ್ತು ಆಯೋಗದ ನಿರ್ಣಯವಿಲ್ಲದೇ ಹೊರಡಿಸಿರುವುದು ಕ್ರಮಬದ್ಧವಾಗಿಲ್ಲದ ಕಾರಣ ಅಧಿಸೂಚನೆಯನ್ನು ಆಯೋಗವು ರದ್ದುಪಡಿಸಿ ನಿರ್ಣಯಿಸಿದೆ ಎಂದು ಕೆಪಿಎಸ್‌ಸಿ ಆಯೋಗದ ಅಧ್ಯಕ್ಷರಾದ ಶಿವಶಂಕರಪ್ಪ ಎಸ್.ಸಾಹುಕಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಿಪ್ಪೇಸ್ವಾಮಿ.ಆರ್ ಅವರಿಗೆ ಪಿ.ಎಚ್.ಡಿ ಪದವಿ ಪ್ರದಾನ

**ಬೆಂಗಳೂರು:** ಉಪನ್ಯಾಸಕರಾದ ತಿಪ್ಪೇಸ್ವಾಮಿ.ಆರ್ ಅವರು ಬೆಂಗಳೂರಿನ ಸರ್ಕಾರಿ ರಾಂನಾರಾಯಣ್ ಚೆಲ್ಲಾರಾಂ ವಾಣಿಜ್ಯ ಮತ್ತು ನಿರ್ವಹಣಾ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ.ಡಿ.ಕೆ ನಟರಾಜ ಅವರ ಮಾರ್ಗದರ್ಶನದಲ್ಲಿ ಹಂಪಿ ಕನ್ನಡ ವಿಶ್ವವಿದ್ಯಾಲಯದ ಕನ್ನಡ ಸಾಹಿತ್ಯ ಅಧ್ಯಯನ ವಿಭಾಗದಲ್ಲಿ ಸ್ವಾತಂತ್ರ್ಯೋತ್ತರದಲ್ಲಿ ಕನ್ನಡಕ್ಕೆ ಅನುವಾದಗೊಂಡ ಪಾಶ್ಚಿಮಾತ್ಯ ನಾಟಕಗಳ ಅಧ್ಯಯನ ಎಂಬ ವಿಷಯದ ಮೇಲೆ ಮಂಡಿಸಿದ ಮಹಾಪ್ರಬಂಧಕ್ಕೆ 'ಕನ್ನಡ ವಿಶ್ವವಿದ್ಯಾಲಯವು (ಹಂಪಿ)' ಪಿ.ಎಚ್.ಡಿ ಪದವಿಯನ್ನು ಪ್ರಧಾನ ಮಾಡಿದೆ.

## ಜ.28 ರಂದು ಸಶಸ್ತ್ರ ಪೊಲೀಸ್ ಕಾನ್‌ಸ್ಟೇಬಲ್ ಪರೀಕ್ಷೆ

**ಮಂಡ್ಯ:** ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಸಿಎಆರ್ ಮತ್ತು ಡಿಎಆರ್) (ಪುರುಷ ಮತ್ತು ತೃತೀಯ ಲಿಂಗ ಪುರುಷ) 3064 ಹುದ್ದೆಗಳಿಗೆ ಲಿಖಿತ ಪರೀಕ್ಷೆಯನ್ನು ಜನವರಿ 28 ರಂದು ಬೆಳಿಗ್ಗೆ 11.00 ರಿಂದ 12.30 ಗಂಟೆಯವರೆಗೆ ರಾಜ್ಯಾದ್ಯಂತ ನಡೆಯಲಿದೆ. ಲಿಖಿತ ಪರೀಕ್ಷೆಗೆ ಅರ್ಹರಿರುವ ಅಭ್ಯರ್ಥಿಗಳಿಗೆ ಕರೆ ಪತ್ರದ ಬಗ್ಗೆ ಮುಂಬರುವ ದಿನಗಳಲ್ಲಿ ಎಸ್.ಎಂ.ಎಸ್. ಮೂಲಕ ಮಾಹಿತಿಯನ್ನು ನೀಡಲಾಗುವುದು ಹಾಗೂ ಕರೆ ಪತ್ರದ ಲಿಂಕ್‌ನ್ನು ಸಹ ಕಳುಹಿಸಲಾಗುವುದು. ಅಭ್ಯರ್ಥಿಗಳು ಕರೆಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ನಿಗಧಿಪಡಿಸಿದ ದಿನಾಂಕದಂದು ಲಿಖಿತ ಪರೀಕ್ಷೆಗೆ ಹಾಜರಾಗಬೇಕು ಎಂದು ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಮಾನ್ಯ ಸಭೆ ಅಧ್ಯಕ್ಷತೆ ವಹಿಸಿದ ರಾಜ್ಯಪಾಲರು

**ಬೆಂಗಳೂರು:** ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಯ ಸಂಸ್ಥೆ (ಐಎಸ್‌ಇಸಿ) ಅಭಿವೃದ್ಧಿಗೆ ಸಂಪನ್ಮೂಲ ಸಾಮರ್ಥ್ಯದ ಮೇಲೆ ವ್ಯವಸ್ಥಿತ ಅಧ್ಯಯನಗಳನ್ನು ನಡೆಸಿ, ಅಭಿವೃದ್ಧಿಯ ಮೇಲೆ ಪರಿಣಾಮ ಬೀರುವ ಅಂಶಗಳನ್ನು ಗುರುತಿಸಿದೆ, ಅಂತರ್ಗತ ಬೆಳವಣಿಗೆ ಮತ್ತು ಬಡತನ ಕಡಿತದ ಕ್ರಮಗಳನ್ನು ಅಧ್ಯಯನ ಮಾಡುವ ಮೂಲಕ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ಸಹಾಯ ಮಾಡಿದೆ ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.



ಬೆಂಗಳೂರಿನಲ್ಲಿ ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಯ ಸಂಸ್ಥೆ (ಐಎಸ್‌ಇಸಿ) 51 ನೇ ವಾರ್ಷಿಕ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ರಾಜ್ಯಪಾಲರು, ಕರ್ನಾಟಕ ಸರ್ಕಾರಕ್ಕೆ ಐಎಸ್‌ಇಸಿ ನ ಕೊಡುಗೆ ವಿಶೇಷವಾಗಿ ಹಿಂದುಳಿದ ಮತ್ತು ದುರ್ಬಲ ವರ್ಗಗಳ ಉನ್ನತಿಗಾಗಿ ನೀತಿಗಳನ್ನು ರೂಪಿಸುವಲ್ಲಿ ಮತ್ತು ಸಾಮಾಜಿಕ ಕಾರಣಗಳನ್ನು ಉತ್ತೇಜಿಸುವಲ್ಲಿ ಮತ್ತು ಸರ್ಕಾರವು ಜಾರಿಗೊಳಿಸಿದ ನೀತಿಗಳು ಮತ್ತು ಕಾರ್ಯಕ್ರಮಗಳನ್ನು ಮೌಲ್ಯಮಾಪನ ಮಾಡುವಲ್ಲಿ ಅನುಕರಣೀಯವಾಗಿದೆ. ಕರ್ನಾಟಕ ಸರ್ಕಾರ ಮತ್ತು ಭಾರತ ಸರ್ಕಾರ ಮತ್ತು ಇತರ ಏಜೆನ್ಸಿಗಳಿಂದ ಬೆಂಬಲಿತ ಸಂಶೋಧನಾ ಅಧ್ಯಯನಗಳ ಕುರಿತು ಒಂಬೈನೂರಕ್ಕೂ ಹೆಚ್ಚು ವರದಿಗಳನ್ನು ಸಂಸ್ಥೆ ಪ್ರಕಟಿಸಿದೆ ಎಂದು ಹೇಳಿದರು.

ಜ್ಞಾನ ಮತ್ತು ಸಂಶೋಧನೆಯ ವಿನಿಮಯಕ್ಕಾಗಿ ಐಎಸ್‌ಇಸಿ ದೇಶಾದ್ಯಂತ ಮತ್ತು ಪ್ರಪಂಚದಾದ್ಯಂತದ ಪ್ರತಿಷ್ಠಿತ ವಿಶ್ವವಿದ್ಯಾಲಯಗಳು ಮತ್ತು ಸಂಸ್ಥೆಗಳೊಂದಿಗೆ ಪಾಲುದಾರಿಕೆ ಹೊಂದಿದೆ ಎಂಬುದನ್ನು ಗಮನಿಸಲು ನನಗೆ ಸಂತೋಷವಾಗಿದೆ. ಮಾನವ ಸಂಪನ್ಮೂಲ ಸಾಮರ್ಥ್ಯವನ್ನು ಬೆಳೆಸುವಲ್ಲಿ ಸಂಸ್ಥೆಯು ಪ್ರಮುಖ ಪಾತ್ರ ವಹಿಸುತ್ತಿದೆ. ಸಮಾಜ ವಿಜ್ಞಾನದಲ್ಲಿ ಸಂಶೋಧನೆ ಮಾಡಲು ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳನ್ನು ಪ್ರೇರೇಪಿಸಿದೆ. ಐಎಸ್‌ಇಸಿ, ಶ್ರೇಷ್ಠತೆಯ ಕೇಂದ್ರವಾಗಿ, ಮುಂಬರುವ ವರ್ಷಗಳಲ್ಲಿ ಉನ್ನತ ಸಾಮಾಜಿಕ ಸಂಶೋಧನಾ ಸಂಸ್ಥೆಗಳಲ್ಲಿ ಒಂದಾಗಿದೆ ಮತ್ತು ರಾಷ್ಟ್ರ ಮತ್ತು ರಾಜ್ಯದ ಒಟ್ಟಾರೆ ಅಭಿವೃದ್ಧಿಗೆ ಕೊಡುಗೆ ನೀಡುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಐಎಸ್‌ಇಸಿ ಉಪಾಧ್ಯಕ್ಷ ಸುಖದೇವ್ ಥೋರಟ್, ನಿರ್ದೇಶಕ ಪೊ?ರ. ಡಿ. ರಾಜಶೇಖರ್ ಮತ್ತು ಇತರ ಗಣ್ಯರು ಸಮಾರಂಭದಲ್ಲಿ ಭಾಗವಹಿಸಿದ್ದರು.

## ಬಹುಮಾನಕ್ಕಾಗಿ ಕೃತಿಗಳ ಆಹ್ವಾನ

**ಬೆಂಗಳೂರು:** ಕರ್ನಾಟಕ ಸಾಹಿತ್ಯ ಅಕಾಡೆಮಿಯು ಪ್ರತಿ ವರ್ಷದಂತೆ 2022ನೆಯ ವರ್ಷದ ಪುಸ್ತಕ ಬಹುಮಾನ ಯೋಜನೆಗಾಗಿ ವಿವಿಧ ಪ್ರಕಾರಗಳ ಕನ್ನಡ ಪುಸ್ತಕಗಳನ್ನು ಸಲ್ಲಿಸಲು ಅರ್ಜಿ ಆಹ್ವಾನಿಸಿದೆ. ಕಾವ್ಯ, ನವಕವಿಗಳ ಪ್ರಥಮ ಕವನಸಂಕಲನ, ಕಾವ್ಯ ಹಸ್ತಪ್ರತಿ, ಕಾದಂಬರಿ, ಸಣ್ಣ ಕಥೆ, ನಾಟಕ, ಲಲಿತ ಪ್ರಬಂಧ, ಪ್ರವಾಸ ಸಾಹಿತ್ಯ, ಜೀವನ ಚರಿತ್ರೆ/ಆತ್ಮಕಥೆ, ಸಾಹಿತ್ಯ ವಿಮರ್ಶೆ, ಗ್ರಂಥ ಸಂಪಾದನೆ, ಮಕ್ಕಳ ಸಾಹಿತ್ಯ, ವಿಜ್ಞಾನ ಸಾಹಿತ್ಯ, ಮಾನವಿಕ ಸಂಶೋಧನೆ, ವೈಚಾರಿಕ / ಅಂಕಣ ಬರಹ, ಅನುವಾದ-1 (ಇಂಗ್ಲೀಷ್ ಸೇರಿದಂತೆ ಭಾರತೀಯ ಭಾಷೆಯಿಂದ ಕನ್ನಡಕ್ಕೆ ಅನುವಾದಗೊಂಡ ಸೃಜನೆ/ಸೃಜನೇತರ ಕೃತಿಗಳು) ಅನುವಾದ-2 (ಕನ್ನಡದಿಂದ ಅನ್ಯ ಭಾಷೆಗೆ ಅನುವಾದಗೊಂಡ ಸೃಜನೆ/ಸೃಜನೇತರ ಕೃತಿಗಳು), ಲೇಖಕರ ಮೊದಲ ಸ್ವತಂತ್ರ ಕೃತಿ, ಕನ್ನಡದಿಂದ ಆಂಗ್ಲ ಭಾಷೆಗೆ ಅನುವಾದವಾದ ಕೃತಿ, ದಾಸ ಸಾಹಿತ್ಯ ಹಾಗೂ ಸಂಕೀರ್ಣ ಪ್ರಕಾರಗಳಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

ಪ್ರತಿ ಪ್ರಕಾರದಲ್ಲಿ ವಿಮರ್ಶಕರು ಆಯ್ಕೆ ಮಾಡುವ ಒಂದು ಕೃತಿಗೆ ಬಹುಮಾನ ನೀಡಲಾಗುವುದು. ಬಹುಮಾನಕ್ಕೆ ಸಲ್ಲಿಸುವ ಕೃತಿಗಳು 2022ರ ಜನವರಿ 01 ರಿಂದ 2022ರ ಡಿಸೆಂಬರ್ 31 ರೊಳಗೆ ಪ್ರಥಮ ಆವೃತ್ತಿಯಾಗಿ ಪ್ರಕಟವಾಗಿರುವ ಕೃತಿಗಳಾಗಿರಬೇಕು. ಕೃತಿಯಲ್ಲಿ ಪ್ರಥಮ ಮುದ್ರಣ 2022 ಎಂದು ಮುದ್ರಿತವಾಗಿರಬೇಕು.

**ಬಹುಮಾನಕ್ಕಾಗಿ ಪರಿಗಣಿಸಲ್ಪಡದ ಕೃತಿಗಳು:** ಮರುಮುದ್ರಣವಾದ ಪುಸ್ತಕಗಳು, ಪಿಎಚ್.ಡಿ ಪದವಿಗಾಗಿ ಸಿದ್ಧಪಡಿಸಿದ ಸಂಶೋಧನಾ ಗ್ರಂಥಗಳು, ಪಠ್ಯಪುಸ್ತಕಗಳು, ಅಕಾಡೆಮಿಯ ಗೌರವ ಪ್ರಶಸ್ತಿ ಪುರಸ್ಕೃತ ಸಾಹಿತಿಗಳ ಕೃತಿಗಳು, ಈಗಾಗಲೇ ಕರ್ನಾಟಕ ಸಾಹಿತ್ಯ ಅಕಾಡೆಮಿಯಿಂದ ಒಟ್ಟಾರೆ ಮೂರು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳು, ಒಂದು ಪ್ರಕಾರದಲ್ಲಿ ಒಂದು ಬಾರಿ ಪುಸ್ತಕ ಬಹುಮಾನ ಪಡೆದವರ ಕೃತಿಗಳನ್ನು ಮತ್ತು ಅದೇ ಪ್ರಕಾರದಲ್ಲಿ ಮುಂದಿನ ಮೂರು ವರ್ಷದವರೆಗೆ ಪರಿಗಣಿಸುವುದಿಲ್ಲ, ಒಬ್ಬ ಲೇಖಕರಿಗೆ ಮೂರು ಬಾರಿ ಬೇರೆ ಬೇರೆ ಪ್ರಕಾರಗಳಲ್ಲಿ ಬಹುಮಾನ ಪಡೆಯುವ ಅವಕಾಶವಿದೆ.

ಈ ಅವಧಿಯಲ್ಲಿ ಪ್ರಕಟವಾದ ಪುಸ್ತಕಗಳ ತಲಾ 4 ಪ್ರತಿಗಳನ್ನು ರಿಜಿಸ್ಟ್ರಾರ್, ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು-560002 ಇವರಿಗೆ ರಿಜಿಸ್ಟರ್ಡ್ ಅಂಚೆ / ಕೊರಿಯರ್ ಮೂಲಕ ಅಥವಾ ಖುದ್ದಾಗಿ ಫೆಬ್ರವರಿ 20 ರೊಳಗೆ ತಲುಪಿಸಬೇಕು.

ಬಹುಮಾನಕ್ಕಾಗಿ ಕಳುಹಿಸುವ ಕೃತಿಯ ಮೇಲೆ ಯಾವ ಪ್ರಕಾರಗಳಲ್ಲಿ ಯಾವ ಸಾಹಿತ್ಯ ಪ್ರಕಾರಕ್ಕೆ ಸೇರುತ್ತದೆ ಎಂಬುವುದನ್ನು ಸ್ಪಷ್ಟವಾಗಿ ಪುಸ್ತಕದ ಶೀರ್ಷಿಕೆ ಪುಟದಲ್ಲಿ ಬರೆದಿರಬೇಕು ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಕರಿಯಪ್ಪ ಎನ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾಧಿಕಾರಿ ಡಾ. ಕುಮಾರ ಹೇಳಿಕೆ

## ರಾಷ್ಟ್ರೀಯ ಬಾಲಕ-ಬಾಲಕಿಯರ ಕಬಡ್ಡಿ

**ಮಂಡ್ಯ:** ಜಿಲ್ಲೆಯಲ್ಲಿ 67ನೇ ರಾಷ್ಟ್ರಮಟ್ಟದ ಬಾಲಕ-ಬಾಲಕಿಯರ ಕಬಡ್ಡಿ(ಗ -19) ಪಂದ್ಯಾವಳಿ ಜನವರಿ 23 ರಿಂದ 27 ರವರೆಗೆ ಆದಿಚುಂಚನಗಿರಿ ಕ್ರೀಡಾಂಗಣದಲ್ಲಿ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ 67ನೇ ರಾಷ್ಟ್ರಮಟ್ಟದ ಬಾಲಕ-ಬಾಲಕಿಯರ ಕಬಡ್ಡಿ ಪಂದ್ಯಾವಳಿಯ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. 5 ದಿನಗಳ ಕಾಲ ನಡೆಯಲಿರುವ ರಾಷ್ಟ್ರಮಟ್ಟದ ಬಾಲಕ-ಬಾಲಕಿಯರ ಕಬಡ್ಡಿ(ಗ-19) ಪಂದ್ಯಾವಳಿಗೆ ಹೊರ ರಾಜ್ಯದಿಂದ ಬರುವ ಆಟಗಾರರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಕಬ್ಬಡ್ಡಿ ಪಂದ್ಯಾವಳಿಯಲ್ಲಿ ಬಾಲಕರ ವಿಭಾಗದಲ್ಲಿ 35 ತಂಡ ಹಾಗೂ ಬಾಲಕಿಯರ ವಿಭಾಗದಲ್ಲಿ 30 ರಿಂದ 35 ತಂಡಗಳು ಭಾಗವಹಿಸುವ ನಿರೀಕ್ಷೆಯಿದೆ. ಪ್ರತಿ ತಂಡಕ್ಕೆ ಒಬ್ಬ ಜನರಲ್ ಮ್ಯಾನೇಜರ್ ಹಾಗೂ ಒಬ್ಬ ಕೋಚ್ ಇದ್ದು, ಅವರು ಕ್ರೀಡಾಪಟುಗಳ ಸಂಪೂರ್ಣ ಜವಾಬ್ದಾರಿಯನ್ನು ಹೊಂದಿರಬೇಕು. ರಾತ್ರಿ ಸಮಯದಲ್ಲಿ ಅವರಿಗೆ ಉತ್ತಮ ಬಂದೋಬಸ್ತ್ ವ್ಯವಸ್ಥೆ ಮಾಡಬೇಕು ಎಂದರು. ಭಾಗವಹಿಸುವ ಆಟಗಾರರಿಗೆ ಬಸ್ ವ್ಯವಸ್ಥೆ, ಆಹಾರ, ವಸತಿ, ಆಂಬುಲೆನ್ಸ್, ಮೆಡಿಕಲ್ ( 4 ವೈದ್ಯರು ಹಾಗೂ ನರ್ಸ್ ಒಳಗೊಂಡಂತೆ) ವ್ಯವಸ್ಥೆಗಳನ್ನು ಕಲ್ಪಿಸಿ ಅವರಿಗೆ ಯಾವುದೇ ಅಹಿತಕರ ಅನುಭವ ಆಗದಂತೆ ಎಚ್ಚರ ವಹಿಸಿ ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು. ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಚೆಲುವಯ್ಯ, ಉಪ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮೀನಾರಾಯಣ, ಆದಿ ಚುಂಚನಗಿರಿ ಶಿಕ್ಷಣ ಸಂಸ್ಥೆಯ ದೈಹಿಕ ಶಿಕ್ಷಣ ಅಧಿಕಾರಿ ಪರಮ ಶಿವಯ್ಯ, ನೋಡಲ್ ಅಧಿಕಾರಿ ಶಿವಪ್ಪ, ಮಂಡ್ಯ ಪದವಿ ಪೂರ್ವ ಶಾಲಾ ಶಿಕ್ಷಣ ಪ್ರಾಂಶುಪಾಲರ ಸಂಘದ ಅಧ್ಯಕ್ಷ ಬೈರೇಶ್, ಪದವಿ ಪೂರ್ವ ಶಾಲಾ ಶಿಕ್ಷಣ ಉಪನ್ಯಾಸಕ ಸಂಘದ ಅಧ್ಯಕ್ಷ ಚೆನ್ನಕೃಷ್ಣ, ಜಿಲ್ಲಾ ಕ್ರೀಡಾ ಸಂಯೋಜಕರು ಎಸ್.ಎಂ ಗುರುಸ್ವಾಮಿ ಹಾಗೂ ಇನ್ನಿತರು ಉಪಸ್ಥಿತರಿದ್ದರು.



### 25 ರಂದು ರಾಷ್ಟ್ರೀಯ ಮತದಾರರ ದಿನಾಚರಣೆ

**ಮಂಡ್ಯ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ಜನವರಿ 25 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ನ ಕಾವೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆ ಯನ್ನು ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ತಿಳಿಸಿದರು.**

**ಅವರು ಇಂದು ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಮತದಾರರ ದಿನಾಚರಣೆ ಪೂರ್ವಭಾವಿ ಸಭೆ ನಡೆಸಿ ಮಾತನಾಡಿದರು. 18 ವರ್ಷ ತುಂಬಿದ ಯುವ ಮತದಾರರನ್ನು ಮತದಾರರ ಪಟ್ಟಿಗೆ ಹೆಸರು ನೋಂದಾಯಿಸಿಕೊಳ್ಳುವಂತೆ ಉತ್ತೇಜಿಸುವುದು, ಮತದಾನ ಪ್ರಕ್ರಿಯೆ ಯಲ್ಲಿ ಪಾಲ್ಗೊಂಡು ಮತದಾನ ಮಾಡುವುದರ ಬಗ್ಗೆ ಜಾಗೃತಿ ಮೂಡಿಸುವುದು ರಾಷ್ಟ್ರೀಯ ಮತದಾರರ ದಿನಾಚರಣೆಯ ಮೂಲ ಉದ್ದೇಶವಾಗಿದೆ ಎಂದರು. ಯುವ ಮತದಾರರನ್ನು ಕೇಂದ್ರೀಕೃತವಾಗಿಟ್ಟುಕೊಂಡು ಮತದಾನ ಪ್ರಕ್ರಿಯೆ ಹೆಚ್ಚಳ ಮಾಡುವ ನಿಟ್ಟಿನಲ್ಲಿ ಯುವ ಮತದಾರರಿಗೆ ಜಾಗೃತಿ ಮೂಡಿಸಬೇಕು ಎಂದರು. ಚುನಾವಣಾ ಆಯೋಗದ ನಿರ್ದೇಶನದಂತೆ ರಾಷ್ಟ್ರೀಯ ಮತದಾರರ ದಿನಾಚರಣೆ ಯಅಂಗವಾಗಿ ಸ್ಪರ್ಧಾತ್ಮಕ ಚಟುವಟಿಕೆಗಳನ್ನು ಪ್ರೌಢ ಶಾಲೆ, ಪದವಿ ಪೂರ್ವ ಕಾಲೇಜು ಹಾಗೂ ಪದವಿ ಕಾಲೇಜು ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆ ಗಳನ್ನು ಆಯೋಜಿಸಲಾಗಿದ್ದು ವಿಜೇತರಿಗೆ ಜನವರಿ 25 ರಂದು ನಡೆಯುವ ಕಾರ್ಯ ಕ್ರಮದಲ್ಲಿ ಬಹುಮಾನ ವಿತರಿಸಲಾಗುವುದು ಎಂದರು. ಜಿಲ್ಲೆಯ ಯುವ ಮತದಾರರನ್ನು ಗುರುತಿಸಿ ಮತದಾನ ನೋಂದಣಿ ಮಾಡಿಸಲು ಕ್ರಮವಹಿಸಿ. ಈಗಾಗಲೇ ನೊಂದಣಿ ಮಾಡಿಕೊಂಡಿರುವ ಯುವ ಮತದಾರರಿಗೆ ಚುನಾವಣಾ ಗುರುತಿನ ಚೀಟಿಯನ್ನು ತಲುಪಿಸಿ ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್ ಮಾತನಾಡಿ ಮತದಾರರು ತಮ್ಮ ಬಳಿ ಚುನಾವಣಾ ಗುರುತಿನ ಚೀಟಿ ಇದ್ದರೂ ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇರುವುದನ್ನು ಖಾತ್ರಿ ಪಡಿಸಿಕೊಳ್ಳಬೇಕು ಎಂದರು. ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಚೆಲುವಯ್ಯ, ನಗರಾಭಿವೃದ್ಧಿ ಕೋಶದ ಯೋಜನ ನಿರ್ದೇಶಕಿ ತುಷಾರಮಣಿ, ವಾರ್ತಾ ಮತ್ತು ಸಂಪರ್ಕ ಸಾರ್ವಜನಿಕ ಇಲಾಖೆಯ ಸಹಾಯಕ ನಿರ್ದೇಶಕಿ ಎಸ್.ಎಚ್ ನಿರ್ಮಲ, ಚುನಾವಣಾ ತಹಶೀಲ್ದಾರ್ ಬಿ.ಎಸ್ ವೆಂಕಟಚಲಪತಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.**

## ಕನಿಷ್ಠ ಬೆಂಬಲ ಯೋಜನೆಯಡಿ ಗುಣಮಟ್ಟದ ಉಂಡೆ ಕೊಬ್ಬರಿ ಖರೀದಿಗೆ ಶೀಘ್ರವೇ ನೋಂದಣಿ

**ಮಂಡ್ಯ:** 2024 ನೇ ಸಾಲಿನ ಕನಿಷ್ಟ ಬೆಂಬಲ ಯೋಜನೆಯಡಿಯಲ್ಲಿ ಎಫ್ ಎ ಕ್ಯೂ ಗುಣಮಟ್ಟದ ಉಂಡೆಕೊಬ್ಬರಿಗೆ ಸರ್ಕಾರವು ಪ್ರತಿ ಕ್ವಿಂಟಾಲಿಗೆ ರೂ.12000 ರಂತೆ ಕನಿಷ್ಟ ಬೆಂಬಲ ಬೆಲೆ ಘೋಷಿಸಿದ್ದು, ನೊಂದಣಿ ಪ್ರಕ್ರಿಯೆ ಶೀಘ್ರವೇ ಪ್ರಾರಂಭವಾಗಲಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಎಂ ಕೃಷ್ಣಕುಮಾರ ಅವರು ತಿಳಿಸಿದರು.

ಇಂದು ಜಿಲ್ಲಾಧಿಕಾರಿ ಕಛೇರಿ ಸಭಾಂಗಣದಲ್ಲಿ ರೈತರಿಗೆ ನೇರವಾಗಿ ಉಂಡೆ ಕೊಬ್ಬರಿಯನ್ನು ಖರೀದಿಸುವ ಸಂಬಂಧ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆ ನಡೆಸಿ ಮಾತನಾಡಿದರು.

ಸರ್ಕಾರದ ಆದೇಶದಂತೆ ಗುಣಮಟ್ಟದ ಉಂಡೆ ಕೊಬ್ಬರಿಯನ್ನು ರೈತರಿಂದ ನೇರವಾಗಿ ಕರ್ನಾಟಕ ಸರ್ಕಾರದ ಸಹಕಾರ ಮಾರಾಟ ಮಹಾ ಮಂಡಳಿ ನಿಯಮಿತದವರು ಖರೀದಿ ಪ್ರಕ್ರಿಯೆ ನಡೆಸಲಿದ್ದು, ಕೆ.ಆರ್.ಪೇಟೆ -1, ಪಾಂಡವಪುರ-1 ಹಾಗೂ ನಾಗಮಂಗಲ-2 ಸೇರಿದಂತೆ ಒಟ್ಟು 4 ನೊಂದಣಿ ಕೇಂದ್ರ ತೆರಲಾಗುವುದು.

ನೊಂದಣಿ ನಂತರ ಮಾರಾಟದಾರರಿಂದ ಖರೀದಿಸಲು ನಾಗಮಂಗಲ ಹಾಗೂ ಕೆ.ಆರ್ ಪೇಟೆಯಲ್ಲಿ ಒಟ್ಟು 2 ಖರೀದಿ ಕೇಂದ್ರ ತೆರೆಯಲಾಗುವುದು ಎಂದರು.

ನೊಂದಣಿ ಹಾಗೂ ಖರೀದಿಗೆ ಬೇಕಿರುವ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಿ, ಖರೀದಿ ಕೇಂದ್ರಗಳಲ್ಲಿ ಅಗತ್ಯ ಮೂಲಭೂತ ವ್ಯವಸ್ಥೆಗಳನ್ನು ಮಾಡಿಕೊಳ್ಳಬೇಕು. ಖರೀದಿ ಕೇಂದ್ರಕ್ಕೆ ವಿದ್ಯುನ್ಮಾನ ತೂಕದಯಂತ್ರ, ಮೇಜು, ಕುರ್ಚಿಗಳನ್ನು ಒದಗಿಸಿ ಎಂದರು.

ಸಭೆಯಲ್ಲಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಅಶೋಕ್, ಎ.ಪಿ.ಎಂ.ಸಿ ಕಾರ್ಯದರ್ಶಿ ರೇವತಿ, ಆಹಾರ ಇಲಾಖೆಯ ಸಹಾಯಕ ನಿರ್ದೇಶಕ ಶ್ರೀನಿವಾಸ್, ವಾರ್ತಾಧಿಕಾರಿ ಎಸ್ ಹೆಚ್ ನಿರ್ಮಲ ಉಪಸ್ಥಿತರಿದ್ದರು.

## ಜ.19 ರಂದು ನೇರ ಸಂದರ್ಶನ

**ಮಂಡ್ಯ:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜೆ.ವಿ.ಎಸ್ ಎಲೆಕ್ಟ್ರಾನಿಕ್ಸ್ ಪ್ರೈ, ಮಹೀಂದ್ರ ಇಂಡಿಯಾ ಗ್ಯಾರೇಜ್, ವೆನ್ಸನ್ ಎಲೆಕ್ಟ್ರಿಕ್ ಪ್ರೈ. ಮತ್ತು ಉದ್ಯೋಗ ವಾಹಿನಿ ಸಂಸ್ಥೆಗಳ ಸಹಭಾಗಿತ್ವದಲ್ಲಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಆವರಣದಲ್ಲಿ ಜನವರಿ 19 ರಂದು ಬೆಳಿಗ್ಗೆ 10:30 ಕ್ಕೆ ಉದ್ಯೋಗಕ್ಕಾಗಿ ನೇರ ಸಂದರ್ಶನ ನಡೆಯಲಿದೆ.

ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಐ.ಟಿ.ಐ, ಡಿಪ್ಲೋಮೋ ಇನ್ ಆಟೋಮೊಬೈಲ್ ಹಾಗೂ ಯಾವುದೇ ಪದವಿ ಯಲ್ಲಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ. ಸಂ: 08232-295124, 8660061488 ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 26ಕ್ಕೆ ಸಂವಿಧಾನ ಜಾಗೃತಿ ಜಾಥಾಗೆ ಚಾಲನೆ

**ಚಿಕ್ಕಬಳ್ಳಾಪುರ:** ಸಂವಿಧಾನದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ''ಸಂವಿಧಾನ ಜಾಗೃತಿ ಜಾಥಾ ಸಮಾವೇಶವನ್ನು'' ಅಭಿಯಾನದ ರೂಪದಲ್ಲಿ ಅರ್ಥಪೂರ್ಣ ಹಾಗೂ ಪರಿಣಾಮಕಾರಿಯಾಗಿ ಜಿಲ್ಲೆಯಾದ್ಯಂತ ಆಯೋಜಿಸುವಂತೆ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ''ಸಂವಿಧಾನ ಜಾಗೃತಿ ಜಾಥಾ'' ಸಮಾವೇಶವನ್ನು ಜಿಲ್ಲೆಯಲ್ಲಿ ಆಯೋಜನೆ ಮಾಡುವ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ತಾಲ್ಲೂಕು, ಗ್ರಾಮ ಪಂಚಾಯಿತ್ತಿ ಮಟ್ಟ ಸೇರಿದಂತೆ ಜಿಲ್ಲೆಯ ನಗರ ಮತ್ತು ಗ್ರಾಮೀಣ ಭಾಗದ ಸ್ಥಳಗಳಲ್ಲಿ ಭಾರತದ ಸಂವಿಧಾನ ಆಚರಣೆ ಮತ್ತು ಅದರ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ಸಂವಿಧಾನ ಜಾಗೃತಿ ಸಮಾವೇಶವನ್ನು ಸರ್ಮಪಕವಾಗಿ ಆಚರಿಸುವ ಸಂಬಂಧ ಸರ್ಕಾರ ಸ್ಪಷ್ಟ ನಿರ್ದೇಶನ ನೀಡಿದೆ ಅದರಂತೆ ಜಿಲ್ಲಾ ಕೇಂದ್ರದಲ್ಲಿ ಜನವರಿ 26 ರ ಗಣರಾಜ್ಯೋತ್ಸವ ದಿನದಂದು ನಗರದ ಜಿಲ್ಲಾ ಸರ್.ಎಂ.ವಿ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಈ ಕಾರ್ಯಕ್ರಮದ ಜಾಗೃತಿ ಜಾಥಾಗೆ ಚಾಲನೆ ನೀಡಲಿದ್ದಾರೆ. ನಂತರ ಸದರಿ ಜಾಥಾವು ಜಿಲ್ಲೆಯ ಪ್ರತಿ ಗ್ರಾಮ ಪಂಚಾಯಿತ್ತಿ ಮಟ್ಟದಲ್ಲಿ, ನಗರಾಡಳಿತ ಪ್ರದೇಶಗಳಲ್ಲಿ ಪೆಬ್ರವರಿ 23 ವರೆಗೆ ಜರುಗಲಿದೆ,ನಂತರ ಪೆಬ್ರವರಿ 24 ಜಿಲ್ಲಾಡಳಿತ ಭವನ ತಲುಪಿ ಬೆಂಗಳೂರಿಗೆ ಸಾಗಲಿದೆ. ಈ ಸಂಧರ್ಭದಲ್ಲಿ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಕೈಗೊಳ್ಳಬೇಕಾದ ಕಾರ್ಯಗಳ ಬಗ್ಗೆ ಪ್ರಭಾರ ವಹಿಸಿ ಸಮರ್ಪಕವಾಗಿ ಕಾರ್ಯನಿರ್ವಹಿಸಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸೂಚಿಸಿದರು.

ಪ್ರತಿ ಜಿಲ್ಲೆಗಳಲ್ಲಿ ಜನವರಿ 26 ರಂದು ಚಾಲನೆಗೊಳ್ಳಲಿರುವ ಈ ಜಾಗೃತಿ ಜಾಥಾದ ಮೆರವಣಿಗೆಯು ಇದೇ ಫೆಬ್ರವರಿ 25 ರಂದು ಬೆಂಗಳೂರಿಗೆ ತಲುಪಿ ಅಂದು ಅರಮನೆ ಮೈದಾನದಲ್ಲಿ ನಡೆಯವ ಸಂವಿಧಾನ ಜಾಗೃತಿ ಜಾಥಾದ ರಾಷ್ಟೀಯ ಸಮಾವೇಶದಲ್ಲಿ ಭಾಗವಹಿಸುವ ಮೂಲಕ ಕಾರ್ಯಕ್ರಮ ಮುಕ್ತಾಯ ಆಗಲಿದೆ. ಜಿಲ್ಲೆಯಲ್ಲಿ ನೆಡೆಯುವ ಜಾಥಾ ಮೆರವಣಿಗೆಯು ಜಿಲ್ಲಾ ಸಮಿತಿ ಅನುಮೋದಿಸುವ ಸಂವಿಧಾನ ಜಾಗೃತಿ ಜಾಥಾದ ವಿಡಿಯೋ ಕ್ಲಿಪ್ಸ್ ನ್ನು ಬಿತ್ತರಿಸುವ ಕನಿಷ್ಠ ಒಂದು ಐಇಅ ಆಖಙಕಐಜ ವಾಹನವನ್ನು ಹೊಂದಿರಬೇಕು. ಮೆರವಣಿಗೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವುದು ಹಾಗೂ ಭಾರತದ ಸಂವಿಧಾನ ಪೀಠಿಕೆಯ ಪ್ರತಿಗಳನ್ನು ಮೆರವಣಿಗೆಯ ಉದ್ದಕ್ಕೂ ಸಾರ್ವಜನಿಕರಿಗೆ ವಿತರಿಸುವುದು. ಒಂದಕ್ಕಿಂತ ಹೆಚ್ಚು ಸ್ತಬ್ದಚಿತ್ರಗಳು ಮೆರವಣಿಗೆಯಲ್ಲಿ ಭಾಗವಹಿಸಬಹುದು. ಮೆರವಣಿಗೆಯ ರಚನೆ ಮತ್ತು ಸಂಯೋಜನೆ, ಮಾರ್ಗ ನಕ್ಷೆಯನ್ನು ಪೂರ್ವ ಯೋಜಿತವಾಗಿ ಸಿದ್ದಪಡಿಸಿ ಇಂದಿನಿಂದಲೇ ಅಧಿಕಾರಿಗಳು ಕಾರ್ಯೋನ್ಮುಖರಾಗುವುದು. ಜಾಥಾದಲಿ ಭಾಗವಹಿಸುವವರಿಗೆ ತಂಗುವಿಕೆ ಮತ್ತು ವಸತಿ, ವಿಶ್ರಾಂತಿ, ಸುರಕ್ಷತೆಗೆ ಸಂಬಂಧ ಪಟ್ಟ ಇಲಾಖೆಯವರು ನಿಗಾ ವಹಿಸುವುದು.ಮೆರವಣಿಗೆಯಲ್ಲಿ ಕನಿಷ್ಠ ಒಂದು ಸ್ತಬ್ದಚಿತ್ರ ಇರತಕ್ಕದ್ದು.ಭಾರತದ ಸಂವಿಧಾನದ ಪಿಠಿಕೆ, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ, ಡಾ.ಬಿ.ಆರ್.ಅಂಬೇಡ್ಕರ್ ರವರ ಪರಿಕಲ್ಪನೆಗಳು , ಬಸವಣ್ಣನವರ ವಚನಗಳು, ಮತ್ತು ಭಾರತದ ಸಂವಿಧಾನದಲ್ಲಿ ವಚನಗಳ ಪ್ರಸ್ತುತತೆಯನ್ನು ಕಾರ್ಯಕ್ರದಲ್ಲಿ ಬಿಂಬಿಸುವಂತಿರಬೇಕು. ಕಾರ್ಯಕ್ರಮ ಜರುಗುವ ಸ್ಥಳಗಳಲ್ಲಿ ಸಂವಿಧಾನದ ಮಹತ್ವ ,ಜಿಲ್ಲೆಯ ಸ್ಥಳೀಯ ಐತಿಹಾಸಿಕ ವ್ಯಕ್ತಿಗಳು, ಸಾಹಿತ್ಯ ದಿಗ್ಗಜರು ಸೇರಿದಂತೆ ಪ್ರಮುಖ ವ್ಯಕ್ತಿಗಳು ಹಾಗೂ ಸ್ಥಳೀಯ ಕಲೆ ಮತ್ತು ಸಂಸ್ಕೃತಿ ಇತ್ಯಾದಿಗಳನ್ನು ಒಳಗೊಂಡಿರುವ ವಿಷಯಗಳ ಕುರಿತು ಭಾಷಣ ವ್ಯವಸ್ಥೆ ಮತ್ತು ಸ್ಥಳೀಯ ಕಲಾವಿದರಿಂದ ನಾಟಕ ಪ್ರದರ್ಶನ ಏರ್ಪಡಿಸಬೇಕು ಎಂದು ತಿಳಿಸಿದರು.

ಈಸಂಧರ್ಭದಲ್ಲಿ ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಪ್ರಕಾಶ್.ಜಿ.ಟಿ.ನಿಟ್ಟಾಲಿ, ಅಪರ ಜಿಲ್ಲಾಧಿಕಾರಿ ಡಾ.ಎನ್.ತಿಪ್ಪೇಸ್ವಾಮಿ, ಸಹಾಯಕ ಪೊಲೀಸ್ ವರಿಷ್ಠಾಧಿಕಾರಿ ರಾಜಾ ಇಮಾಮ್ ಖಾಶಿಂ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ತೇಜಾನಂದರೆಡ್ಡಿ, ತಹಶೀಲ್ದಾರ್ ಅನಿಲ್ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಿದ್ದರು.

## ದೇಶ ರಕ್ಷಣೆಯಲ್ಲಿ ಸೈನಿಕರ ಸೇವೆ ಅಪಾರ

**ಪಿರಿಯಾಪಟ್ಟಣ:** ದೇಶದ ರಕ್ಷಣೆಗಾಗಿ ತಮ್ಮ ಜೀವನವನ್ನೇ ಮುಡುಪಾಗಿಟ್ಟುರುವ ಸೈನಿಕರ ಸೇವೆ ಅಪಾರ ಎಂದು ಮಾಜಿ ಸೈನಿಕರ ಸಂಘದ ಗೌರವಾಧ್ಯಕ್ಷ ವಿಕ್ರಂರಾಜ್ ತಿಳಿಸಿದರು.

ಪಟ್ಟಣದ ರೋಟರಿ ಭವನದಲ್ಲಿ ರೋಟರಿ ಮಿಡ್ ಟೌನ್ ಹಾಗೂ ಮಾಜಿ ಸೈನಿಕರ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ನಿವೃತ್ತ ಸೈನಿಕರ ಹಾಗೂ ಭಾರತೀಯ ಸೇನಾ ದಿನಾಚರಣೆಯಲ್ಲಿ ಮಾತನಾಡಿದ ಅವರು ರಾಷ್ಟ್ರ ರಕ್ಷಣೆಗಾಗಿ ಸೈನಿಕರು ತಮ್ಮ ಜೀವನವನ್ನೇ ಮುಡುಪಾಗಿಟ್ಟಿದ್ದಾರೆ ಇಂದು ನಾವೆಲ್ಲರೂ ನಿರ್ಭೀತಿಯಿಂದ ಬದುಕುತ್ತಿದ್ದೇವೆ ಎಂದರೆ ಅದಕ್ಕೆ ಕಾರಣ ನಮ್ಮ ಸೈನಿಕರು ಅವರ ಸೇವೆ ಅವಿಸ್ಮರಣೀಯವಾದದ್ದು, ದೇಶ ಸದೃಢವಾಗಿಯಾರಬೇಕೆಂದರೆ ಸೈನಿಕರ ಪಾತ್ರ ಮುಖ್ಯವಾದುದ್ದಾಗಿದೆ ದೇಶದ ರಕ್ಷಣೆಗಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ ಜನರಲ್ ಕಾರ್ಯಪ್ಪರವರು ಭಾರತೀಯ ಪ್ರಥಮ ಸೇನಾಧ್ಯಕ್ಷರಾಗಿ ಪದಗ್ರಹಣ ಮಾಡಿದ ದಿನವನ್ನು ಭಾರತೀಯ ಸೇನಾ ದಿನಾಚರಣೆಯನ್ನು ಆಚರಿಸಲಾಗುತ್ತಿದೆ ಕಾರ್ಯಪ್ಪರವರ ದೇಶ ಪ್ರೇಮ ನಮಗೆಲ್ಲರಿಗೂ ಪ್ರೇರಣೆಯಾಗಬೇಕು ಎಂದು ತಿಳಿಸಿದರು.

ತಾಲೂಕು ರೋಟರಿ ಮಿಡ್ ಟೌನ್ ಅಧ್ಯಕ್ಷ ತಿರುಮಲಪುರ ರಾಜೇಗೌಡ ಮಾತನಾಡಿ ರೈತ ಹಾಗೂ ಸೈನಿಕರು ದೇಶದ ಬೆನ್ನೆಲುಬು ಆಗಿದ್ದಾರೆ. ರೈತರು ಬೆಳೆ ಬೆಳೆದು ದೇಶದ ಜನರಿಗೆ ಆಹಾರ ನೀಡುತ್ತಿದ್ದಾರೆ ಹಾಗೆಯೇ ಸೈನಿಕರು ನಮಗೆ ರಕ್ಷಣೆ ನೀಡುವ ಕೆಲಸವನ್ನು ಮಾಡುತ್ತಿದ್ದಾರೆ

ನಮ್ಮ ಸೈನಿಕರು ನಮ್ಮ ರಾಷ್ಟ್ರದ ಸೇವಕರು ರಾಷ್ಟ್ರ ಸೇವೆಯೇ ಈಶ ಸೇವೆ ಎಂದು ತಿಳಿದವರು ದೇಶಕ್ಕಾಗಿ ತಮ್ಮ ಜೀವನವನ್ನು ತ್ಯಾಗ ಮಾಡಿದವರು ಸೈನಿಕರನ್ನು ಎಷ್ಟು ಸ್ಮರಿಸಿದರು ಕಡಿಮೆ ಇವರನ್ನು ನಾವು ಗೌರವಿಸಬೇಕು ಎಂದು ಹೇಳಿದರು. ಮಾಜಿ ಸೈನಿಕರಾದ ಮುದ್ದಪ್ಪ, ಸೋಮಣ್ಣ, ಕೆ.ಸಿ.ಚಂದ್ರಪ್ಪ, ಕೃಷ್ಣ ಕುಮಾರ್, ಎನ್.ಮಲ್ಲಯ್ಯ ರವರನ್ನು ರೋಟರಿ ಮಿಡ್ ಟೌನ್ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ವಕೀಲ ಬಿ.ವಿ. ಜವರೇಗೌಡ, ರೋಟರಿ ಮಿಡ್ ಟೌನ್ ಜಿಲ್ಲಾ ಗವರ್ನರ್ ಸತ್ಯ ನಾರಾಯಣ್, ಹೆಗ್ಡೆ, ತಾಲೂಕು ಬಿಜೆಪಿ ಅಧ್ಯಕ್ಷ ಎಂ.ಎಂ. ರಾಜೇಗೌಡ, ಕುಶಾಲನಗರ ಮಾಜಿ ಸೈನಿಕರ ಸಂಘದ ಅಧ್ಯಕ್ಷ ಚೆನ್ನಪ್ಪ, ಪಿರಿಯಾಪಟ್ಟಣ ಮಾಜಿ ಸೈನಿಕರ ಸಂಘದ ಅಧ್ಯಕ್ಷ ನರಸೇಗೌಡ, ಉಪಾಧ್ಯಕ್ಷ ಸುಬ್ರಮಣ್ಯ, ಖಜಾಂಚಿ ಧೃವರಾಜ್, ಮಾಜಿ ಸೈನಿಕರಾದ ಉತ್ತಪ್ಪ, ರಮೇಶ್, ಬಸಲಾಪುರ ಬಾಲಕೃಷ್ಣ, ರೋಟರಿ ಮಿಡ್ ಟೌನ್ ಸದಸ್ಯ ಸುನಿಲ್ ಕುಮಾರ್, ತಿಲಕ್, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಜ.18 ರಿಂದ 28 ರವರೆಗೆ ವಿಶ್ವ ಗುರು ಬಸವಣ್ಣ ಮತ್ತು ವಚನ ಸಾಹಿತ್ಯಾಧಾರಿತ ಗಣರಾಜ್ಯೋತ್ಸವ ಫಲಪುಷ್ಪ ಪ್ರದರ್ಶನ

**ಬೆಂಗಳೂರು:** ಜನವರಿ 18 ರಿಂದ 28 ರವರೆಗೆ ವಿಶ್ವ ಗುರು ಬಸವಣ್ಣ ಮತ್ತು ವಚನ ಸಾಹಿತ್ಯಾಧಾರಿತ ಗಣರಾಜ್ಯೋತ್ಸವ 215ನೇ ಫಲಪುಷ್ಪ ಪ್ರದಶನವನ್ನು ಲಾಲ್‌ಬಾಗ್‌ನ ಗಾಜಿನಮನೆಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯ ಕಾರ್ಯದರ್ಶಿಗಳಾದ ಡಾ. ಶಮ್ಲಾ ಇಕ್ಬಾಲ್ ತಿಳಿಸಿದರು.

ತೋಟಗಾರಿಕೆ ಇಲಾಖೆಯ ಮಾಹಿತಿ ಕೇಂದ್ರದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರುಕಾರ್ಯಕ್ರಮವನ್ನು ಲಾಲ್‌ಬಾಗ್‌ನ ಗಾಜಿನ ಮನೆಯಲ್ಲಿ ಜನವರಿ 18 ರಂದು ಗುರುವಾರ ಸಂಜೆ 6.00 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಉಪಮುಖ್ಯಮಂತ್ರಿಗಳು, ಬೃಹತ್ ಮತ್ತು ಮಧ್ಯಮ ನೀರಾವರಿ ಹಾಗೂ ಬೆಂಗಳೂರು ನಗರ ಅಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್, ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ, ಸಾರಿಗೆ ಹಾಗೂ ಮುಜರಾಯಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ, ಖ್ಯಾತ ವಿದ್ವಾಂಸರಾದ ನಾಡೋಜ ಡಾ.ಗೊ.ರು.ಚನ್ನಬಸಪ್ಪ ಅವರು ಆಗಮಿಸಲಿದ್ದಾರೆ. ಅಧ್ಯಕ್ಷತೆಯನ್ನು ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಉದಯ್ ಬಿ. ಗರುಡಾಚಾರ್ ಅವರು ವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ನಮ್ಮ ರಾಜ್ಯದ ಜೇನುತುಪ್ಪ ಬ್ರಾಂಡ್‌ನ್ನು ಬಿಡುಗಡೆ ಮಾಡಲಿದ್ದಾರೆ ಎಂದರು.

ವಿಶೇಷ ಆಹ್ವಾನಿತರಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ರಜನೀಶ್ ಗೋಯಲ್, ಬೆಂಗಳೂರು ದಕ್ಷಿಣ ಕ್ಷೇತ್ರದ ಲೋಕಸಭಾ ಸದಸ್ಯರಾದ ತೇಜಸ್ವಿ ಸೂರ್ಯ, ವಿಧಾನ ಪರಿಷತ್ ಸದಸ್ಯ ಅ. ದೇವೇಗೌಡ, ವಿಧಾನ ಪರಿಷತ್ ಸದಸ್ಯ ಟಿ.ಎ. ಶರವಣ ಕಾರ್ಯಕ್ರಮದಲ್ಲಿ ಭಾವಹಿಸಲಿದ್ದಾರೆ. ಗಾಜಿನ ಮನೆಯ ಪ್ರವೇಶದಲ್ಲಿ ಇಂಡೋ-ಅಮೇರಿಕನ್ ಹೈಬ್ರಿಡ್ ಸೀಡ್ಸ್ ಕಂಪೆನಿಯ ಆಕರ್ಷಕ ಹೂ ಜೋಡಣೆ ಮತ್ತು ಬಸವಣ್ಣನವರ ಪುತ್ಥಳಿ, ಗಾಜಿನ ಮನೆಯ ಕೇಂದ್ರಭಾಗದಲ್ಲಿ ನೂತನ ಅನುಭವ ಮಂಟಪದ ಪುಷ್ಪ ಮಾದರಿ ಹಾಗೂ ಅದರ ಮುಂದೆ ರಾರಾಜಿಸಲಿರುವ ವಿಶ್ವಗುರು ಬಸವಣ್ಣನವರ 10 ಅಡಿ ಎತ್ತರದ ಬೃಹತ್ ಪ್ರತಿಮೆ, ಗಾಜಿನ ಮನೆಯ ಕೇಂದ್ರಭಾಗದ ಬಲಬದಿಗೆ ವಚನಾನುಭವ ಗೋಷ್ಠಿ ಮತ್ತು ವೈವಿಧ್ಯಮಯ ಹೂಗಳ ಬೃಹತ್ ಹ್ಯಾಂಗಿಂಗ್ ಟ್ರೀ ಪರಿಕಲ್ಪನೆಯ ಅನಾವರಣ, ಕೂಡಲಸಂಗಮದಲ್ಲಿರುವ ಬಸವಣ್ಣನವರ ಐಕ್ಯಮಂಟಪದ ಪುಷ್ಪ ಮಾದರಿ ಮತ್ತು ಬಸವಣ್ಣನವರ ಬದುಕಿನ ಪ್ರಮುಖ ಘಟ್ಟಗಳನ್ನು ಸೂಚಿಸುವ ಕಲಾಕೃತಿಗಳು ಹಾಗೂ ಇನ್ನಿತರ ಪ್ರದರ್ಶನಗಳು ಇರುತ್ತವೆ ಎಂದು ತಿಳಿಸಿದರು.

ಜನವರಿ 20, ಶನಿವಾರ ಮಧ್ಯಾಹ್ನ 1.00 ಗಂಟೆಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರಾದ ಡಾ. ಶಾಲಿನಿ ರಜನೀಶ್ ಅವರು ಇಕೆಬಾನ, ಪುಷ್ಪ ಭಾರತಿ, ಪುಷ್ಪ ರಂಗೋಲಿ, ಜಾನೂರ್, ತರಕಾರಿ ಕೆತ್ತನೆ, ಡಚ್ ಹೂವಿನ ಜೋಡಣೆ, ಒಣ ಹೂವಿನ ಜೋಡಣೆ, ಥಾಯ್ ಆರ್ಟ್, ಜಾನೂರು, ಬೊನ್ಸಾಯ್ ಗಿಡಗಳ ಪ್ರದರ್ಶನದ ಉದ್ಘಾಟನೆಯನ್ನು ಮಾಡಲಿದ್ದಾರೆ.

ಗಾಜಿನ ಮನೆಯ ಪ್ರದರ್ಶಿಕೆಗಳು, ತೋಟಗಳ ಸ್ಪರ್ಧೆಗಳು, ಇಕೆಬಾನ, ಪುಷ್ಪ ಭಾರತಿ, ಪುಷ್ಪ ರಂಗೋಲಿ, ಜಾನೂರು, ತರಕಾರಿ ಕೆತ್ತನೆ, ಡಚ್ ಹೂವಿನ ಜೋಡಣೆ, ಒಣ ಹೂವಿನ ಜೋಡಣೆ, ಥಾಯ್ ಆರ್ಟ್, ಜಾನೂರು, ಬೊನ್ಸಾಯ್ ಗಿಡಗಳ ಪ್ರದರ್ಶನ ಮತ್ತು ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ವಿಜೇತರಿಗೆ ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಶಾಸಕ ಉದಯ್ ಬಿ. ಗರುಡಾಚಾರ್ ಅವರು ಜನವರಿ 27 ರಂದು ಶನಿವಾರ ಮಧ್ಯಾಹ್ನ 2.30 ಬಹುಮಾನ ವಿತರಿಸಲಿದ್ದಾರೆ.

## 27 ಕೋಟಿ ರೂ. ಮೌಲ್ಯದ ಮಾದಕ ವಸ್ತು ವಶ

**ಬೆಂಗಳೂರು:** ರಾಜ್ಯದಲ್ಲಿ ಕಳೆದ ಆರು ತಿಂಗಳ ಅವಧಿಯಲ್ಲಿ ಪೊಲೀಸರು 27 ಕೋಟಿ ರೂ. ಮೌಲ್ಯದ 4,484 ಕೆ.ಜಿ ಗಾಂಜಾ ಹಾಗೂ 23 ಕೆಜಿ ರಾಸಾಯನಿಕ ಪದಾರ್ಥಗಳ ಮಾದಕ ವಸ್ತುಗಳನ್ನು ವಶಪಡಿಕೊಂಡಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಪೊಲೀಸ್ ಪ್ರಧಾನ ಕಚೇರಿಯ ಸಮ್ಮೇಳನ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ರಾಜ್ಯ ಹಿರಿಯ ಪೊಲೀಸ್ ಅಧಿಕಾರಿಗಳ ಸಮಾವೇಶದ ಕಾರ್ಯಕ್ರಮದಲ್ಲಿ ಭಾಗವಹಿಸಿ ನಂತರ ಪತ್ರಿಕಾ ಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದರು.

ವಶಪಡಿಸಿಕೊಂಡಿರುವ ಮಾದಕ ವಸ್ತುಗಳನ್ನು ಫೆಬ್ರವರಿ ಮಾಹೆಯ ಮೊದಲ ವಾರದಲ್ಲಿ ನಾಶಮಾಡಲು ಪೊಲೀಸ್ ಇಲಾಖೆಗೆ ಸರ್ಕಾರ ಪರವಾನಗಿ ನೀಡಿದೆ. ಯುವಕ ಯುವತಿಯರು ಮಾದಕ ವ್ಯಸನಿಗಳಾಗಿ ಅವರ ಭವಿಷ್ಯವನ್ನೇ ಹಾಳು ಮಾಡಿಕೊಳ್ಳುತ್ತಿರುವುದರಿಂದ ಕರ್ನಾಟಕ ರಾಜ್ಯವನ್ನು ಮಾದಕಮುಕ್ತ ರಾಜ್ಯವನ್ನಾಗಿಸಲು ಕಟ್ಟು ನಿಟ್ಟಿನ ಕ್ರಮಕೈಗೊಳ್ಳುವಂತೆ ಇಂದು ಹಮ್ಮಿಕೊಂಡಿದ್ದ ಹಿರಿಯ ಪೊಲೀಸ್ ಅಧಿಕಾರಿಗಳ ಸಮಾವೇಶದಲ್ಲಿ ಸೂಚಿಸಲಾಗಿದೆ ಎಂದರು.

ರಾಜ್ಯದಲ್ಲಿ ಕಾನೂನಿನ ಸುವ್ಯವಸ್ಥೆ ಚೆನ್ನಾಗಿರಬೇಕು. ಕಾನೂನಿನ ಸುವ್ಯವಸ್ಥೆ ಚೆನ್ನಾಗಿದ್ದರೆ ರಾಜ್ಯದ ಅಭಿವೃದ್ಧಿಯಾಗುತ್ತದೆ. ಕಾನೂನು ಸುವ್ಯವಸ್ಥೆಗೂ, ಬಂಡವಾಳ ಹೂಡಿಕೆಗೂ ಸಂಬಂಧವಿದೆ. ಕಾನೂನು ಸುವ್ಯವಸ್ಥೆ ಚೆನ್ನಾಗಿರುವ ರಾಜ್ಯದಲ್ಲಿ ಬಂಡವಾಳ ಹೂಡಿಕೆ ಜಾಸ್ತಿಯಾಗುತ್ತದೆ. ಇದರಿಂದ ಆರ್ಥಿಕ ಅಭಿವೃದ್ಧಿಯ ಜೊತೆಗೆ ಉದ್ಯೋಗ ಸೃಷ್ಟಿಯಾಗುವುದರಿಂದ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸರು ಹೆಚ್ಚಿನ ಶ್ರಮವಹಿಸಿ ಕೆಲಸ ಮಾಡಬೇಕೆಂದು ಸ್ಪಷ್ಟವಾಗಿ ಸೂಚಿಸಿದ್ದೇನೆ.

ಸಮಾಜದಲ್ಲಿ ದುರ್ಬಲ ವರ್ಗದವರಿಗೆ, ಮಹಿಳೆಯರಿಗೆ, ಪರಿಶಿಷ್ಠ ಜಾತಿ-ಪರಿಶಿಷ್ಠ ವರ್ಗದವರಿಗೆ, ಮನೆಗಳಲ್ಲಿ ಒಂಟಿಯಾಗಿ ವಾಸಿಸುವ ಜನರಿಗೆ ರಕ್ಷಣೆ ನೀಡಬೇಕು. ಅದಕ್ಕೋಸ್ಕರ ಹಿರಿಯ ಅಧಿಕಾರಿಗಳು ಪೊಲೀಸ್ ಠಾಣೆಗಳಿಗೆ ಭೇಟಿ ನೀಡಿ, ಠಾಣೆಯಲ್ಲಿ ಏನು ನಡೆಯುತ್ತಿದೆ ಎಂದು ಪರಿಶೀಲಿಸಿ, ಮಾರ್ಗದರ್ಶನ ನೀಡಲು ಸೂಚಿಸಲಾಗಿತ್ತು, ಈ ದಿಟ್ಟಿನಲ್ಲಿ ಹೆಚ್ಚಿನ ಪ್ರಯತ್ನ ಮಾಡಿದ್ದಾರೆ ಎಂದರು.

ಕಾನೂನು ಸುವ್ಯವಸ್ಥೆ ಕರ್ನಾಟಕದಲ್ಲಿ ಸಮಾಧಾನಕರವಾಗಿದೆ. ಇಲ್ಲಿಯವರೆಗೆ ಯಾವುದೇ ಕೋಮು ಗಲಭೆಗಳು ನಡೆದಿಲ್ಲ. ಕೋಮು ಗಲಭೆಗಳು ಸಣ್ಣ ಪುಟ್ಟದ್ದಾಗಿದ್ದರು, ದೊಡ್ಡ ಪ್ರಮಾಣದಲ್ಲಿ ಆಗಿಲ್ಲ. ಸೈಬರ್ ಕ್ರೈಮ್‌ಗಳು ಹೆಚ್ಚಾಗುತ್ತಿದ್ದು ಎಲ್ಲಾ ಪೊಲೀಸ್ ಠಾಣೆಗಳು ಹೆಚ್ಚಿನ ಗಮನ ನೀಡುವಂತೆ ಹಾಗೂ ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಅಪರಾಧ ಪ್ರಮಾಣ ಕಡಿಮೆ ಮಾಡಬೇಕು ಎಂದು ಸೂಚಿಸಲಾಗಿದೆ.

ಪೊಲೀಸರು ಜನಸ್ನೇಹಿಯಾಗಿ ಕೆಲಸ ಮಾಡಬೇಕು. ಜನರಿಗೆ ಪೊಲೀಸರು ಹಾಗೂ ಪೊಲೀಸ್ ಇಲಾಖೆಯ ಮೇಲೆ ನಂಬಿಕೆ, ವಿಶ್ವಾಸ ಬರುವಂತೆ ಕೆಲಸಮಾಡಬೇಕು. ಎಫ್‌ಐಆರ್ ಆದ ಮೇಲೆ ಗುಣಮಟ್ಟದ ತನಿಖೆ ಆಗಬೇಕು. ಗುಣಮಟ್ಟದ ತನಿಖೆ ಆದರೆ ಹೆಚ್ಚಿನ ಶಿಕ್ಷೆ ಆಗುತ್ತದೆ. ಶಿಕ್ಷೆ ಹೆಚ್ಚಾದರೆ ಅಪರಾಧದ ಪ್ರಕರಣಗಳು ಕಡಿಮೆಯಾಗುತ್ತದೆ. ಲೋಪ-ದೋಷಗಳನ್ನು ಸರಿಪಡಿಸುವ ಕೆಲಸ ಮಾಡಬೇಕು. ಯಾರೂ ಕೂಡ ಭಯದ ವಾತಾವರಣದಲ್ಲಿ ಇರಬಾರದು.

ಎಲ್ಲಾ ದೌರ್ಜನ್ಯ ಪ್ರಕರಣಗಳಲ್ಲಿ 60 ದಿನಗಳೊಳಗೆ ಚಾರ್ಜ್ ಶೀಟ್ ಫೈಲ್ ಮಾಡಬೇಕು. ಪೊಲೀಸ್ ಬೀಟ್ ಹೆಚ್ಚು ಮಾಡಬೇಕು. ಹೊಯ್ಸಳ ಕೂಡ ಮೇಲ್ವಿಚಾರಣೆ ಮಾಡಬೇಕು. ಹಗಲು ರಾತ್ರಿ ನಡೆಯುವ ಅಪರಾಧ ಪ್ರಕರಣಗಳನ್ನು ಪತ್ತೆ ಹಚ್ಚಿ ತಡೆಗಟ್ಟಬೇಕು. ಲೋಕಸಭಾ ಚುನಾವಣೆ ಹತ್ತಿರ ಬರುತ್ತಿದ್ದು, ರೌಡಿಸಂ ಮಾಡುವವರನ್ನು ಗುರುತಿಸಿ ಅವರ ಮೇಲೆ ನಿಗಾ ಇಟ್ಟು ಕ್ರಿಮಿನಲ್ ಚಟುವಟಿಕೆ ನಡೆಯದ ರೀತಿ ಎಚ್ಚರವಹಿಸಬೇಕು ಎಂದರು.

ಈ ವರ್ಷ ಸುವರ್ಣ ಮಹೋತ್ಸವ ಆಚರಿಸುತ್ತಿರುವುದರಿಂದ ಎಲ್ಲಾ ಪೊಲೀಸರಿಗೂ ಬೆಳ್ಳಿ ಪದಕ ನೀಡಲಾಗುವುದು. ವೈದ್ಯಕೀಯ ತಪಾಸಣಾ ಭತ್ಯೆಯನ್ನು 1 ಸಾವಿರ ರೂ.ಗಳಿಂದ 1,500 ರೂಗಳಿಗೆ ಹೆಚ್ಚಿಸಲಾಗಿದೆ. ಸುವರ್ಣ ಭವನನ್ನು ನಿರ್ಮಿಸಲಾಗುವುದು ಎಂದರು.

ಪತ್ರಿಕಾ ಗೋಷ್ಠಿಯಲ್ಲಿ ಗೃಹ ಸಚಿವರಾದ ಜಿ.ಪರಮೇಶ್ವರ್, ಗೃಹ ಕಾರ್ಯದರ್ಶಿ ಉಮಾಶಂಕರ್, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಅಲೋಕ್ ಮೋಹನ್, ಮುಖ್ಯಮಂತ್ರಿಗಳ ಕಾರ್ಯದರ್ಶಿ ತ್ರಿಲೋಕ್ ಚಂದ್ರ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ಗೋವಿಂದರಾಜು ಮತ್ತು ನಸೀರ್ ಅಹಮದ್ ಅವರು ಉಪಸ್ಥಿತರಿದ್ದರು.

# ಸ್ಥಳೀಯ ಮುಖಂಡರಿಗೆ ಟಿಕೆಟ್ ಪ್ರಸ್ತಾಪ; ಬಿಜೆಪಿ ವರಿಷ್ಠರ ಗಮನಕ್ಕೆ ತರುವೆ

**ಚಾಮರಾಜನಗರ:** ಚಾಮರಾಜನಗರ ಮೀಸಲು ಲೋಕಸಭಾ ಚುನಾವಣೆಯಲ್ಲಿ ಸ್ಥಳೀಯ ಮುಖಂಡರಿಗೆ ಟಿಕೆಟ್ ಕೊಡುವ ಪ್ರಸ್ತಾಪವನ್ನು ಪಕ್ಷದ ವರಿಷ್ಠರ ಗಮನಕ್ಕೆ ಪ್ರಾಮಾಣಿಕವಾಗಿ ತರುವುದಾಗಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಹೇಳಿದರು.

ತಾಲೂಕಿನ ಮಾದಾಪುರ ರಾಷ್ಟ್ರೀಯಹೆದ್ದಾರಿ ಯ ಮೈದಾನದಲ್ಲಿ ವೆಂಕಟರಮಣಸ್ವಾಮಿ (ಪಾಪು) ಸ್ನೇಹಿತರ ಬಳಗದ ವತಿಯಿಂದ ನಡೆದ ಗೌರವ ಸಮರ್ಪಣೆ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಪಕ್ಷದ ಮುಖಂಡರು ಲೋಕಸಭಾ ಚುನಾವಣೆಯಲ್ಲಿ ಸ್ಥಳೀಯ ಮುಖಂಡರಿಗೆ ಟಿಕೆಟ್ ನೀಡಲಿ ನಾವೆಲ್ಲರೂ ಪ್ರಾಮಾಣಿಕವಾಗಿ ಕೆಲಸ ಮಾಡುವುದಾಗಿ ಪ್ರಸ್ತಾಪ ಮಾಡಿದ್ದಾರೆ. ಈ ಪ್ರಸ್ತಾಪವನ್ನು ಪಕ್ಷದ ವರಿಷ್ಠರ ಗಮನಕ್ಕೆ ತರಲಾಗುವುದು ಎಂದರು.

ಕೂಡ್ಲೂರು ಶ್ರೀಧರಮೂರ್ತಿ ಅಭಿಪ್ರಾಯವನ್ನು ಎಸ್. ಮಹದೇವಯ್ಯನವರು ಅನುಮೋದಿಸಿದ್ದಾರೆ. ಇದಕ್ಕೆ ನನ್ನದು ಸಹಮತ ಇದೆ. ವ್ಯಕ್ತಿಕ್ಕಿಂತ ವ್ಯಕ್ತಿಮುಖ್ಯ, ಆದರೆ ವ್ಯಕ್ತಿಕ್ಕಿಂತ ಪಕ್ಷ ಮುಖ್ಯ, ಪಕ್ಷನೂ ಮುಖ್ಯ ಪಕ್ಷಕ್ಕಿಂತ ದೇಶ ಮುಖ್ಯ. ಈ ಲೋಕಸಭಾ ಚುನಾವಣೆಯು ದೇಶ ಮುಖ್ಯ ಅನ್ನುವ ಆಧಾರದ ಮೇಲೆ ನಡೆಯುತ್ತಿರುವ ಚುನಾವಣೆ ಇದಾಗಿದೆ ಆದರಿಂದ ಚಾಮರಾಜನಗರ ಲೋಕಸಭಾ ಕ್ಷೇತ್ರ ಸೇರಿದಂತೆ



ರಾಜ್ಯದ 28 ಸ್ಥಾನಗಳಲ್ಲೂ ಪಕ್ಷವನ್ನು ಗೆಲ್ಲಿಸಬೇಕು ಅ ನಿಟ್ಟಿನಲ್ಲಿ ನಾವೆಲ್ಲರೂ ಕೆಲಸ ಮಾಡೋಣ ಎಂದರು.

ಕಾಂಪೋಸ್ಟ್ ನಿಗಮದ ಮಾಜಿ ಅಧ್ಯಕ್ಷ ಟಿಕೆಟ್ ಆಕಾಂಕ್ಷಿ ಎಸ್.ಮಹದೇವಯ್ಯ ಮಾತನಾಡಿ, ಅನೇಕ ವರ್ಷಗಳಿಂದ ಪಕ್ಷದಲ್ಲಿ ದುಡಿಯುತ್ತೇನೆ. ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಸಂಸದರಾದ ವಿ.ಶ್ರೀನಿವಾಸಪ್ರಸಾದ್ ಅವರು ಚುನಾವಣೆಯಲ್ಲಿ ನಿಲ್ಲುವುದಿಲ್ಲ ಎಂದು ಘೋಷಣೆ ಮಾಡಿದ್ದಾರೆ. ಇಂತಹ ಸಂದರ್ಭದಲ್ಲಿ ನನಗೊಂದು ಅವಕಾಶ ಸಿಕ್ಕಬಹುದು ಎಂಬ ಆಶಯವನ್ನು ಇಟ್ಟುಕೊಂಡಿದ್ದೇನೆ. ಪಕ್ಷದ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಅವರು, ನೂತನ ಜಿಲ್ಲಾಧ್ಯಕ್ಷರು ಪ್ರಾಮಾಣಿಕವಾಗಿ ಸ್ಥಳೀಯರಿಗೆ ಟಿಕೆಟ್ ನೀಡಬೇಕು ಎಂದು ಗಟ್ಟಿಯಾಗಿ ಮಾತನಾಡಿದ್ದಾರೆ ಖಂಡಿತವಾಗಿ ಸ್ಥಳೀಯರಿಗೆ ಟಿಕೆಟ್ ಸಿಗುತ್ತದೆ. ಇಲ್ಲದಿದ್ದರೆ ನಾವು ಪಕ್ಷಕ್ಕಾಗಿ ದುಡಿಯಬೇಕಾಗುತ್ತದೆ ಹೊರತು ಸ್ಥಳೀಯ ಮುಖಂಡರ ಟಿಕೆಟ್ ಬಯಕೆ ಈಡೇರದೆ ಹೊರ ಜಿಲ್ಲೆಯವರಿಗೆ ಮಣೆ ಹಾಕುವುದರಿಂದ ಸ್ಥಳೀಯರಿಗೆ ಅನ್ಯಾಯವಾಗುತ್ತದೆ ಎಂದರು.

ಬಿಜೆಪಿ ಟಿಕೆಟ್ ಆಕಾಂಕ್ಷಿ ಕೂಡ್ಲೂರು ಶ್ರೀಧರಮೂರ್ತಿ ಮಾತನಾಡಿ, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಜಿಲ್ಲೆಯಲ್ಲಿ ಮತ ಹೊಂದಿರುವ ಸ್ಥಳೀಯ ಮುಖಂಡರಿಗೆ ಟಿಕೆಟ್ ಜಿಲ್ಲೆಯಿಂದ ವಿಜಯಪತಾಕೆ ಹಾರಿಸುವ ಕೆಲಸವನ್ನು ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾದ ಎನ್.ಮಹೇಶ್ ಅವರು ಹಾಗೂ ನೂತನ ಜಿಲ್ಲಾಧ್ಯಕ್ಷರಾದ ನಿರಂಜನ್ ಕುಮಾರ್ ಮಾಡಬೇಕೆಂದು ಮನವಿ ಮಾಡಿದರು.

ಬಿಜೆಪಿ ಮುಖಂಡರು, ಟಿಕೆಟ್ ಆಕಾಂಕ್ಷಿ ವೆಂಕಟರಮಣಸ್ವಾಮ ( ಪಾಪು) ಮಾತನಾಡಿ, ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾದ ಎನ್.ಮಹೇಶ್ ಅವರಿಗೆ ಮತ್ತು ನೂತನ ಜಿಲ್ಲಾಧ್ಯಕ್ಷರಾದ ನಿರಂಜನ್ ಕುಮಾರ್ ಅವರಿಬ್ಬರೂ ಕೂಡ ಒಂದು ಶಕ್ತಿಯಾಗಿದ್ದಾರೆ. ಜಿಲ್ಲೆಯಲ್ಲಿ ಜ್ವಲಂತ ಸಮಸ್ಯೆಗಳಿವೆ. ಈ ಸಮಸ್ಯೆ ಗಳಿಗೆ ಪರಿಹಾರ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಅವರಿಬ್ಬರ ಪಾತ್ರ ಅಪಾರ ವಾಗಿದೆ.ನಗರದ ಜನರ ಸಮಸ್ಯೆ ನಿಗಿಸಬೇಕು. ಬಿಜೆಪಿ ಯಲ್ಲಿ ಲೋಕಸಭಾ ಚುನಾವಣೆಯಲ್ಲಿ ಪಕ್ಷ ಯಾರಿಗಾದರೂ ಟಿಕೆಟ್ ಕೊಡಲಿ ಅವರ ಪರ ನಾವೆಲ್ಲರೂ ಕೆಲಸ ಮಾಡಬೇಕಾಗುತ್ತದೆ. ಎನ್.ಮಹೇಶ್ ಹಾಗೂ ನಿರಂಜನ್ ಕುಮಾರ್ ಅವರ ಜೊತೆಯಲ್ಲಿದ್ದು ಅವರಿಗೆ ಶಕ್ತಿ ತುಂಬುವುದಾಗಿ ತಿಳಿಸಿದರು.

ಬಿಜೆಪಿ ಮುಖಂಡ ರಾಜಣ್ಣ ಕಾರ್ಯಕ್ರಮ ಉದ್ಘಾಟಿಸಿದರು.

ಬಿಜೆಪಿ ಮುಖಂಡ ಅರಕಲವಾಡಿ ನಾಗೇಂದ್ರ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾ ವಕ್ತಾರ ಅಯ್ಯನಪುರ ಶಿವಕುಮಾರ್, ಡಾ.ಪರಮೇಶ್ವರಪ್ಪ, ಕುಂತೂರು ಭೃಂಗೇಶ್, ಮರಳ್ಳಿ ಮಹದೇವಸ್ವಾಮಿ, ಜಿ.ಪಂ.ಮಾಜಿ ಸದಸ್ಯ ಬಾಲರಾಜ್, ಎಸ್.ಸಿ ಮೋರ್ಚಾದ ಜಿಲ್ಲಾಧ್ಯಕ್ಷ ಮೂಡ್ನಾಕೂಡ ಪ್ರಕಾಶ್, ಮುತ್ತಿಗೆ ಮೂರ್ತಿ, ಬೇಡರಪುರ ಬಸವಣ್ಣ, ಕಾಳಿಚರಣ್, ಕಾರ್ತಿಕ, ಬಸವರಾಜು ಇದ್ದರು.

# ವಿಪತ್ತು ನಿರ್ವಹಣೆ ಅರಿವು ಅಗತ್ಯ

**ಚಾಮರಾಜನಗರ:** ಅಂಗವಿಕಲರಿಗೆ ವಿಪತ್ತು ನಿರ್ವಹಣೆ ಅರಿವು ಅಗತ್ಯ ಎಂದು ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಬಿ.ಎಸ್. ಭಾರತಿ ಅವರು ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಹಳೆ ಕೆಡಿಪಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮೊಬಿಲಿಟಿ ಇಂಡಿಯಾ ಸಹಯೋಗದಲ್ಲಿ ಆಯೋಜಿಸಿದ್ದ ಜಿಲ್ಲೆಯ ಗ್ರಾಮೀಣ, ನಗರ ಪುನರ್ವಸತಿ ಕಾರ್ಯಕರ್ತರಿಗೆ ವಿಪತ್ತು ನಿರ್ವಹಣೆಯಲ್ಲಿ ವಿಕಲಚೇತನರ ಒಳಗೊಳ್ಳುವಿಕೆ ಮತ್ತು ಮನೋ ಸಾಮಾಜಿಕ ಆರೈಕೆ ಕುರಿತು ಕಾರ್ಯಾಗಾರ ಹಾಗೂ ಮತದಾನದ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಪತ್ತಿನ ಸಂದರ್ಭದಲ್ಲಿ ಅಂಗವಿಕಲರಿಗೆ ಸಹಕಾರ ಕೊಡಬೇಕು. ಅಲ್ಲದೇ ಸಾಮಾನ್ಯ ಜನರಲ್ಲೂ ವಿಪತ್ತು ನಿರ್ವಹಣೆ ಅರಿವು ಇರಬೇಕು. ಅಂಗವಿಕಲರು ಸ್ವಶಕ್ತಿಯಿಂದ ವಿಪತ್ತು ಎದುರಿಸಲು ಸಿದ್ಧರಾಗಬೇಕು. ಅಲ್ಲದೇ ಇಂತಹ ಸಂದರ್ಭದಲ್ಲಿ ಮಾನಸಿಕ ಸಿದ್ಧತೆಯೂ ಅಗತ್ಯ ಎಂದು ತಿಳಿಸಿದರು.

ಕರ್ನಾಟಕದಲ್ಲಿ ಮಾತ್ರ ಈ ರೀತಿಯ ಕಾರ್ಯಕ್ರಮಗಳು ನಡೆಯುತ್ತಿರುವುದು ಶ್ಲಾಘನೀಯ. ಸರ್ಕಾರೇತರ ಸಂಸ್ಥೆಗಳು ಉತ್ತಮ ರೀತಿಯಲ್ಲಿ ಕೆಲಸ ಮಾಡಬೇಕು. ವಿಪತ್ತು ನಿರ್ವಹಣೆ ಕುರಿತು ಸರ್ಕಾರೇತರ ಸಂಸ್ಥೆಗಳು ವಿಕಲಚೇತನರು, ಜನರಲ್ಲಿ ಅರಿವು ಮೂಡಿಸಿ ಮಾನಸಿಕವಾಗಿ ತಯಾರು ಮಾಡಬೇಕು ಎಂದು ಜಿಲ್ಲಾ ನ್ಯಾಯಾಧೀಶರಾದ ಬಿ.ಎಸ್. ಭಾರತಿ ಅವರು ಸಲಹೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಆನಂದ್ ಪ್ರಕಾಶ್ ಮೀನಾ ಅವರು ಮಾತನಾಡಿ ಭಾರತ ಪ್ರಜಾಪ್ರಭುತ್ವ ರಾ?ವಾಗಿದೆ. ಸಂವಿಧಾನದ ಮೂಲಕ ಇಲ್ಲಿನ ಪ್ರಜೆಗಳಿಗೆ ಮತದಾನದ ಹಕ್ಕು ನೀಡಲಾಗಿದೆ. ಅಂಗವಿಕಲರು ಮತ ಚಲಾಯಿಸಬೇಕು. ವಿಶೇಷಚೇತನರಿಗೆ ನೀಡಲಾಗಿರುವ ಶೇ. 5ರ?ು ಮೀಸಲಾತಿಯನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಲಕ್ಷ್ಮಿ ಅವರು ಮಾತನಾಡಿ 2019ರಲ್ಲಿ ಕೊಡಗಿನಲ್ಲಿ ಸಂಭವಿಸಿದ ವಿಪತ್ತಿನಿಂದಾಗಿ ಬಹಳ?ು ಜೀವ, ಆಸ್ತಿ ಪಾಸ್ತಿ ಹಾನಿಯಾಯಿತು. ಈ ಸಂದರ್ಭದಲ್ಲಿ ಸಾಕ?ು ಸರ್ಕಾರೇತರ ಸಂಸ್ಥೆಗಳು ಧಾವಿಸಿ ಸಂಕ?ದಲ್ಲಿದ್ದ ಜನರಿಗೆ ಸಹಾಯ ಹಸ್ತ ಚಾಚಿದವು. ಪ್ರಕೃತಿ ನಮ್ಮ ಕೈಯಲ್ಲಿಲ್ಲ. ನಾವೆಲ್ಲ ಪ್ರಕೃತಿಯ ಕೈಗೊಂಬೆ. ಆದ್ದರಿಂದ ವಿಪತ್ತು ನಿರ್ವಹಣೆ ಅರಿವು ಹೊಂದುವುದು ಅಗತ್ಯ ಎಂದರು.

ಅಂಗವಿಕಲರಿಗೆ ಗ್ರಾಮಪಂಚಾಯಿತಿಯಲ್ಲಿ ಸಿಗಬೇಕಾದ ಸೌಲಭ್ಯಗಳನ್ನು ಒದಗಿಸಿಕೊಡಲು ಕ್ರಮವಹಿಸಲಾಗಿದೆ. ಮತದಾರರ ಗುರುತಿನ ಚೀಟಿ ಹೊಂದಿಲ್ಲದ ಅಂಗವಿಕಲರು ಗುರುತಿನ ಚೀಟಿ ಪಡೆದುಕೊಂಡು ಮುಂಬರುವ ಚುನಾವಣೆಯಲ್ಲಿ ಮತದಾನ ಮಾಡಬೇಕು ಎಂದು ಲಕ್ಷ್ಮಿ ಅವರು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ. ಶ್ರೀಧರ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸುರೇಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಹಮ್ಮದ್ ಮುಕ್ತಾರ್, ಜಿಲ್ಲಾ ಅಂಗವಿಕಲರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ರಮೇಶ್, ಮೊಬಿಲಿಟಿ ಇಂಡಿಯಾದ ಕಾರ್ಯಕಾರಿ ನಿರ್ದೇಶಕರಾದ ಆಲ್ಬಿನಾ ಶಂಕರ್, ಹಿರಿಯ ಕಾರ್ಯಕ್ರಮ ವ್ಯವಸ್ಥಾಪಕ ಆನಂದ್, ಬೆಂಗಳೂರಿನ ನಿಮಾನ್ಸ್ ನ ಡಾ. ಜಯಕುಮಾರ್ ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



# ಕಂದಾಯ ಇಲಾಖೆಯ ಅಹವಾಲುಗಳೇ ಹೆಚ್ಚು

**ಚಿಕ್ಕಬಳ್ಳಾಪುರ:** ಜಿಲ್ಲಾ ಮಟ್ಟದ ''ಜನತಾ ದರ್ಶನ'' ಕಾರ್ಯಕ್ರಮವನ್ನು ಬಾಗೇಪಲ್ಲಿ ನಗರದಲ್ಲಿ ಮೊದಲ ಬಾರಿಗೆ ಜಿಲ್ಲಾಡಳಿತ ಆಯೋಜಿಸಿದೆ. ಪ್ರತಿ 15 ದಿನಕ್ಕೊಮ್ಮೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ವಿವಿಧ ತಾಲ್ಲೂಕು ಕೇಂದ್ರಗಳಲ್ಲಿ ನಡೆಯುತ್ತಿದೆ ,ಸಾರ್ವಜನಿಕರು ಅಲ್ಲಿಯೇ ಅಹವಾಲುಗಳನ್ನು ಸಲ್ಲಿಸಿ ಪರಿಹಾರ ಕಂಡು ಕೊಳ್ಳಬಹುದು ಎಂದು ಉನ್ನತ ಶಿಕ್ಷಣ ಸಚಿವ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಮನವಿ ಮಾಡಿದರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಇವರ ಸಂಯುಕ್ತಾಶ್ರಯದಲ್ಲಿ ಬಾಗೇಪಲ್ಲಿ ನಗರದ ಸರ್ಕಾರಿ ಬಾಲಕಿಯರ ಶಾಲಾ ಸಂಕೀರ್ಣದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಎರಡನೇ ''ಜನತಾ ದರ್ಶನ'' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜನರ ಸಮಸ್ಯೆಗಳನ್ನು ಬಗೆಹರಿಸಲು ಜಿಲ್ಲಾಡಳಿತವೇ ಜನರ ಬಳಿ ಹೋಗಿ ಜನರ ಸಮಸ್ಯೆಗಳನ್ನು ಪರಿಹರಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ, ತಾವು ನೀಡುವ ಅರ್ಜಿಗಳನ್ನು ದಾಖಲು ಮಾಡಿಕೊಂಡು ನಿಗಧಿತ ಸಮಯದೊಳಗೆ ಇತ್ಯರ್ಥಪಡಿಸಲಾಗುತ್ತದೆ ಹಾಗೂ ಅರ್ಜಿ ನೀಡುವವರ ಮೊಬೈಲ್‌ಗೆ ಸಂದೇಶವು ಸಹ ಬರುವ ವ್ಯವಸ್ಥೆ ಮಾಡಲಾಗಿದೆ ಆದ್ದರಿಂದ ಜನರು ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳನ್ನು ಹೊರತುಪಡಿಸಿ ಬೇರೆ ಅರ್ಜಿಗಳು ಇದ್ದಲ್ಲಿ ನೀಡಬಹುದಾಗಿದೆ. ಸರ್ಕಾರದ ಸೂಚನೆ ಮೇರೆಗೆ ನಡೆಯುತ್ತಿರುವ ಈ ಅರ್ಥಪೂರ್ಣ ಕಾರ್ಯಕ್ರಮಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ದೊರಕಿದೆ. ಸಾರ್ವಜನಿಕರ ಸಮಸ್ಯೆಗಳು, ದೂರುಗಳು,ಅಹವಾಲುಗಳು ಮತ್ತು ಮನವಿಗಳನ್ನು ಸ್ವೀಕರಿಸಿ, ''ಜನತಾ ದರ್ಶನ'' ಕಾರ್ಯಕ್ರಮದಲ್ಲೇ ಪರಿಹರಿಸಲು ಪ್ರಯತ್ನ ಮಾಡಲಾಗುತ್ತಿದೆ, ಸ್ಥಳದಲ್ಲೇ ಪರಿಹಾರ ಮಾಡಲು ಸಾಧ್ಯವಾಗದಿದ್ದಲ್ಲಿ ಸಂಬಂಧ ಪಟ್ಟ ಇಲಾಖೆಗೆ ವರ್ಗಾಯಿಸಿ ಕಾಲಮಿತಿಯಲ್ಲಿ ವಿಲೇವಾರಿ ಮಾಡಲಾಗುತ್ತದೆ.ಈ ವ್ಯವಸ್ಥೆ ಯೋಜಿತ ರೀತಿಯಲ್ಲಿ ಡಿಜಿಟಲ್ ನಿಗಾ



ಮೂಲಕ ನಿರ್ವಹಿಸಲಾಗುತ್ತಿದೆ.ಆದ್ದರಿಂದ ಲೋಪ ಜರುಗಲು ಅವಕಾಶ ಇರುವುದಿಲ್ಲ.ಈ ಅರ್ಜಿಗಳನ್ನು ಈಗಾಗಲೇ ಚಾಲ್ತಿಯಲ್ಲಿರುವ ''ಸಾರ್ವಜನಿಕ ಕುಂದುಕೊರತೆ ನಿವಾರಣಾ ವ್ಯವಸ್ಥೆ (ಐಪಿಜಿಆರ್‌ಎಸ್-ಇಂಟೆಗ್ರೇಟೆಡ್ ಪಬ್ಲಿಕ್ ಗ್ರಿವಿಯೆನ್ಸ್ ರಿಡ್ರೆಸಲ್ ಸಿಸ್ಟಂ) ತಂತ್ರಾಂಶದಲ್ಲಿ ದಾಖಲಾಗುತ್ತದೆ ಮತ್ತು ಇಲ್ಲಿಂದಲೇ ಸಂಬಂಧಪಟ್ಟ ಇಲಾಖೆಯ ಟೇಬಲ್ಲಿಗೆ ಅರ್ಜಿಗಳ ವಿಲೇವಾರಿಯೂ ನಡೆಯುತ್ತದೆ. ಬಳಿಕ ನಿಗಾವಹಿಸಿ ಕಾಲಮಿತಿಯಲ್ಲಿ ಪರಿಹಾರ ಒದಗಿಸಲು ಕ್ರಮ ವಹಿಸಲಾಗುತ್ತದೆ ಆದ್ದರಿಂದ ಈ ಕಾರ್ಯಕ್ರಮವನ್ನು ಸಾರ್ವಜನಿಕರು ಹೆಚ್ಚಿನ ರೀತಿಯಲ್ಲಿ ಉಪಯೋಗ ಮಾಡಿಕೊಳ್ಳಲು ಅವರು ತಿಳಿಸಿದರು.

ಅಧಿಕಾರಿಗಳು ಜನರ ಸಮಸ್ಯೆಗಳ ಅಹವಾಲುಗಳಿಗೆ ಸರಿಯಾದ ರೀತಿಯಲ್ಲಿ ಸೂಕ್ತವಾಗಿ ಸ್ಪಂದಿಸದಿದ್ದರೆ, ಶಿಸ್ತು ಕ್ರಮ ಜರುಗಿಸಲಾಗುತ್ತದೆ.ಯಾವ ಉದ್ದೇಶಕ್ಕಾಗಿ ಸರ್ಕಾರಿ ಸೇವೆಯನ್ನು ಸಲ್ಲಿಸುತ್ತಿದಿರೋ,ಅದಕ್ಕೆ ಸೂಕ್ತ ನ್ಯಾಯ ಒದಗಿಸಿ ನಿಗದಿತ ಸಮಯಕ್ಕೆ ಕಾನೂನಿನ ಅಡಿಯಲ್ಲಿ ಸಮಸ್ಯೆಗಳನ್ನು ಪರಿಹರಿಸಬೇಕು.ಜನರನ್ನು ಅಲೆದಾಡಿಸದೆ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಶಾಸಕರಾದ ಎಸ್.ಎನ್ ಸುಬ್ಬಾರೆಡ್ಡಿ ಅವರು ಮಾತನಾಡಿ, ಮುಖ್ಯಮಂತ್ರಿಗಳ ದೂರದೃಷ್ಟಿಯ ಫಲವಾಗಿ ಬಾಗೆಪಲ್ಲಿ ತಾಲೂಕು ಕೇಂದ್ರದಲ್ಲಿ ಜಿಲ್ಲಾ ಮಟ್ಟದ ''ಜನತಾ ದರ್ಶನ'' ಕಾರ್ಯಕ್ರಮವನ್ನು ಅಧಿಕಾರಿಗಳು ಮತ್ತು ಜಿಲ್ಲಾ ಉಸ್ತುವಾರಿ ಸಚಿವರ ಸಮ್ಮುಖದಲ್ಲಿ ಆಯೋಜನೆ ಮಾಡಿರುವ ಈ ಕಾರ್ಯಕ್ರಮದ ಸವಲತ್ತುಗಳನ್ನು ಜನರು ಪಡೆದುಕೊಳ್ಳಬೇಕು.ಬಾಗೆಪಲ್ಲಿ ತಾಲೂಕಿನಲ್ಲಿ ಕಂದಾಯ ಇಲಾಖೆಗೆ ಸಂಬಂಧ ಪಟ್ಟ ಅರ್ಜಿಗಳೇ ಹೆಚ್ಚಾಗಿವೆ,4500 ಕ್ಕೂ ಹೆಚ್ಚು ಸಾಗುವಳಿ ಅರ್ಜಿಗಳಿದ್ದು,ಅವುಗಳನ್ನು ಇತ್ಯರ್ಥ ಪಡಿಸಲು ಅಧಿಕಾರಿಗಳಿಗೆ ತಿಳಿಸಿದರು

ಇದೆ ವೇಳೆ ಸಾರ್ವಜನಿಕರು ತಮ್ಮ ಸಮಸ್ಯೆಗಳ ಅಹವಾಲುಗಳನ್ನು ಸಚಿವರಿಗೆ ಸಲ್ಲಿಸಿದರು,

ಜನತಾ ದರ್ಶನದಲ್ಲಿ ಒಟ್ಟು 138 ಅರ್ಜಿಗಳು ಬಂದಿದ್ದು, 59 ಅರ್ಜಿಗಳು ಕಂದಾಯ ಇಲಾಖೆಗೆ ಸಂಬಂಧಿಸಿವೆ. 25 ಅರ್ಜಿಗಳು ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿವೆ.ಉಳಿದ ಅರ್ಜಿಗಳು ಸಮುದಾಯಭವನ, ಬೇಸ್ಕಾಂ, ಪಡಿತರ ಚೀಟಿ, ಶಿಕ್ಷಣ ಸೇರಿದಂತೆ ಇತರೆ ಇಲಾಖೆಗಳಿಗೆ ಸಂಬಂಧಿಸಿದ ಅರ್ಜಿಗಳನ್ನು ಬಂದಿವೆ.ಈ ಎಲ್ಲಾ ಅರ್ಜಿಗಳನ್ನು ಮುಂದಿನ 15 ದಿನಗಳ ಒಳಗಾಗಿ ಇತ್ಯರ್ಥ ಪಡಿಸಲಾಗುತ್ತದೆಂದು ಸಚಿವರು ತಿಳಿಸಿದರು. ಜಿಪಂ ಸಿಇಒ ಪ್ರಕಾಶ್ ಜಿ.ಟಿ. ನಿಟ್ಟಾಲಿ,ಸಹಾಯಕ ಪೋಲೀಸ್ ವರಿಷ್ಠಾಧಿಕಾರಿ ರಾಜಾ ಇಮಾಮ್ ಖಾತಿಮ್, ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ರಮೇಶ್, ಅಪರ ಜಿಲ್ಲಾಧಿಕಾರಿ ಡಾ|| ಎನ್.ತಿಪ್ಪೇಸ್ವಾಮಿ, ಉಪವಿಭಾಗಾಧಿಕಾರಿ ಅಶ್ವಿನ್,ತಹಸಿಲ್ದಾರ್ ಪ್ರಾಶಾಂತ್ ಪಾಟೀಲ್ ಇದ್ದರು.

# ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಗ್ರೂಪ್ 'ಡಿ' ನೌಕರ ಗೈರು ಹಾಜರಿ

ಬೆಂಗಳೂರು: ಶಿವಮೊಗ್ಗ ಜಿಲ್ಲೆಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಜೋಗ್ ವಸತಿ ನಿಲಯದಲ್ಲಿ ಗ್ರೂಪ್ 'ಡಿ' ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀಮತಿ ಮಂಜು, ಆದ ನೀವು ದಿನಾಂಕ: 29.06.2015 ರಿಂದ ಇಲ್ಲಿಯವರೆಗೆ ಯಾವುದೇ ರಜೆಯ ಅರ್ಜಿಯನ್ನು ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಿವಮೊಗ್ಗ ಜಿಲ್ಲೆ ಇವರಿಗೆ ಅಥವಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕೇಂದ್ರ ಕಛೇರಿಗೆ ಸಲ್ಲಿಸದೇ ಕರ್ತವ್ಯಕ್ಕೆ ಅನಧಿಕೃತ ಗೈರು ಹಾಜರಾಗಿರುತ್ತೀರಿ. ಈ ಗೈರುಹಾಜರಿ ಕುರಿತು ದಿನಾಂಕ:03.12.2019 ರಂದು ಇಲಾಖಾ ವಿಚಾರಣೆ ನಡೆಸಲು ಆದೇಶವಾಗಿತ್ತು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆಗೆ ಹಾಜರಾಗುವಂತೆ ಹಲವು ಬಾರಿ ನೋಟೀಸ್ ಜಾರಿ ಮಾಡಲಾಗಿದ್ದು ಇಲಾಖಾ ವಿಚಾರಣೆಗೂ ಗೈರು ಹಾಜರಾಗಿರುತ್ತೀರಿ.

ಈ ಹಿನ್ನೆಲೆ, ಕರ್ನಾಟಕ ನಾಗರೀಕ ಸೇವಾ ನಿಯಮ-108 ಮತ್ತು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತ ಮೇಲ್ಮನವಿ) ನಿಯಮಾವಳಿ ನಿಯಮ 8(ತ) ರನ್ವಯ ಪತ್ರಿಕೆಯಲ್ಲಿ ವರದಿ ಪ್ರಕಟಣೆಗೊಂಡ ದಿನಾಂಕದಿಂದ 15 ದಿನಗಳ ಒಳಗಾಗಿ ಆಯುಕ್ತರು ಹಾಗೂ ಶಿಸ್ತು ಪ್ರಾಧಿಕಾರಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೇಂದ್ರ ಕಛೇರಿ ಬೆಂಗಳೂರು ಇಲ್ಲಿ ಹಾಜರಾಗಿ ಲಿಖಿತ ವಿವರಣೆ ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ನಿಯಮಾನುಸಾರ ಮುಂದಿನ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಾಮಿ ವಿವೇಕಾನಂದ ಅವರು ನಮ್ಮ ಭಾರತ ದೇಶದ ಆದರ್ಶ ಪುರುಷ

**ಕೋಲಾರ** : ಗುರು ಎಂದರೆ ಒಬ್ಬ ವ್ಯಕ್ತಿಯಲ್ಲ ಒಂದು ಶಕ್ತಿ. ಅಜ್ಞಾನದ ಕತ್ತಲೆಯನ್ನು ಕಳೆದು ಸುಜ್ಞಾನದ ಕಡೆಗೆ ಕರೆದೊಯ್ಯುವುದೇ ಗುರು ಎಂದು ಹೇಳಿದ ಮಹಾನ್ ನಾಯಕ ಸ್ವಾಮಿ ವಿವೇಕಾನಂದ. ಅವರು ನಮ್ಮ ಭಾರತ ದೇಶದ ಆದರ್ಶ ಪುರುಷ ಎಂದು ಕರ್ನಾಟಕ ಪ್ರಚಾರ ಪ್ರಮುಖ್ ಆರ್ ಎಸ್ ಎಸ್ನ ರಾಜೇಶ್ ಪದ್ಮಾರ್ ಅವರು ತಿಳಿಸಿದರು.



ಶ್ರೀನಿವಾಸಪುರ ಕೋಲಾರ ರಸ್ತೆಯಲ್ಲಿರುವ ಸಿಬಿಐಟಿ ಇಂಜಿನಿಯರಿಂಗ್ ಕಾಲೇಜು ಸಭಾಂಗಣದಲ್ಲಿ ನಡೆದ ಚಿಂತನ ಮಂಥನ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿ ಸ್ವಾಮಿ ವಿವೇಕಾನಂದರು ಭಾರತದ ಅತ್ಯಂತ ಮೆಚ್ಚುಗೆ ಪಡೆದ ವಾಗ್ಮಿಗಳು, ಸಂತರು ಮತ್ತು ದಾರ್ಶನಿಕರಲ್ಲಿ ಒಬ್ಬರು.. ಸ್ವಾಮಿ ವಿವೇಕಾನಂದರು ಸಮಾಜದಲ್ಲಿ ಬದಲಾವಣೆ ತರಲು ಹಂಬಲಿಸಿದ ಕ್ರಾಂತಿಕಾರಿ. ಅವರ ಆರಂಭಿಕ ಜೀವನದಲ್ಲಿ, ಅವರು 1828 ರಲ್ಲಿ ರಾಮ್ ಮೋಹನ್ ರಾಯ್ ಸ್ಥಾಪಿಸಿದ ಧಾರ್ಮಿಕ ಚಳುವಳಿಯಾದ ಬ್ರಹ್ಮ ಸಮಾಜದ ಸಕ್ರಿಯ ಸದಸ್ಯರಾಗಿದ್ದರು. ಅವರು ಅನೇಕ ಸಾಮಾಜಿಕ ಚಳುವಳಿಗಳಲ್ಲಿ ಭಾಗವಹಿಸಿದರು ಮತ್ತು ಸಮಾಜದಿಂದ ಬಾಲ್ಯ ವಿವಾಹದ ಸಂಪ್ರದಾಯವನ್ನು ತೊಡೆದುಹಾಕಲು ಹೋರಾಡಿದರು.

ಶಿಕ್ಷಣವನ್ನು ಉತ್ತೇಜಿಸಿದರು ಮತ್ತು ಯಾವುದೇ ಸಾಮಾಜಿಕ ಅಥವಾ ಸಾಂಸ್ಕೃತಿಕ ಪಂಗಡಗಳನ್ನು ಲೆಕ್ಕಿಸದೆ ಪ್ರತಿಯೊಬ್ಬರೂ ಸಾಕ್ಷರರಾಗಬೇಕೆಂದು ಬಯಸಿದ್ದರು. ಶ್ರೀರಾಮಕೃಷ್ಣರು ಸಾಧಿಸಿದ ದಿವ್ಯಜ್ಞಾನದ ಆಧಾರದ ಮೇಲೆ ಎಲ್ಲ ಧರ್ಮಗಳೂ ಒಂದೇ ಗುರಿಯ ಹಾದಿಯಲ್ಲಿವೆ ಎಂಬುದನ್ನು ಬಹಿರಂಗವಾಗಿ ಜಗತ್ತಿಗೆ ಸಾರಿದರು. ಸ್ವಾಮಿ ವಿವೇಕಾನಂದರು ಬದುಕಿದ್ದು ಮೂವತ್ತು ವರ್ಷಗಳ ಕಾಲ. ಈ ಮೂವತ್ತು ವರ್ಷಗಳಲ್ಲಿ ಇಡೀ ಜಗತ್ತಿಗೆ ನಮ್ಮ ದೇಶದ ಸಂಸ್ಕೃತಿ, ಪರಂಪರೆ, ಧರ್ಮದ ಬಗ್ಗೆ ಮನದಟ್ಟು ಮಾಡಿಕೊಟ್ಟು ದೇಶದ ಹಿರಿಮೆ ಸಾರಿದ ಮಹಾನ್ ವ್ಯಕ್ತಿ. ಏಳಿ ಎದ್ದೇಳಿ ಗುರಿ ಮುಟ್ಟುವ ತನಕ ಹೋರಾಡಿ ನಿಲ್ಲದಿರಿ ಎಂದು ಯುವಕರಿಗೆ ಕರೆ ಕೊಟ್ಟ ಮೊದಲ ವ್ಯಕ್ತಿ ಸ್ವಾಮಿ ವಿವೇಕಾನಂದ ಎಂದರು.

ಈ ಸಂದರ್ಭದಲ್ಲಿ ತೋರದೇವಂಡಹಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸುನಿತಾ, ಪ್ರಾಂಶುಪಾಲರು ಶ್ರೀಯುತ ಅಪ್ರಮೇಯನ್ ಸಿಬಿಐಟಿ ಇಂಜಿನಿಯರಿಂಗ್ ಕಾಲೇಜು ಶಿಕ್ಷಕರು, ವಿದ್ಯಾರ್ಥಿಗಳು, ಮತ್ತು ಕಾಲೇಜು ಸಿಬ್ಬಂದಿಗಳು ಸೇರಿದಂತೆ ಇತರರು ಇದ್ದರು.

## ಟಿಕೇಟ್ ರಹಿತ ಪ್ರಯಾಣಿಕರಿಂದ ದಂಡ ವಸೂಲಿ

**ಬೆಂಗಳೂರು:** ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವಾಹನಗಳಲ್ಲಿ ಸಂಚರಿಸುವ ಪ್ರಯಾಣಿಕರು ಟಿಕೇಟನ್ನು ಪಡೆಯದೆ ಅನಧಿಕೃತವಾಗಿ ಪ್ರಯಾಣ ಮಾಡುವವರನ್ನು ಮತ್ತು ಸಂಸ್ಥೆಯ ಸಾರಿಗೆ ಆದಾಯದ ಸೋರಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ, ನಗರದಾದ್ಯಂತ ಸಂಚರಿಸುವ ವಾಹನಗಳನ್ನು ಸಂಸ್ಥೆಯ ತನಿಖಾ ತಂಡಗಳು ಡಿಸೆಂಬರ್-2023 ರ ಮಾಹೆಯಲ್ಲಿ ಒಟ್ಟು 16,785 ಟ್ರಿಪ್‌ಗಳನ್ನು ತಪಾಸಿಸಿ 3502 ಟಿಕೇಟ್ ರಹಿತ ಪ್ರಯಾಣಿಕರನ್ನು ಪತ್ತೆ ಹಚ್ಚಿ, ಅವರಿಂದ ಒಟ್ಟು ರೂ. 7,02,340/- ದಂಡ ವಸೂಲಿ ಮಾಡಿ ಸಂಸ್ಥೆಯ ನಿರ್ವಾಹಕರ ವಿರುದ್ಧ 1085 ಪ್ರಕರಣಗಳನ್ನು ದಾಖಲಿಸಿದ್ದಾರೆ. ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಕುಳಿತು ಪ್ರಯಾಣಿಸಿರುವ 347 ಪುರುಷ ಪ್ರಯಾಣಿಕರಿಂದ ಒಟ್ಟು ರೂ. 34,700/- ಅನ್ನು ಮೋಟಾರು ವಾಹನ ಕಾಯ್ದೆ 1988ರ ಕಾಲಂ 177 ಮತ್ತು 94 ರ ಪ್ರಕಾರ ದಂಡ ವಿಧಿಸಲಾಗಿರುತ್ತದೆ. ಒಟ್ಟಾರೆ ಡಿಸೆಂಬರ್-2023 ರ ಮಾಹೆಯಲ್ಲಿ 3849 ಪ್ರಯಾಣಿಕರಿಂದ ಒಟ್ಟು ರೂ 7,37,040/- ದಂಡವನ್ನು ವಸೂಲಿ ಮಾಡಲಾಗಿದೆ. ಪ್ರಯಾಣಿಕರು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವಾಗ ಅಧಿಕೃತ ಟಿಕೇಟ್ / ದಿನದ ಪಾಸು / ಮಾಸಿಕ ಪಾಸುಗಳನ್ನು ಪಡೆದು ಪ್ರಯಾಣಿಸುವುದು. ಇದರಿಂದ ಅನಗತ್ಯ ದಂಡ ಕಟ್ಟುವುದನ್ನು ತಡೆಯಬಹುದಾಗಿದೆ ಹಾಗೂ ಇಂತಹ ಪ್ರವೃತ್ತಿಯಿಂದ ಸಂಸ್ಥೆಯು ಉತ್ತಮ ಸೇವೆಯನ್ನು ಪ್ರಯಾಣಿಕರಿಗೆ ನೀಡಲು ಸಹಾಯವಾಗುತ್ತದೆ. ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಪುರುಷ ಪ್ರಯಾಣಿಕರು ಆಸನಗಳನ್ನು ತೆರವು ಮಾಡಿಕೊಡುವ ಮೂಲಕ ಅವರಿಗೆ ಕುಳಿತುಕೊಳ್ಳಲು ಅವಕಾಶ ನೀಡಬೇಕೆಂದು ಬಿಎಂಟಿಸಿ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಸಿಡ್ ದಾಳಿಗೆ ಒಳಗಾದ ಮಹಿಳೆಯರ ಪುನರ್ವಸತಿಗಾಗಿ ''ಗೆಳತಿ ಯೋಜನೆ''

**ಬೆಂಗಳೂರು:** ಬೆಂಗಳೂರು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ 2023-24ನೇ ಸಾಲಿನಲ್ಲಿ ಆಸಿಡ್ ದಾಳಿಗೊಳಗಾದ ಮಹಿಳೆಯರ ಪುನರ್ವಸತಿಗಾಗಿ 'ಗೆಳತಿ ಯೋಜನೆ'ಯನ್ನು ಅನುಷ್ಠಾನಗೊಳಿಸುತ್ತಿದ್ದು, ಸದರಿ ಯೋಜನೆಯಡಿ ಪ್ರತಿ ಫಲಾನುಭವಿಗೆ ಘಟಕ ವೆಚ್ಚ ರೂ.5,00.000/- (ಸಾಲ ರೂ.2,50,000/- ಹಾಗೂ ಸಹಾಯಧನ ರೂ.2,50,000/-ಗಳು) ವರೆಗೆ ನೀಡಲಾಗುತ್ತದೆ. ಗೆಳತಿ ಯೋಜನೆಯಡಿ ಆಸಿಡ್ ದಾಳಿಗೊಳಗಾದ ಸಂತ್ರಸ್ತ ಮಹಿಳೆಯರು ನಿಗದಿತ ಅರ್ಜಿ ನಮೂನೆಯನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, 6ನೇ ಮಹಡಿ, ಜಯನಗರ ವಾಣಿಜ್ಯ ಸಂಕೀರ್ಣ, 4ನೇ ಬ್ಲಾಕ್, ಜಯನಗರ, ಬೆಂಗಳೂರು- 560011 ಇಲ್ಲಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಕಛೇರಿ ಅವಧಿಯಲ್ಲಿ ಜನವರಿ 31 ರೊಳಗೆ ಸದರಿ ಕಚೇರಿಗೆ ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲೆಯ ಉಪ ನಿರ್ದೇಶಕರನ್ನು ಸಂಪರ್ಕಿಸುವಂತೆ ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದೆ.

## ನೀರಿನ ಅದಾಲತ್

**ಬೆಂಗಳೂರು:** ಬೆಂಗಳೂರು ಜಲ ಮಂಡಳಿಯ ವಿವಿಧ ಉಪ ವಿಭಾಗಗಳಾದ ವಾಯುವ್ಯ-2, ವಾಯುವ್ಯ-4, ಕೇಂದ್ರ 1-2, ಈಶಾನ್ಯ - 2, ಉತ್ತರ 1-2, ಉತ್ತರ 2-2, ದಕ್ಷಿಣ 1-2, ದಕ್ಷಿಣ 2?2, ನೈರುತ್ಯ -2, ನೈರುತ್ಯ -5, ಪೂರ್ವ 1-3 ಮತ್ತು ಪೂರ್ವ 2-3, ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದು ಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಜನವರಿ 18 ರಂದು ಬೆಳಿಗ್ಗೆ 9.30 ಗಂಟೆಯಿಂದ 11.00 ಗಂಟೆಯವರೆಗೆ ನೀರಿನ ಅದಾಲತ್‌ನ್ನು ನಡೆಸಲಾಗುವುದು. ನೀರಿನ ಅದಾಲತ್ ಸೇವಾಠಾಣೆಗಳು ಹೆಚ್. ಎಂ.ಟಿ, ಪೀಣ್ಯ, ದಾಸರಹಳ್ಳಿ, ಪೀಣ್ಯ, ಲಿಂಗಧೀರನಹಳ್ಳಿ, ಅಂದರಹಳ್ಳಿ, ಹೆಗ್ಗನಹಳ್ಳಿ, ಕೊಟ್ಟಿಗೆಪಾಳ್ಯ, ಹೇರೋಹಳ್ಳಿ, ಫ್ರೇಜರ್‌ಟೌನ್, ಮಚಲಿಬೆಟ್ಟ, ಪಿಳ್ಳಣ್ಣಗಾರ್ಡನ್ 12, ಕೆಂಪೇಗೌಡ ಟವರ್, ಕುಮಾರ ಪಾರ್ಕ್, ಜಯಮಹಲ್, ಸಂಜಯನಗರ, ನ್ಯೂ ಬಿ.ಇ.ಎಲ್. ರಸ್ತೆ, ಆರ್.ಟಿ.ನಗರ ಕಾವಲ್ ಬೈರಸಂದ್ರ, ಗಂಗಾನಗರ, ಆನಂದನಗರ, ಮನೋರಾಯನಪಾಳ್ಯ, ಸಿಂಗಾಪುರ, ವಿದ್ಯಾರಣ್ಯಪುರ, ಸಹಕಾರನಗರ, ಹೆಚ್. ಎಸ್.ಆರ್-1, ಕೋಡಿಚಿಕ್ಕನಹಳ್ಳಿ, ಬೊಮ್ಮನಹಳ್ಳಿ, ಕೂಡ್ಲು, ಬೇಗೂರು, ವಿ.ವಿ.ಪುರಂ, ಸುಧಾಮನಗರ-2, ಕೆಂಪೇಗೌಡ ನಗರ, ಜಗಜೀವನರಾಮ್ ನಗರ, ಚಾಮರಾಜಪೇಟೆ, ಬನಗಿರಿನಗರ, ಬಿ.ಎಸ್.ಕೆ-1 2, ಕುಮಾರಸ್ವಾಮಿ ಲೇಔಟ್, ಇಸ್ರೋ ಲೇಔಟ್, ಪೂರ್ಣ ಪ್ರಜ್ಞಾ ಲೇಔಟ್, ಪೂರ್ವ ವಿಲೇಜ್-2-1, 2-2, ಕಾಡುಗೋಡಿ ವರ್ತೂರು, ಐ.ಎಸ್.ಪಿ.ಎಸ್. ಹೊರಮಾವು, ರಾಜಾಕೆನಲ್ ವ್ಯಾಪ್ತಿಯಲ್ಲಿ ನೀರಿನ ಅದಾಲತ್ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಳಿಯ 24ಥ7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916ಗೆ ಕರೆ ಮಾಡಿ ದೂರುಗಳನ್ನು ದಾಖಲಿಸಬಹುದು. ಹಾಗೂ ವಾಟ್ಸ್ ಆಫ್ ಸಂಖ್ಯೆ 8762228888 ಸಂದೇಶದ ಮೂಲಕ ದೂರನ್ನು ಸಲ್ಲಿಸಬಹುದಾಗಿದೆ ಎಂದು ಬೆಂಗಳೂರು ಜಲ ಮಂಡಳಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಹಕ ಸಂವಾದ ಸಭೆ

**ಬೆಂಗಳೂರು:** ಬೆಸ್ಕಾಂನ ಎಲ್ಲಾ ಕಾರ್ಯ ಮತ್ತು ಪಾಲನಾ ಉಪವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3 ಗಂಟೆಯಿಂದ ಸಂಜೆ 5.30 ರವರೆಗೆ ನಡೆಯುವ ಗ್ರಾಹಕ ಸಂವಾದ ಸಭೆಗಳಲ್ಲಿ, ಗ್ರಾಹಕ ಬಾಂಧವರು ಪಾಲ್ಗೊಂಡು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬೆಸ್ಕಾಂನ ಅಧಿಕಾರಿಗಳೊಂದಿಗೆ ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಬೆಸ್ಕಾಂನ ಪ್ರಧಾನ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಿಂಗತ್ವ ಅಲ್ಪಸಂಖ್ಯಾತರು ಶಿಕ್ಷಣ, ಉನ್ನತ ಹುದ್ದೆಗಳ ಗುರಿ ಹೊಂದಬೇಕು

**ಚಾಮರಾಜನಗರ:** ಲಿಂಗತ್ವ ಅಲ್ಪಸಂಖ್ಯಾತರು ಹೆಚ್ಚಿನ ಶಿಕ್ಷಣ ಪಡೆದು ಉನ್ನತ ಹುದ್ದೆಗಳನ್ನು ಏರುವ ಗುರಿ ಇಟ್ಟುಕೊಂಡು ಸಮಾಜದಲ್ಲಿ ಉತ್ತಮ ಸ್ಥಾನ ಪಡೆಯಬೇಕು ಎಂದು ಜಿಲ್ಲಾ ಪ್ರಧಾನ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಬಿ.ಎಸ್. ಭಾರತಿ ಅವರು ಸಲಹೆ ಮಾಡಿದರು.

ನಗರದ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಸಮತಾ ಸೊಸೈಟಿ ಹಾಗು ತಾಲೂಕು ಸ್ತ್ರೀ ಶಕ್ತಿ ಒಕ್ಕೂಟಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಲೈಂಗಿಕ ಮತ್ತು ಅಲ್ಪಸಂಖ್ಯಾತರ ಅರಿವು ಹಾಗೂ ಮತದಾನದ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಲಿಂಗತ್ವ ಅಲ್ಪಸಂಖ್ಯಾತರು ಶಿಕ್ಷಣ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಮುಂದೆ ಬರಬೇಕು. ಶೈಕ್ಷಣಿಕವಾಗಿ ಅಭಿವೃದ್ಧಿಯಾಗಿ ಉನ್ನತ ಹುದ್ದೆಗಳನ್ನು ಪಡೆಯಬೇಕು. ಸಣ್ಣ ಪುಟ್ಟ ಕೆಲಸಗಳಿಗೆ ತೃಪ್ತಿ ಪಡಬಾರದು. ಏಳಿ ಎದ್ದೇಳಿ ಗುರಿಮುಟ್ಟುವ ತನಕ ನಿಲ್ಲದಿರಿ ಎಂಬ ವಿವೇಕಾನಂದರ ಸಂದೇಶವನ್ನು ಪಾಲಿಸಿ ಉತ್ತಮ ಗುರಿ ಇಟ್ಟುಕೊಂಡು ಸಾಧನೆ ಮಾಡಿದರೆ ಸಮಾಜದಲ್ಲಿ ಗೌರವ ಸಿಗಲಿದೆ ಎಂದರು.

ಲಿಂಗತ್ವ ಅಲ್ಪಸಂಖ್ಯಾತರ ಬಗೆಗಿನ ಕಾಳಜಿ ಹಾಗೂ ಅವರ ಶ್ರೇಯೋಭಿವೃದ್ದಿಗೆ ನೆರವಾಗಲು ಪೂರಕವಾಗಿರುವ ಜಾಗೃತಿ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆಯೋಜಿಸಿರುವುದು ಶ್ಲಾಘನೀಯವಾಗಿದೆ. ಲಿಂಗತ್ವ ಅಲ್ಪಸಂಖ್ಯಾತರ ನೋವು ಅರ್ಥ ಮಾಡಿಕೊಂಡಿರುವ ಜಿಲ್ಲಾಧಿಕಾರಿಗಳು ಜಿಲ್ಲೆಯಲ್ಲಿ ಅಧಿಕಾರಿಗಳಿಗೆ ಅರಿವಿನ ಕಾರ್ಯಕ್ರಮ ಏರ್ಪಡಿಸಿ ಒದಗಿಸಬೇಕಿರುವ ಸೌಲಭ್ಯಗಳಿಗೆ ಮುಂದಾಗಿರುವುದು ವಿಶೇಷವಾಗಿದೆ. ಇಂತಹ ಉತ್ತಮ ಕಾರ್ಯಕ್ಕೆ ತೊಡಗಿರುವ ಜಿಲ್ಲಾಧಿಕಾರಿಯವರಿಗೆ ಧನ್ಯವಾದಗಳನ್ನು ಹೇಳಬೇಕು ಎಂದು ಜಿಲ್ಲಾ ನ್ಯಾಯಾಧೀಶರಾದ ಬಿ.ಎಸ್. ಭಾರತಿ ಅವರು ತಿಳಿಸಿದರು.



ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮಾತನಾಡಿ ಲಿಂಗತ್ವ ಅಲ್ಪಸಂಖ್ಯಾತ ಸಮುದಾಯದ ಬಗ್ಗೆ ಇರುವ ತಾತ್ಸಾರ, ತಪ್ಪು ಕಲ್ಪನೆ, ನಕಾರಾತ್ಮಕ ಧೋರಣೆ ಬದಲಾಗಬೇಕು. ಈ ಸಮುದಾಯವನ್ನು ಗೌರವದಿಂದ ನಡೆಸಿಕೊಳ್ಳಬೇಕು. ಅವರಿಗೆ ಸಿಗಬೇಕಿರುವ ಸವಲತ್ತುಗಳನ್ನು ಸಮರ್ಪಕವಾಗಿ ತಲುಪಿಸಿ ಸಮಾಜದ ಮುಖ್ಯವಾಹಿನಿಗೆ ತರಬೇಕು ಎನ್ನುವ ಸದಾಶಯದೊಂದಿಗೆ ಅಧಿಕಾರಿಗಳಿಗೆ ಕಾರ್ಯಾಗಾರ ಏರ್ಪಡಿಸಲಾಗಿದೆ ಎಂದರು.

ಲಿಂಗತ್ವ ಅಲ್ಪಸಂಖ್ಯಾತರಿಗೆ ವಿವಿಧ ಕ್ಷೇತ್ರಗಳಲ್ಲಿ ಹೆಚ್ಚಿನ ಅವಕಾಶ ಕಲ್ಪಿಸುವುದು ನಮ್ಮ ಉದ್ದೇಶವಾಗಿದೆ. ತಳಮಟ್ಟದಲ್ಲಿ ವಿವಿಧ ಇಲಾಖೆಗಳಿಂದ ನೆರವು ಸಿಗಬೇಕಿದೆ. ಉದ್ಯೋಗ ಖಾತರಿ ಯೋಜನೆ ಇರಬಹುದು, ಆರೋಗ್ಯ, ರಕ್ಷಣೆ, ಇನ್ನಿತರ ಯಾವುದೇ ಇಲಾಖೆಗಳ ಸೌಲಭ್ಯಗಳೇ ಇರಲಿ ಈ ಸಮುದಾಯಕ್ಕೆ ಆದ್ಯತೆ ದೊರಕಬೇಕು. ಲಿಂಗತ್ವ ಅಲ್ಪಸಂಖ್ಯಾತರಿಗೆ ಅಧಿಕಾರಿಗಳು ಸ್ಪಂದಿಸಿ ಸವಲತ್ತು ತಲುಪಿಸುವಲ್ಲಿ ಜಿಲ್ಲೆ ಮಾದರಿಯಾಗಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಲಿಂಗತ್ವ ಅಲ್ಪಸಂಖ್ಯಾತರಿಗೆ ಗುರುತಿನ ಕಾರ್ಡ್‌ಗಳನ್ನು ಹೆಚ್ಚು ಸಂಖ್ಯೆಯಲ್ಲಿ ಮೊದಲ ಬಾರಿಗೆ ವಿತರಿಸಲು ಆರಂಭಿಸಿದ್ದು ಚಾಮರಾಜನಗರ ಜಿಲ್ಲೆಯಾಗಿದೆ. ಇದರಿಂದ ವಿವಿಧ ಸರ್ಕಾರಿ ಯೋಜನೆಗಳ ಸೌಲಭ್ಯ ಪಡೆಯಲು ಅನುಕೂಲವಾಗಿದೆ. ಲಿಂಗತ್ವ ಅಲ್ಪಸಂಖ್ಯಾತರಿಗೆ ಶಿಕ್ಷಣ ಪಡೆಯಲು ಯಾವುದೇ ಹಂತದಲ್ಲಿ ಎದುರಾಗಬಹುದಾದ ತೊಂದರೆಗಳನ್ನು ನಿವಾರಿಸಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬೇಕಿದೆ. ಶಾಲಾ ಕಾಲೇಜು ಪ್ರವೇಶಾತಿ, ವಸತಿ ನಿಲಯ, ಕೌಶಲ ತರಬೇತಿ, ಬೌದ್ಧಿಕ ಸಾಮರ್ಥ್ಯ ಹೆಚ್ಚುಗೊಳಿಸುವ ಉದ್ದೇಶವನ್ನಿಟ್ಟುಕೊಂಡು ಸಮಗ್ರವಾದ ಕಾರ್ಯ ವಿಧಾನ ರೂಪಿಸಲಾಗುತ್ತದೆ. ಇದಕ್ಕಾಗಿ ಜಿಲ್ಲಾಡಳಿತ ಎಲ್ಲಾ ರೀತಿಯ ಸಹಕಾರ ನೀಡಲಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು. ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ. ಶ್ರೀಧರ ಅವರು ಮಾತನಾಡಿ ಅನ್ಯಾಯ, ಶೋಷಣೆಗೆ ಒಳಗಾದ ಸಮುದಾಯಗಳಿಗೆ ಸ್ಪಂದಿಸಿ ಸರ್ಕಾರದ ಅನುಕೂಲಗಳನ್ನು ಒದಗಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ. ಅಧಿಕಾರಿಗಳು ಸಂವೇದನಾ ಶೀಲರಾಗಿ ಕಾರ್ಯನಿರ್ವಹಿಸಬೇಕಿದೆ. ಇದಕ್ಕಾಗಿಯೇ ಜಿಲ್ಲಾಧಿಕಾರಿಯವರು ಲಿಂಗತ್ವ ಅಲ್ಪಸಂಖ್ಯಾತರ ಬಗ್ಗೆ ಜಾಗೃತಿ ಮೂಡಿಸಲು ಕಾರ್ಯಗಾರ ಏರ್ಪಾಡು ಮಾಡಿರುವುದು ಅತ್ಯುತ್ತಮ ಕೆಲಸವಾಗಿದೆ ಎಂದರು.

ಪ್ರತಿಯೊಬ್ಬರಿಗೂ ಘನತೆ ಗೌರವದಿಂದ ಬದುಕುವ ಅವಕಾಶವನ್ನು ಸಂವಿಧಾನ ಕಲ್ಪಿಸಿದೆ. ಲಿಂಗತ್ವ ಅಲ್ಪಸಂಖ್ಯಾತರು ಸಮಾಜದಲ್ಲಿ ಸರಿ ಸಮನಾದ ಎಲ್ಲಾ ಅವಕಾಶಗಳನ್ನು ಪಡೆಯಬೇಕಿದೆ. ದೃತಿಗೆಡದೆ ಅವಕಾಶಗಳನ್ನು ಬಳಸಿಕೊಂಡು ಸಮಾಜದಲ್ಲಿ ಬದಲಾಗಬೇಕು. ಗುರುತರವಾದ ಸ್ಥಾನ ಪಡೆದುಕೊಳ್ಳಬೇಕು. ಕಾನೂನು ನೆರವು ಅಗತ್ಯವಿದ್ದಲ್ಲಿ ಕಾನೂನು ಸೇವೆಗಳ ಪ್ರಾಧಿಕಾರವು ಸಹಾಯ ಮಾಡಲಿದೆ ಎಂದು ನ್ಯಾಯಾಧೀಶರಾದ ಎಂ. ಶ್ರೀಧರ ಅವರು ತಿಳಿಸಿದರು.

ಸಮತಾ ಸೊಸೈಟಿಯ ಅಧ್ಯಕ್ಷರಾದ ದೀಪ ಬುದ್ದೆ ಅವರು ಮಾತನಾಡಿ ಲಿಂಗತ್ವ ಅಲ್ಪಸಂಖ್ಯಾತ ಸಮುದಾಯಕ್ಕೆ ಜಿಲ್ಲೆಯಲ್ಲಿ ಗುರುತಿನ ಕಾರ್ಡುಗಳನ್ನು ವಿತರಿಸಿ ಜಿಲ್ಲಾಡಳಿತ ಅನುಕೂಲ ಮಾಡಿಕೊಟ್ಟಿದೆ. ಶಿಕ್ಷಣ, ಉದ್ಯೋಗ ಪಡೆದು ದಿಟ್ಟ ಜೀವನ ನಡೆಸಬೇಕು. ಜಿಲ್ಲಾಧಿಕಾರಿಗಳು ನಮ್ಮ ಬಗ್ಗೆ ವಿಶೇಷ ಕಾಳಜಿ ಇಟ್ಟುಕೊಂಡು ಸಮುದಾಯದ ಪರವಾಗಿ ಹಲವು ಅಭಿವೃದ್ಧಿ ಕಾರ್ಯಗಳಿಗೆ ಮುಂದಾಗಿದ್ದಾರೆ. ತಾಲೂಕು ಜಿಲ್ಲಾ ಮಟ್ಟದಲ್ಲಿಯೂ ಸಭೆ ನಡೆದಿದ್ದು, ಇದೀಗ ಜಿಲ್ಲಾ ಮಟ್ಟದ ಕಾರ್ಯಗಾರ ಆಯೋಜನೆ ಮಾಡಿದ್ದಾರೆ. ಇದಕ್ಕಾಗಿ ಜಿಲ್ಲಾಧಿಕಾರಿಯವರಿಗೆ ಕೃತಜ್ಞತೆಗಳನ್ನು ಅರ್ಪಿಸುವುದಾಗಿ ನುಡಿದರು.

ಬೆಂಗಳೂರಿನ ಪಯಣ ಸಂಸ್ಥೆಯ ಚಾಂದಿನಿ ಅವರು ಲಿಂಗತ್ವ ಲೈಂಗಿಕ ಅಲ್ಪಸಂಖ್ಯಾತರ ವಿವಿಧತೆ ಕುರಿತು, ಜೀವ ಸಂಸ್ಥೆಯ ಪಿ. ಉಮಾ ಅವರು ಲಿಂಗತ್ವ ಅಲ್ಪಸಂಖ್ಯಾತರ ಅಸ್ತಿತ್ವಕ್ಕಾಗಿ ಸಾಮಾಜಿಕ ಹೋರಾಟಗಳ ಕುರಿತು, ಕರ್ನಾಟಕ ಲೈಂಗಿಕ ಅಲ್ಪಸಂಖ್ಯಾತರ ವೇದಿಕೆಯ ಮಲ್ಲಮ್ಮ ಕುಂಬಾರ್ ಅವರು ಲೈಂಗಿಕ ಮತ್ತು ಲಿಂಗತ್ವ ಅಲ್ಪಸಂಖ್ಯಾತರಿಗೆ ಇರುವ ಸರ್ಕಾರಿ ಯೋಜನೆಗಳು ಮತ್ತು ಟ್ರಾನ್ಸ್ ಜೆಂಡರ್ ಪಾಲಿಸಿ 2017 ಬಗ್ಗೆ, ಸಾರಥ್ಯ ಒಕ್ಕೂಟದ ಕೆ. ತ್ರಿಮೂರ್ತಿ ವಿಶಿಷ್ಟ ಲೈಂಗಿಕತೆ ಅಲ್ಪಸಂಖ್ಯಾತರು ಕುರಿತು ವಿಷಯ ಮಂಡನೆ ಮಾಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಆನಂದ್ ಪ್ರಕಾಶ್ ಮೀನಾ, ತಹಶೀಲ್ದಾರ್ ಬಸವರಾಜು, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಲಕ್ಷ್ಮಿ.ಪಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಮಂಜುನಾಥ, ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಭಿವೃದ್ಧಿ ನಿರೀಕ್ಷಕರಾದ ಶಿವಲೀಲ ಬೆಟಗೇರಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್



## ಏಕವ್ಯಕ್ತಿ ಪ್ರದರ್ಶನ

ಪ್ರಶಸ್ತಿ-ಪುರಸ್ಕೃತ ಸಂಗೀತಗಾರ್ತಿ ಮತ್ತು ಪರಿಸರವಾದಿ ಸುಷ್ಮಾ ಸೋಮ '' ಹೋಮ್ ಎಸ್.ಒ.ಎಸ್: ಸೌಂಡ್ಸ್ ಆಫ್ ಸಸ್ಟೇನಬಿಲಿಟಿ'' ಎಂಬ ತಲ್ಲೀನಗೊಳಿಸುವ ಮತ್ತು ಚಿಂತನೆಗೆ ಹಚ್ಚುವ ಕಾರ್ಯಕ್ರಮ ನೀಡುತ್ತಿದ್ದು ಇದು. ಸಂಗೀತದ ಅನುಭವದ ಆಚೆ ಕೊಂಡೊಯ್ಯುತ್ತದೆ. ಇದು ಕ್ರಮ ಕೈಗೊಳ್ಳಲು ಕರೆಯಾಗಿದ್ದು ನಮ್ಮ ಮನೆ ನಮ್ಮ ಭೂಗ್ರಹವನ್ನು ಸರಳವಾದ ಪ್ರಜ್ಞಾಪೂರ್ವಕ, ಪರಿಸರ-ಸ್ನೇಹಿ ಆಯ್ಕೆಗಳು ಮತ್ತು ನಿಸರ್ಗ, ವನ್ಯಜೀವಿ ಮತ್ತು ಪರಿಸರಕ್ಕೆ ಹೆಚ್ಚಿನ ಸಹಾನುಭೂತಿಯ ಸಣ್ಣ ಬದಲಾವಣೆಗಳಿಂದ ಸಾಧಿಸಬಹುದು. ಸಂಗೀತದ ಆಕರ್ಷಕ ಸಂಯೋಜನೆಯೊಂದಿಗೆ ಎಚ್ಚರಿಕೆಯಿಂದ ರೂಪಿಸಲಾದ ಈ 2.5 ಗಂಟೆಗಳ ಪ್ರದರ್ಶನವು ನಮ್ಮ ಸುಂದರ ಮತ್ತು ದುಃಖಕರ ಮನೆಯಾಗಿರುವ ಭೂಮಿಯ ಕುರಿತಾದ ವೈರುಧ್ಯದ ಮುಖಗಳನ್ನು ಬಿತ್ತರಿಸುತ್ತದೆ. ಏಕವ್ಯಕ್ತಿ ಪ್ರದರ್ಶನದಿಂದ ಸಂಗೀತಗಾರರ ಸಮೂಹದವರೆಗೆ ಈ ಪ್ರದರ್ಶನವು ಭಾವನೆಗಳು,ದುಃಖ, ಕೋಪ ಮತ್ತು ಹಿಪೋಕ್ರಸಿ ಇತ್ಯಾದಿಗಳ ಮೂಲಕ ಪರಿಸರದೊಂದಿಗೆ ಮಾನವನ ಸೂಕ್ಷ್ಮ ಸಂಬಂಧವನ್ನುಸೆರೆ ಹಿಡಿಯುತ್ತದೆ. ಪ್ರಶಸ್ತಿ ಪುರಸ್ಕೃತ ಸಂಗೀತಗಾರ್ತಿ ಹಾಗೂ ಪರಿಸರ ವಕ್ತಾರರಾದ ಸುಷ್ಮಾ ಸೋಮ ಅವರ ಕಲ್ಪನೆಯ ಕೂಸಾದಹೋಮ್ ಎಸ್.ಒ.ಎಸ್. ತಾಳವಾದ್ಯ ಕಲಾವಿದ ಮತ್ತು ಸಂಗೀತ ನಿರ್ಮಾಪಕ ಪ್ರವೀಣ್ ಸ್ಪರ್ಶ್ ಮತ್ತು ಭರತನಾಟ್ಯ ನೃತ್ಯ ಸಂಯೋಜಕಿ ಮತ್ತು ನೃತ್ಯಗಾರ್ತಿ ಮೈಥಿಲಿ ಪ್ರಕಾಶ್ ಅವರ ಸಹಯೋಗ ಹೊಂದಿದೆ. ಈಪ್ರದರ್ಶನವು ಭೂ ಗ್ರಹದ ಮೇಲೆ ಅಪಾರ ಕಾಳಜಿ ಹೊಂದಿದ ಬ್ರಾಂಡ್ ಗಳ ಧ್ವನಿಗಳು, ಸುಸ್ಥಿರತೆಗೆ ಆದ್ಯತೆನೀಡುವ ಸಂಸ್ಥೆಗಳು, ಸಂಗೀತಗಾರರು, ನಾಗರಿಕರು, ಲಾಭರಹಿತ ಸಮೂಹಗಳು ಮತ್ತು ಕಥೆ ಹೇಳುವವರನ್ನುಒಗ್ಗೂಡಿಸುವ ಗುರಿ ಹೊಂದಿದೆ. ಎಲ್ಲಿ: ಬೆಂಗಳೂರು ಕ್ರಿಯೇಟಿವ್ ಸರ್ಕಸ್, ಬೆಂಗಳೂರು ಎಂದು: ಜನವರಿ 20 । ಸಂಜೆ 6ರ ನಂತರ.

## ಬನಾನ ಇಡ್ಲಿ

### ಪಾಕ ಶಾಲೆ



### ಮಾಡುವ ವಿಧಾನ

ಮೊದಲಿಗೆ ಬಾಳೆ ಹಣ್ಣಿನ ಸಿಪ್ಪೆ ಸುಲಿದು, ನಂತರ ಬಾಳೆ ಹಣ್ಣನ್ನು ಮ್ಯಾಶರ್ ಅಥವಾ ಕೈಯಿಂದ ಪೇಸ್ಟ್ ರೀತಿಯಲ್ಲಿ ಮಾಡಿ.

ಈಗ ಅದಕ್ಕೆ ರವೆ, ತೆಂಗಿನ ತುರಿ, ಸಕ್ಕರೆ, ಅಡುಗೆ ಸೋಡಾ, ಚಿಟಕೆಯಷ್ಟು ಉಪ್ಪು, ಬಟಾಣಿ ಹಾಕಿ ಮಿಕ್ಸ್ ಮಾಡಿ, ಇಡ್ಲಿಯ ಹದಕ್ಕೆ ತರಲು ಸ್ವಲ್ಪ ನೀರು ಸೇರಿಸಬಹುದು.

ಈಗ ಇಡ್ಲಿ ತಟ್ಟೆಗೆ ತುಪ್ಪ ಸವರಿ ಅದಕ್ಕೆ ಇಡ್ಲಿ ಹಿಟ್ಟು ಹಾಕಿ ಆವಿಯಲ್ಲಿ 15-20 ನಿಮಿಷ ಬೇಯಿಸಿದರೆ ಬಾಳೆ ಹಣ್ಣಿನ ಇಡ್ಲಿ ರೆಡಿ.

ಈ ಬಾಳೆ ಹಣ್ಣಿನ ಇಡ್ಲಿಯನ್ನು ತೆಂಗಿನ ಹಾಲು ಅಥವಾ ಹಾಲಿನ ಜೊತೆ ತಿನ್ನಲು ತುಂಬಾ ರುಚಿಯಗಿರುತ್ತದೆ.

### ಬೇಕಾಗಿರುವ ಪದಾರ್ಥ

**ರವಾ 1 ಕಪ್, ತೆಂಗಿನ ತುರಿ 1/4 ಕಪ್, ಹಣ್ಣಾದ ಬಾಳೆ ಹಣ್ಣು 3-4, ಚಿಟಿಕೆಯಷ್ಟು ಉಪ್ಪು, ಸಕ್ಕರೆ (ಸಿಹಿಗೆ ತಕ್ಕಷ್ಟು), ಅಡುಗೆ ಸೋಡಾ ಅರ್ಧ ಚಮಚ, ತುಪ್ಪ1 ಚಮಚ, ಹಸಿ ಬಟಾಣಿ 1/4 ಕಪ್(ಬೇಕಿದ್ದರೆ)**

# ಹನುಮಾನ್ ಚಿತ್ರ ಮೆಚ್ಚಿಕೊಂಡ ರಿಷಬ್



ಸಂಕ್ರಾಂತಿ ಹಬ್ಬದಂದು ರಿಲೀಸ್ ಆದ 'ಹನುಮಾನ್' ಸಿನಿಮಾ ಬಾಕ್ಸ್ ಆಫೀಸ್ನಲ್ಲಿ ಉತ್ತಮ ಗಳಿಕೆ ಕಾಣುತ್ತಿದೆ. ಅಲ್ಲದೆ, ಪ್ಯಾನ್ ಇಂಡಿಯಾ ಲೆವೆಲ್ನಲ್ಲಿ ಮಿಂಚಲು ಸಿದ್ದವಾಗುತ್ತಿದೆ. ಮಹೇಶ್ ಬಾಬು ಅಭಿನಯದ 'ಗುಂಟೂರು ಕರಂ', ವೆಂಕಟೇಶ್ ಅವರ 'ಸೈಂಧವ', ನಾಗಾರ್ಜುನ 'ನಾ ಸಮಿರಂಗ' ಚಿತ್ರಗಳನ್ನು ಹಿಂದಿಕ್ಕಿ ಈ ಸಿನಿಮಾ ಬಾಕ್ಸ್ ಆಫೀಸ್ನಲ್ಲಿ ಘರ್ಜಿಸುತ್ತಿದೆ.

ಮೊದಲ ಶೋನಿಂದಲೇ ಪಾಸಿಟಿವ್ ಟಾಕ್ ಗಿಟ್ಟಿಸಿಕೊಂಡಿರುವ ಈ ಸಿನಿಮಾ ದಿನದಿಂದ ದಿನಕ್ಕೆ ಕಲೆಕ್ಷನ್ಗಳ ಮಳೆಯೊಂದಿಗೆ ಮುನ್ನುಗ್ಗುತ್ತಿದೆ. ಭಾರತ ಹಾಗೂ ವಿದೇಶಗಳಲ್ಲೂ ಉತ್ತಮ ಕಲೆಕ್ಷನ್ ಮಾಡುತ್ತಿದೆ. ಜನವರಿ 12 ರಂದು ಬಿಡುಗಡೆಯಾದ ಈ ಚಿತ್ರವು ರೂ. 100 ಕೋಟಿ ಕ್ಲಬ್ ಸೇರಿದೆ.

ಇನ್ನು ಹನುಮಾನ್ ಸಿನಿಮಾ ನೋಡಿ ಹಲವು ಸೆಲೆಬ್ರಿಟಿಗಳು ಶ್ಲಾಘಿಸುತ್ತಿದ್ದಾರೆ. ಪ್ರಶಾಂತ್ ವರ್ಮಾ ಅವರ ನಿರ್ದೇಶನ ಮತ್ತು ತೇಜ ಸಜ್ಜ ಅವರ ನಟನೆಯನ್ನು ಪ್ರಶಂಸಿಸುತ್ತಿದ್ದಾರೆ. ಮೆಗಾಸ್ಟಾರ್ ಚಿರಂಜೀವಿ, ಮಾಸ್ ಮಹಾರಾಜ ರವಿತೇಜ, ಗೋಪಿಚಂದ್ ಮತ್ತು ನಿರ್ದೇಶಕ ರಾಮ್ ಗೋಪಾಲ್ ವರ್ಮಾ ಈಗಾಗಲೇ ಈ ಚಿತ್ರವನ್ನು ಶ್ಲಾಘಿಸಿದ್ದಾರೆ.

ಈ ಪಟ್ಟಿಗೆ ಇತ್ತೀಚೆಗೆ ಕನ್ನಡದ ಹೀರೋ ರಿಷಬ್ ಶೆಟ್ಟಿ ಸೇರಿಕೊಂಡಿದ್ದಾರೆ. ಇತ್ತೀಚೆಗಷ್ಟೇ 'ಹನುಮಾನ್' ಸಿನಿಮಾ ವೀಕ್ಷಿಸಿ ಎಕ್ಸ್ ಖಾತೆಯಲ್ಲಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ನಿರ್ದೇಶಕ ಪ್ರಶಾಂತ್ ವರ್ಮಾ ಮತ್ತು ನಟ ತೇಜ ಸಜ್ಜನ್ ಅವರನ್ನು ಪ್ರಶಂಸೆಯ ಸುರಿಮಳೆಗೈದಿದ್ದಾರೆ. ಹನುಮಾನ್ ಚಿತ್ರವನ್ನು ಇಷ್ಟ ಪಡುವವರ ಪಟ್ಟಿಗೆ ಸೇರಲು ನನಗೆ ಸಂತೋಷವಾಗಿದೆ. ನಿರ್ದೇಶಕ ಪ್ರಶಾಂತ್ ವರ್ಮಾ ಕಥೆ ಹೇಳುವ ರೀತಿ ಅದ್ಭುತವಾಗಿದೆ. ತೇಜ ಸಜ್ಜನ ಅಭಿನಯವೂ ಚೆನ್ನಾಗಿದೆ. ಅವರ ಅಭಿನಯವನ್ನು ಪ್ರೇಕ್ಷಕರು ದೀರ್ಘಕಾಲ ನೆನಪಿನಲ್ಲಿಟ್ಟುಕೊಳ್ಳುತ್ತಾರೆ,ಎಂದು ರಿಷಬ್ ಟ್ವೀಟ್ ಮಾಡಿದ್ದಾರೆ. ಪ್ರಶಾಂತ್ ವರ್ಮಾ ನಿರ್ದೇಶನದ ಹನುಮಾನ್ ಚಿತ್ರದಲ್ಲಿ ತೇಜ ಸಜ್ಜ ನಾಯಕನ ಪಾತ್ರದಲ್ಲಿ ನಟಿಸಿದ್ದಾರೆ. ಅಮೃತಾ ಅಯ್ಯರ್ ನಾಯಕಿಯಾಗಿ ಅಭಿನಯಿಸಿದ್ದು, ವರಲಕ್ಷ್ಮಿ ಶರತ್ ಕುಮಾರ್, ವಿನಯ್ ರಾಯ್ ಮತ್ತು ಸಮುದ್ರ ಖಣಿ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. 2025ಕ್ಕೆ ಈ ಸಿನಿಮಾದ ಎರಡನೇ ಭಾಗ ಬಿಡುಗಡೆಯಾಗಲಿದೆ.





# ಅಲೋವೆರಾ ಜ್ಯೂಸ್‌ನಿಂದ ಪ್ರಯೋಜನ

### ಹೆಲ್ತ್ ಟಿಪ್ಸ್



ಜಂಕ್ ಫುಡ್ ಸೇವನೆ ಮುಂತಾದ ಜೀವನಶೈಲಿಯಿಂದ ದೇಹದಲ್ಲಿ ವಿಷಕಾರಿ ಅಂಶ ಸೇರಿಕೊಂಡಿರುತ್ತದೆ. ಅಲೋವೆರಾ ಜ್ಯೂಸ್ ದೇಹದಲ್ಲಿರುವ ವಿಷಕಾರಿ ಅಂಶಗಳನ್ನು ಹೊರಹಾಕಿ ದೇಹವನ್ನು ಶುದ್ಧವಾಗಿಡುತ್ತದೆ. ಅಜೀರ್ಣಕಾರಿ ಕಾಯಿಲೆಗಳನ್ನು ಶಮನಗೊಳಿಸುತ್ತದೆ. ಅಲೋವೆರಾ ಅಥವಾ ಲೋಳೆಸರ ಜ್ಯೂಸ್ ಜೀರ್ಣಕ್ರಿಯೆಯನ್ನು ಸುಧಾರಿಸಲು ಸಹಕಾರಿಯಾಗಿದೆ. ಇದರಲ್ಲಿನ ಕಿಣ್ವಗಳು ಹಾಗೂ ನಾರುಗಳು ಜೀರ್ಣಕ್ರಿಯೆ ಪ್ರಕ್ರಿಯೆ ಸುಧಾರಿಸುವ ಜತೆಗೆ ಹೊಟ್ಟೆಯನ್ನು ಸ್ವಚ್ಛಗೊಳಿಸುತ್ತದೆ. ಅಲೋವೆರಾದಲ್ಲಿ ವಿಟಮಿನ್ ಬಿ ಹೇರಳವಾಗಿರುವುದರಿಂದ , ಇದು ದೇಹದ ಕೊಬ್ಬು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಇದರ ನಿಯಮಿತ ಸೇವನೆಯಿಂದ ದೇಹದ ತೂಕ ಕಳೆದುಕೊಳ್ಳಬಹುದು. ಅಲೋವೆರಾ ಸೇವನೆಯಿಂದ ಹೊಟ್ಟೆ ಹಸಿವು ತಗ್ಗುತ್ತದೆ. ಇದೂ ಕೂಡ ತೂಕ ಕಳೆದುಕೊಳ್ಳಲು ಸಹಕಾರಿ.

**ಹಲ್ಲಿನ ಆರೋಗ್ಯ:** ಬಾಯಿಯ ದುರ್ವಾಸನೆಯಿಂದ ಬಳಲುತ್ತಿರುವವರಿಗೆ ಇದು ಬಹಳ ಪ್ರಯೋಜನಕಾರಿ. ಅಲೋವೆರಾದಲ್ಲಿ ಸೂಕ್ಷ್ಮಜೀವಿ ಪ್ರತಿರೋಧಕ ಗುಣಗಳು ಇರುವುದರಿಂದ ಒಸಡು ಮತ್ತು ಹಲ್ಲುಗಳನ್ನು ಶುಚಿಯಾಗಿಡುತ್ತದೆ. ಇದರಿಂದ ಬಾಯಿಯ ದುರ್ವಾಸನೆ ತಡೆಯಬಹುದು. ಚರ್ಮ, ಕಾಂತಿಯುಕ್ತ ಹಾಗೂ ಸುಂದರವಾಗಿ ರೂಪುಗೊಳಿಸುವಲ್ಲಿ ಅಲೋವೆರಾದ ಪಾತ್ರ ಬಹಳ ಪ್ರಾಮುಖ್ಯ ಪಡೆದಿದೆ. ನಿಯಮಿತವಾಗಿ ಅಲೋವೆರಾ ಜ್ಯೂಸ್ ಸೇವನೆಯಿಂದ ಚರ್ಮ ಕಾಂತಿಯುತವಾಗಿ ಹೊಳೆಯುತ್ತದೆ. ಹಾಗೆಯೇ ಕೂದಲಿನ ಕಿರುಚೀಲಗಳ ಬೆಳವಣಿಗೆಯ ವಿನ್ಯಾಸವನ್ನು ಸುಧಾರಿಸುವಲ್ಲೂ ಕೂಡ ಇದು ಸಹಕಾರಿ. ಕೂದಲು ಉದುರುವ ಸಮಸ್ಯೆಯಿಂದಲೂ ಮುಕ್ತಿ ನೀಡುತ್ತದೆ.

# ಶ್ರೇಯಾನ್ವಿ ದಾಸ್ ಮತ್ತು ಜಾನ್ವಿ ಮುದುಳಿ ಒಡಿಸ್ಸಿ ರಂಗಪ್ರವೇಶ



'ಸಂಜಲಿ ಸೆಂಟರ್ ಫರ್ ಒಡಿಸ್ಸಿ ಡ್ಯಾನ್ಸ್' ಖ್ಯಾತ ನೃತ್ಯಶಾಲೆಯ ಅಂತರರಾಷ್ಟ್ರೀಯ ಒಡಿಸ್ಸಿ ನೃತ್ಯಕಲಾವಿದೆ ಹಾಗೂ ನೃತ್ಯಾಚಾರ್ಯ ಶರ್ಮಿಳಾ ಮುಖರ್ಜಿಯವರ ನುರಿತ ಗರಡಿಯಲ್ಲಿ ದಶಕದ ಕಾಲ ನೃತ್ಯಶಿಕ್ಷಣ ಪಡೆದ ಉದಯೋನ್ಮುಖ ನೃತ್ಯ ಕಲಾವಿದೆಯರಾದ ಶ್ರೇಯಾನ್ವಿ ದಾಸ್ ಮತ್ತು ಜಾನ್ವಿ ಮುದುಳಿ ಪ್ರತಿಭಾವಂತ ಶಿಷ್ಯರು. ನಾಡಿನಾದ್ಯಂತ ವಿವಿಧ ನೃತ್ಯೋತ್ಸವಗಳಲ್ಲಿ ನರ್ತಿಸಿರುವ ಉಭಯ ಕಲಾವಿದೆಯರು, ಅನೇಕ ನೃತ್ಯ ಕಾರ್ಯಾಗಾರಗಳಲ್ಲಿ ಪಾಲ್ಗೊಂಡು, ಸಂಜಲಿ ನೃತ್ಯಶಾಲೆ ಆಯೋಜಿಸಿದ ಎಲ್ಲ ನೃತ್ಯರೂಪಕಗಳಲ್ಲಿ ಭಾಗವಹಿಸಿ ಮೆಚ್ಚುಗೆ ಪಡೆದವರು. ಇಬ್ಬರೂ ಚಂದೀಘಡದ ಪ್ರಾಚೀನ್ ಕಲಾಕೇಂದ್ರದ 'ಸಂಗೀತ್ ಭೂಷಣ್ ಫೈನಲ್' ನೃತ್ಯಪರೀಕ್ಷೆಯನ್ನು ಸಂಪೂರ್ಣಗೊಳಿಸಿದ್ದಾರೆ. ಈ ಇಬ್ಬರು ಕಲಾವಿದೆಯರು ತಮ್ಮ ಒಡಿಸ್ಸಿ 'ರಂಗಪ್ರವೇಶ'ವನ್ನು ಇದೇ ತಿಂಗಳ 19 ಶುಕ್ರವಾರ ಸಂಜೆ 6.30 ಕ್ಕೆ ಎ.ಡಿ.ಎ. ರಂಗಮಂದಿರದಲ್ಲಿ ವಿದ್ಯುಕ್ತವಾಗಿ ನೆರವೇರಿಸಿಕೊಳ್ಳಲಿದ್ದಾರೆ. ಇವರ ಕಲಾತ್ಮಕ ಸುಮನೋಹರ ನೃತ್ಯವನ್ನು ಕಣ್ತುಂಬಿಕೊಳ್ಳಲು ಎಲ್ಲರಿಗೂ ಆದರದ ಸ್ವಾಗತ.

ಶ್ರೀಮತಿ ಸಂಗೀತ ದಾಸ್ ಮತ್ತು ಶ್ರೀ ಸಂಜಯ್ ದಾಸ್ ಪುತ್ರಿಯಾದ ಕು. ಶ್ರೇಯಾನ್ವಿ ದಾಸ್ ತನ್ನ 6 ನೆಯ ಎಳವೆಯಿಂದಲೇ ನೃತ್ಯಾಸಕ್ತಿ ಹೊಂದಿದ್ದು, ಗುರು ಶರ್ಮಿಳಾ ಮುಖರ್ಜಿ ಅವರಲ್ಲಿ ಕಳೆದ 11 ವರ್ಷಗಳಿಂದ ಒಡಿಸ್ಸಿ ನೃತ್ಯವನ್ನು ಕಲಿಯುತ್ತಿದ್ದಾಳೆ. ಜೊತೆಗೆ ಇವಳು, ಕಥಕ್ ನೃತ್ಯಶೈಲಿಯಲ್ಲೂ ಅಭ್ಯಾಸ ಮಾಡಿ ಪಶ್ಚಿಮ ಬಂಗಾಳದ ಬಂಗೀಯ ಸಂಗೀತ್ ಪರಿಷತ್ ನ 'ಸಂಗೀತ್ ವಿಭಾಕರ್' ನೃತ್ಯಪರೀಕ್ಷೆಯಲ್ಲಿ ಜಯಶಾಲಿಯಾಗಿದ್ದಾಳೆ. ಪ್ರಸ್ತುತ ಇವಳು, 11 ನೆಯ ತರಗತಿಯಲ್ಲಿ ಅಭ್ಯಾಸ ಮಾಡುತ್ತಿದ್ದು, ಕೀಬೋರ್ಡ್ ಮತ್ತು ತೈಲವರ್ಣ ಪೇಯಿಂಟಿಂಗ್ ಅವಳ ಇನ್ನಿತರ ಹವ್ಯಾಸಗಳು.

ಶ್ರೀಮತಿ ಶ್ರೀಲೇಖ ಸಿಂಗ್ ಮತ್ತು ಶ್ರೀ ಜಗತ್ ಜಿತ್ ಮುದುಳಿ ಪುತ್ರಿಯಾದ ಕು. ಜಾನ್ವಿ ಮುದುಳಿ ತನ್ನ 7 ನೆಯ ವಯಸ್ಸಿಗೆ ಒಡಿಸ್ಸಿ ನೃತ್ಯ ಕಲಿಯಲಾರಂಭಿಸಿ, ಗುರು ಶರ್ಮಿಳಾ ಅವರಲ್ಲಿ ಕಳೆದ 8 ವರ್ಷಗಳಿಂದ ಶಿಷ್ಯತ್ವ ಮಾಡುತ್ತಿದ್ದಾಳೆ. ವೈಟ್ ಫೀಲ್ಡ್ ನಲ್ಲಿರುವ ಡೀನ್ಸ್ ಅಕಾಡೆಮಿಯಲ್ಲಿ 9 ನೆಯ ತರಗತಿಯಲ್ಲಿ ಓದುತ್ತಿದ್ದಾಳೆ. ಅಂತರ್ಶಾಲಾ ಶಾಸ್ತ್ರೀಯ ನೃತ್ಯಸ್ಪರ್ಧೆಗಳಲ್ಲಿ ಭಾಗವಹಿಸಿರುವ ಜಾನ್ವಿ ಅನೇಕ ಬಹುಮಾನಗಳನ್ನು ಗಳಿಸಿದ್ದಾಳೆ. ಕ್ರೀಡೆಗಳಲ್ಲೂ ಮುಂದಿರುವ ಇವಳು ಚಿತ್ರಕಲೆಯಲ್ಲೂ ಆಸಕ್ತಳು. ಇಬ್ಬರು ಕಲಾವಿದೆಯರು ನೀಡಿರುವ ಕೆಲವು ನೃತ್ಯ ಪ್ರದರ್ಶನಗಳೆಂದರೆ--ಚಿನ್ನ ಕಲಾನಾದಂ, ಬೆಂಗಳೂರು ಒಡಿಸ್ಸಿ ಉತ್ಸವ, ಮೈಸೂರು ಒಡಿಸ್ಸಿ ಉತ್ಸವ, ನಕ್ಷತ್ರ, ಕೇರಳದ ಸೂರ್ಯ ಫೆಸ್ಟಿವಲ್, ಸ್ವರಲಯ ಫೆಸ್ಟಿವಲ್ ಹಾಗೂ 'ಸಂಜಲಿ' ನೃತ್ಯಶಾಲೆಯ ಸಮರ್ಪಣ ಡ್ಯಾನ್ಸ್ ಫೆಸ್ಟಿವಲ್ 'ಪ್ರವಾಹ'- ದಲ್ಲೂ ಭಾಗವಹಿಸಿದ ಹೆಮ್ಮೆ ಇವರಿಬ್ಬರದು.

। ವೈ.ಕೆ.ಸಂಧ್ಯಾ ಶರ್ಮ

# ಹೆರಿಗೆ ಬಳಿಕ ಚರ್ಮದ ಹೊಳಪ ಕಾಪಾಡುವುದು ಹೇಗೆ?

### ಬ್ಯೂಟಿ ಟಿಪ್ಸ್



ಮಹಿಳೆಯರು ಗರ್ಭಾವಸ್ಥೆಯಲ್ಲಿ ಸುಂದರವಾದ ಕೂದಲು ಮತ್ತು ತ್ವಚೆಯನ್ನು ಹೊಂದಿರುತ್ತಾರೆ. ಆದರೆ ಹೆರಿಗೆಯ ಬಳಿಕ ತ್ವಚೆ ಹೊಳಪು ಕಳೆದುಕೊಂಡು ವಯಸ್ಸಾದಂತೆ ಕಾಣುತ್ತದೆ. ಹಾಗಾಗಿ ನಿಮ್ಮ ಚರ್ಮದ ಕಾಂತಿಯನ್ನು ಮರಳಿ ಪಡೆಯಲು ಈ ಟಿಪ್ಸ್ ಫಾಲೋ ಮಾಡಿ.

**ಮುಖಕ್ಕೆ ಪ್ರತಿದಿನ ಎಣ್ಣೆ ಮಸಾಜ್ ಮಾಡಿ:** ಇದರಿಂದ ರಕ್ತಪರಿಚಲನೆ ಹೆಚ್ಚಾಗುತ್ತದೆ. ಇದು ಕಣ್ಣಿನ ಸುತ್ತಲಿನ ಕಪ್ಪುಕಲೆ, ಚರ್ಮ ಸುಕ್ಕುಗಟ್ಟಿರುವುದನ್ನು ನಿವಾರಿಸುತ್ತದೆ. ಮುಖದ ಹೊಳಪನ್ನು ಹೆಚ್ಚಿಸುತ್ತದೆ.

ಕಣ್ಣಿನ ದಣಿವನ್ನು ನಿವಾರಿಸಿ ಇಲ್ಲವಾದರೆ ಕಣ್ಣಿನ ಸುತ್ತಲೂ ಕಪ್ಪು ಕಲೆಗಳು ಮೂಡುತ್ತವೆ. ಹಾಗಾಗಿ ರೋಸ್ ವಾಟರ್ ನಲ್ಲಿ ನೆನೆಸಿದ ಹತ್ತಿ ಪ್ಯಾಡ್ ಗಳನ್ನು ರಾತ್ರಿ ಮಲಗುವಾಗ ಕಣ್ಣಿನ ಮೇಲಿಡಿ.

ಮುಖದಲ್ಲಿರುವ ಬ್ಯಾಕ್ಟೀರಿಯಾಗಳನ್ನು ನಿವಾರಿಸಲು ಮತ್ತು ಮಾಲಿನ್ಯಗಳನ್ನು ನಿವಾರಿಸಲು ಹಾಗೂ ಮುಖದ ಚರ್ಮವನ್ನು ಹೈಡ್ರೇಟ್ ಮಾಡಲು ಉತ್ತಮವಾದ ಫೇಸ್ ಪ್ಯಾಕ್ ನ್ನು ಹಚ್ಚುತ್ತಿರಿ.

ಪ್ರತಿದಿನ ಆರೋಗ್ಯಕರವಾದ ಆಹಾರವನ್ನು ಸೇವಿಸಿ. ಜಂಕ್ ಫುಡ್, ಎಣ್ಣೆ, ಕೃತಕ ಸಕ್ಕರೆ ಬಳಸಿದಂತಹ ಆಹಾರವನ್ನು ಸೇವಿಸಬೇಡಿ. ಒತ್ತಡವನ್ನು ನಿವಾರಿಸಲು, ದೇಹದ ಮತ್ತು ಚರ್ಮದ ಆರೋಗ್ಯ ಕಾಪಾಡಲು ಪ್ರತಿದಿನ ವ್ಯಾಯಾಮ, ಯೋಗಗಳನ್ನು ಮಾಡಿ.



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

# ರಾಶಿ ಭವಿಷ್ಯ

**ಮೇಷ:** ಆಧ್ಯಾತ್ಮಿಕ ಚಿಂತನೆ, ಧರ್ಮಕಾರ್ಯಾಸಕ್ತಿ, ದೂರ ಪ್ರಯಾಣ, ವಿದ್ಯಾ ಯೋಗ.

**ವೃಷಭ:** ಅನಿರೀಕ್ಷಿತ ಲಾಭ, ಉದ್ಯೋಗ ಪ್ರಾಪ್ತಿ, ಅಡೆತಡೆಗಳಿಂದ ಕಾರ್ಯ ಜಯ, ಕೋರ್ಟ್ ಕೇಸುಗಳ ಚಿಂತೆ.

**ಮಿಥುನ:** ಕರ್ಮ ಫಲಗಳ ಕಾಟ, ಉದ್ಯೋಗ ನಷ್ಟ ಮತ್ತು ಚಿಂತೆ, ಪ್ರೀತಿ-ಪ್ರೇಮದಲ್ಲಿ ತೊಂದರೆ, ಮಕ್ಕಳ ನಡವಳಿಕೆಯಿಂದ ಬೇಸರ.

**ಕಟಕ:** ಸ್ಥಿರಾಸ್ತಿ ತೊಂದರೆಗಳು, ತಂದೆಯಿಂದ ಸಹಾಯ ಸಹಕಾರ, ಕಾರ್ಯಜಯ, ದಾಂಪತ್ಯ ಕಲಹ

**ಸಿಂಹ:** ಸ್ಟೇಷನ್, ಕೋರ್ಟ್‌ಗೆ ಅಲೆದಾಟ, ಸೋಲು ನಷ್ಟ ನಿರಾಸೆಗಳು, ನೆರೆಹೊರೆಯವರಿಂದ ತೊಂದರೆ, ಮಕ್ಕಳಿಂದ ಎಡವಟ್ಟುಗಳು.

**ಕನ್ಯಾ:** ಪಾಲುದಾರಿಕೆಯಲ್ಲಿ ತೊಂದರೆಗಳು, ಸಾಲ ದೊರೆಯುವುದು, ಮಾತಿನಿಂದ ತೊಂದರೆ, ಕುಟುಂಬ ಭವಿಷ್ಯದ ಚಿಂತೆ.

**ತುಲಾ:** ಸೋಮಾರಿತನ, ಆರೋಗ್ಯದಲ್ಲಿ ಚೇತರಿಕೆ, ಆರ್ಥಿಕ ಹೂಡಿಕೆಯ ತಯಾರಿ, ಶತ್ರುಗಳು ಮಿತ್ರರಾಗುವರು.

**ವೃಶ್ಚಿಕ:** ದುಃಸ್ವಪ್ನಗಳು, ದೈವ ಚಿಂತನೆ, ಮಕ್ಕಳಲ್ಲಿ ಮಂದತ್ವ, ರಹಸ್ಯ ಯೋಜನೆಗಳು.

**ಧನಸ್ಸು:** ವ್ಯಾಪಾರ ವ್ಯವಹಾರದಲ್ಲಿ ಎಳೆದಾಟ, ಗುಪ್ತ ಧನಾಗಮನ, ಸ್ತ್ರೀಯರಿಂದ ಲಾಭ, ಆರೋಗ್ಯದಲ್ಲಿ ಚೇತರಿಕೆ.

**ಮಕರ:** ಉದ್ಯೋಗದಲ್ಲಿ ನಿರಾಸಕ್ತಿ, ದೂರ ಪ್ರಯಾಣ, ನೆರೆಹೊರೆಯವರಿಂದ ಅಂತರ, ಗೌರವಕ್ಕೆ ಧಕ್ಕೆ.

**ಕುಂಭ:** ಆರ್ಥಿಕ ಚೇತರಿಕೆ, ತಂದೆಯ ಆರೋಗ್ಯದಲ್ಲಿ ವ್ಯತ್ಯಾಸ, ಉನ್ನತ ವಿದ್ಯಾಭ್ಯಾಸದ ಚಿಂತೆ, ಸಾಮರ್ಥ್ಯದಲ್ಲಿ ಅಪನಂಬಿಕೆ.

**ಮೀನ:** ಆಕಸ್ಮಿಕ ಅವಘಡಗಳು, ಸೋಲು ನಷ್ಟ ನಿರಾಸೆಗಳು, ವ್ಯಾಪಾರ ವ್ಯವಹಾರದಲ್ಲಿ ಸಮಸ್ಯೆಗಳು, ಯತ್ನ ಕಾರ್ಯದಲ್ಲಿ ವಿಘ್ನ.

# ಮಹಿಳೆಯರ ಆರೋಗ್ಯಕರ ತೂಕ ದಿನ




ಮಹಿಳೆಯರ ಆರೋಗ್ಯಕರ ತೂಕ ದಿನವು ಜನವರಿಯಲ್ಲಿ ಮೂರನೇ ಪೂರ್ಣ ವಾರದ ಪ್ರತಿ ಗುರುವಾರ ಬರುತ್ತದೆ, ಆರೋಗ್ಯಕರ ತೂಕವು ಎತ್ತರಕ್ಕೆ ಸಂಬಂಧಿಸಿದಂತೆ ನೈಸರ್ಗಿಕ ದೇಹದ ತೂಕವಾಗಿದೆ. ಆರೋಗ್ಯಕರವಾಗಿರುವುದನ್ನು ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಯೋಗಕ್ಷೇಮದಿಂದ ವ್ಯಾಖ್ಯಾನಿಸಲಾಗಿದೆ, ಅಂದರೆ ಸರಿಯಾದ ಪ್ರಮಾಣದ ಪೋಷಣೆ, ವ್ಯಾಯಾಮ, ಮಾನಸಿಕ ಸ್ಥಿರತೆ ಮತ್ತು ನಿದ್ರೆಯನ್ನು ಪಡೆಯುವುದು.

ಜನರು ನಮ್ಮ ಬಗ್ಗೆ ಗಮನಿಸುವ ಮೊದಲ ವಿಷಯವೆಂದರೆ ನಮ್ಮ ದೈಹಿಕ ನೋಟ, ಆದ್ದರಿಂದ ಯಾರಾದರೂ ನಮ್ಮ ತೂಕವನ್ನು ಉಲ್ಲೇಖಿಸಿದಾಗ ನಾವು ತುಂಬಾ ಜಾಗೃತರಾಗುವುದರಲ್ಲಿ ಆಶ್ಚರ್ಯವೇನಿಲ್ಲ. ದುಃಖಕರವೆಂದರೆ, ಅನೇಕ ಜನರು ತೆಳ್ಳಗಿರುವುದು ಆರೋಗ್ಯಕರವಾಗಿರುವುದಕ್ಕೆ ಸಮಾನವೆಂದು ನಂಬುತ್ತಾರೆ, ಅದು ನಿಜವಲ್ಲ. ತೆಳ್ಳಗಿರುವುದು ಯಾವಾಗಲೂ ಆರೋಗ್ಯಕರವಲ್ಲ. ನಮಗಿಂತ ಕಡಿಮೆ ತೂಕವಿರುವ ವ್ಯಕ್ತಿಗಿಂತ ನಾವು ಆರೋಗ್ಯವಂತರಾಗಿರಬಹುದು.ವರ್ಷಗಳಿಂದ, ಜನರು ಆರೋಗ್ಯಕರ ದೇಹದೊಂದಿಗೆ ತೂಕವನ್ನು ಸಂಯೋಜಿಸಿದ್ದಾರೆ, ಅದು ನಿಜವಲ್ಲ. ಆರೋಗ್ಯವಾಗಿರುವುದನ್ನು ಕೇವಲ ತೂಕದಿಂದ ವ್ಯಾಖ್ಯಾನಿಸಲಾಗುವುದಿಲ್ಲ, ಆದರೆ ವ್ಯಕ್ತಿಯ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಯೋಗಕ್ಷೇಮದ ಸಂಯೋಜನೆಯಾಗಿದೆ. ನಿಮ್ಮ ಬಾತ್ರೂಮ್ ಸ್ಕೇಲ್ನಲ್ಲಿನ ಆದರ್ಶ ಸಂಖ್ಯೆಯು ಆರೋಗ್ಯಕರ ವ್ಯಕ್ತಿಯ ನಿಖರವಾದ ಪ್ರಾತಿನಿಧ್ಯವಲ್ಲ.ಬಾಡಿ ಮಾಸ್ ಇಂಡೆಕ್ಸ್ (ಃ.ಒ.ಖ.) ಆರೋಗ್ಯಕರ ತೂಕವನ್ನು ನಿರ್ಧರಿಸಲು ಬಳಸುವ ಮಾನದಂಡವಾಗಿದೆ. ಇತ್ತೀಚೆಗೆ, ಆರೋಗ್ಯಕರ ತೂಕದ ಮಾಪನದ ಹೊಸ ಮಾನದಂಡಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ, ಇದು ಪ್ರಮಾಣಿತ ಃ.ಒ.ಖ ಗಿಂತ ಹೆಚ್ಚು ನಿಖರವಾಗಿದೆ ಎಂದು ಭರವಸೆ ನೀಡುತ್ತದೆ.

ಅನೇಕ ಮಹಿಳೆಯರು ತಮ್ಮ ಆದರ್ಶ ತೂಕವನ್ನು ಸಾಧಿಸಲು ತೀವ್ರವಾಗಿ ಹೋಗುತ್ತಾರೆ. ಅವರು ಹಸಿವಿನಿಂದ ಬಳಲುತ್ತಿದ್ದಾರೆ ಮತ್ತು ಹೆಚ್ಚುವರಿ ತೂಕವನ್ನು ಕಳೆದುಕೊಳ್ಳಲು ತಮ್ಮನ್ನು ತಾವು ಅಪಾಯಕ್ಕೆ ತಳ್ಳುತ್ತಾರೆ. ಮಹಿಳಾ ಆರೋಗ್ಯಕರ ತೂಕ ದಿನವು ಪ್ರತಿ ಮಹಿಳೆಯ ನೈಸರ್ಗಿಕ ದೇಹ ನೋಟ ಮತ್ತು ತೂಕವನ್ನು ಸ್ವೀಕರಿಸುವ ಮೂಲಕ ಎಲ್ಲಾ ಮಹಿಳೆಯರಿಗೆ ಆರೋಗ್ಯಕರ ತೂಕವನ್ನು ಆಚರಿಸುತ್ತದೆ.



# ದೆಹಲಿಯಲ್ಲಿ ರಾಹುಲ್ ಗಾಂಧಿ ಎಂಬ ಸೈನಿಕನಿದ್ದಾನೆ

**ದೆಹಲಿ:** ದೆಹಲಿಯಲ್ಲಿ ರಾಹುಲ್ ಗಾಂಧಿ ಎಂಬ ಸೈನಿಕನಿದ್ದಾನೆ. ನಿಮ್ಮ ಸಮಸ್ಯೆಗಳನ್ನು ಸಂಸತ್ತಿನಲ್ಲಿ ಮಂಡಿಸಲು ಆತ ಸದಾ ಸಿದ್ಧನಿರುತ್ತಾನೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಭರವಸೆ ನೀಡಿದ್ದಾರೆ.

ಭಾರತ್ ಜೋಡೋ ನ್ಯಾಯ ಯಾತ್ರೆಯ 4ನೇ ದಿನವಾದ ಇಂದು, ನಾಗಾಲ್ಯಾಂಡ್ನ ಮೊಕೊಕ್ಚುಂಗ್ನ ಜನರೊಂದಿಗೆ ರಾಹುಲ್ ಗಾಂಧಿ ಸಂವಾದ ನಡೆಸಿದ್ದಾರೆ. ನಾಗಾ ಶಾಂತಿ ಒಪ್ಪಂದದ ಕುರಿತಂತೆ ಪ್ರಧಾನಿ ಮೋದಿ ನಾಗಾಲ್ಯಾಂಡ್ ಜನರಿಗೆ ಸುಳ್ಳು ಭರವಸೆ ನೀಡಿ ದ್ರೋಹ ಬಗೆದಿದ್ದಾರೆ. ನಿಮ್ಮ ಬಳಿ ಸಮಸ್ಯೆಗೆ ಪರಿಹಾರವಿಲ್ಲದಿದ್ದರೆ, ಇದೆ ಎನ್ನುವ ಹಾಗೆ ನಾಟಕ ಮಾಡಬೇಡಿ ಎಂದು ಟೀಕಿಸಿದ್ದಾರೆ.

### ನನಗೆನಾಚಿಕೆಯಾಗುತ್ತಿದೆ

**ಒಬ್ಬ ಭಾರತೀಯನಾಗಿ ನಮ್ಮ ಪ್ರಧಾನಿ ಮಣಿಪುರಕ್ಕೆ ಹೋಗದಿದ್ದಕ್ಕೆ ನನಗೆ ನಾಚಿಕೆಯಾಗುತ್ತಿದೆ. ನಾಗಾಲ್ಯಾಂಡ್, ಮಣಿಪುರ ಮತ್ತು ಅಸ್ಸಾಂ ಅಭಿವೃದ್ಧಿಯಿಂದ ದೂರ ಉಳಿದಿವೆ. ಇವುಗಳನ್ನು ಮುನ್ನೆಲೆಗೆ ತರುವುದೇ ಕಾಂಗ್ರೆಸ್ ಪಕ್ಷದ ಆಶಯವಾಗಿದೆ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ.**

# ರಾಮಮಂದಿರ ಪ್ರಾಣ ಪ್ರತಿಷ್ಠಾ ದಿನ ನ್ಯಾಯಾಲಯಗಳಿಗೆ ರಜೆ ನೀಡಲು ಸಿಜೆಐಗೆ ಪತ್ರ

**ನವದೆಹಲಿ:** ಅಯೋಧ್ಯೆಯಲ್ಲಿ ಭಗವಾನ್ ರಾಮನ 'ಪ್ರಾಣ ಪ್ರತಿಷ್ಠಾ' ಸಮಾರಂಭದ ಸಂದರ್ಭದಲ್ಲಿ ಜನವರಿ 22 ರಂದು ಎಲ್ಲಾ ನ್ಯಾಯಾಲಯಗಳಿಗೆ ನ್ಯಾಯಾಂಗ ರಜೆ ನೀಡುವಂತೆ ಭಾರತೀಯ ಬಾರ್ ಕೌನ್ಸಿಲ್ ಅಧ್ಯಕ್ಷರು ಭಾರತದ ಮುಖ್ಯ ನ್ಯಾಯಮೂರ್ತಿ(ಸಿಜೆಐ) ಡಿವೈ ಚಂದ್ರಚೂಡ್ ಅವರಿಗೆ ಪತ್ರ ಬರೆದಿದ್ದಾರೆ.



ಬಾರ್ ಕೌನ್ಸಿಲ್ ಆಫ್ ಇಂಡಿಯಾದ ಅಧ್ಯಕ್ಷ ಮನನ್ ಕುಮಾರ್ ಮಿಶ್ರಾ ಅವರು ಭಾರತದ ಮುಖ್ಯ ನ್ಯಾಯಮೂರ್ತಿಗಳಿಗೆ ಪತ್ರ ಬರೆದು ರಜೆ ನೀಡಲು ಮನವಿ ಮಾಡಿದ್ದಾರೆ.

ಅಯೋಧ್ಯೆಯ ರಾಮಮಂದಿರ ಉದ್ಘಾಟನಾ ಸಮಾರಂಭ ಕಾರಣಕ್ಕಾಗಿ ಜನವರಿ 22 ರಂದು ಸುಪ್ರೀಂ ಕೋರ್ಟ್ಗೆ ರಜೆ ಘೋಷಿಸಲು ಔಪಚಾರಿಕ ಮನವಿ ಮಾಡಿದ್ದಾರೆ.

ವಕೀಲ ಮಿಶ್ರಾ ಅವರು ತಮ್ಮ ಅರ್ಜಿಯಲ್ಲಿ ರಾಮಮಂದಿರ ಉದ್ಘಾಟನೆಯನ್ನು ರಾಷ್ಟ್ರದ ಪ್ರತಿಯೊಬ್ಬ ನಾಗರಿಕನ ರಾಷ್ಟ್ರೀಯ ಮತ್ತು ಸಾಂಸ್ಕೃತಿಕ ಪ್ರಾಮುಖ್ಯತೆಯ ಗೌರವದ ವಿಷಯ ಎಂದು ಉಲ್ಲೇಖಿಸಿದ್ದಾರೆ.

ನವೆಂಬರ್ 9, 2019 ರ ಸುಪ್ರೀಂ ಕೋರ್ಟ್ನ ಐತಿಹಾಸಿಕ ತೀರ್ಪು, ಜನವರಿ 22 ರ ಈ ಐತಿಹಾಸಿಕ ಘಟನೆ ನಡೆಯಲು ಕಾರಣವಾಗಿದೆ. ಹೀಗಾಗಿ ಎಲ್ಲಾ ನ್ಯಾಯಾಂಗ ಅಧಿಕಾರಿಗಳು ಮತ್ತು ವಕೀಲರಿಗೆ ಅವಕಾಶ ನೀಡಲು ಎಲ್ಲಾ ನ್ಯಾಯಾಲಯಗಳಿಗೆ ಪ್ರಾಣ ಪ್ರತಿಷ್ಠೆಯ ದಿನದಂದು ಅಧಿಕೃತ ರಜೆ ನೀಡಬೇಕೆಂದು ಕೋರಿದ್ದಾರೆ.

## ವಿಮಾನದ ಕ್ಯಾಬಿನ್ ಸಿಬ್ಬಂದಿಗೆ ಕಚ್ಚಿದ ಪ್ರಯಾಣಿಕ

**ಟೋಕಿಯೊ:** ವಿಪರೀತ ಮದ್ಯಪಾನ ಮಾಡಿದ್ದ ಅಮೆರಿಕದ ಪ್ರಯಾಣಿಕನೊಬ್ಬ ವಿಮಾನದ ಕ್ಯಾಬಿನ್ ಸಿಬಂದಿಯನ್ನು ಕಚ್ಚಿದ ಹಿನ್ನೆಲೆಯಲ್ಲಿ ಅಮೆರಿಕಕ್ಕೆ ಪ್ರಯಾಣಿಸುತ್ತಿದ್ದ ವಿಮಾನವನ್ನು ಮರಳಿ ಜಪಾನ್ನ ಟೋಕಿಯೊ ವಿಮಾನ ನಿಲ್ದಾಣದಲ್ಲಿ ಇಳಿಸಲಾಗಿದೆ ಎಂದು ವರದಿಯಾಗಿದೆ. 155 ಪ್ರಯಾಣಿಕರಿದ್ದ ಆಲ್ ನಿಪ್ಪಾನ್ ಏರ್ವೇಸ್ ವಿಮಾನ ಅಮೆರಿಕದತ್ತ ಪ್ರಯಾಣಿಸುತ್ತಿತ್ತು. ವಿಮಾನದಲ್ಲಿ ವಿಪರೀತ ಮದ್ಯಪಾನ ಮಾಡಿದ್ದ ಅಮೆರಿಕದ ಪ್ರಜೆಯೊಬ್ಬ ವಿಮಾನದ ಸಿಬಂದಿಯ ಭುಜಕ್ಕೆ ಕಚ್ಚಿ ಗಾಯಗೊಳಿಸಿದಾಗ ವಿಮಾನವನ್ನು ಮತ್ತೆ ಟೋಕಿಯೊ ವಿಮಾನ ನಿಲ್ದಾಣದಲ್ಲಿ ಕೆಳಗಿಳಿಸಿ ಆರೋಪಿಯನ್ನು ಪೊಲೀಸರ ವಶಕ್ಕೆ ಒಪ್ಪಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.



# ಟ್ರಂಪ್ ಜೊತೆ ವೇದಿಕೆ ಹಂಚಿಕೊಂಡ ವಿವೇಕ್ ರಾಮಸ್ವಾಮಿ!



**ಅಮೆರಿಕ ಅಧ್ಯಕ್ಷೀಯ ಉಮೇದುವಾರಿಕೆ ಸ್ಪರ್ಧೆಯಿಂದ ಹಿಂದೆ ಸರಿದ ಭಾರತೀಯ ಮೂಲದ ಅಮೆರಿಕನ್ ವಿವೇಕ್ ರಾಮಸ್ವಾಮಿ**

**ಅಮೆರಿಕ:** ಅಮೆರಿಕ ಅಧ್ಯಕ್ಷೀಯ ಉಮೇದುವಾರಿಕೆ ಸ್ಪರ್ಧೆಯಿಂದ ಭಾರತೀಯ ಮೂಲದ ಅಮೆರಿಕನ್ ವಿವೇಕ್ ರಾಮಸ್ವಾಮಿ ಅವರು ಹಿಂದೆ ಸರಿದಿದ್ದು, ಇದಾದ ಬಳಿಕ ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ವೇದಿಕೆ ಹಂಚಿಕೊಂಡಿದ್ದಾರೆ.

ಈ ಸಂದರ್ಭ ವಿವೇಕ್, 'ರಾಷ್ಟ್ರಪತಿ ರೇಸ್ನಲ್ಲಿ ಇವರಿಗಿಂತ ಉತ್ತಮ ಆಯ್ಕೆ ಇನ್ನೊಂದಿಲ್ಲ.

ಅದಕ್ಕಾಗಿಯೇ ಮುಂದಿನ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ಗೆ ಮತ ಹಾಕುವಂತೆ ನಾನು ನಿಮ್ಮನ್ನು ಒತ್ತಾಯಿಸುತ್ತೇನೆ ಎಂದು ಹೇಳಿದರು. ಇದಕ್ಕೆ ಟ್ರಂಪ್ ಧನ್ಯವಾದ ಅರ್ಪಿಸಿದರು.

'ಅವರ ಒಪ್ಪಿಗೆ ನನಗೆ ಹೆಮ್ಮೆ ತಂದಿದೆ. ಅವರು ನಮ್ಮೊಂದಿಗೆ ಕೆಲಸ ಮಾಡುತ್ತಾರೆ ಮತ್ತು ನಮ್ಮೊಂದಿಗೆ ದೀರ್ಘಕಾಲ ಮುಂದುವರಿಯುತ್ತಾರೆ, ಎಂದು ಹೇಳಿದರು. ಅಲ್ಲದೆ, ವಿವೇಕ್ ರಾಮಸ್ವಾಮಿ ಅವರನ್ನು ಪ್ರಚಾರದ ಉದ್ದಕ್ಕೂ ಬೆಂಬಲಿಗರು 'ಉಪಾಧ್ಯಕ್ಷ' ಎಂದು ಘೋಷಣೆ ಕೂಗಿದರು, ಇಬ್ಬರೂ ನಗುತ್ತಾ ಮುಗುಳ್ನಕ್ಕರು. ಟ್ರಂಪ್ ಅವರು ತಮ್ಮ ರನ್ನಿಂಗ್ ಮೇಟ್ ಎಂದು ಸುಳಿವು ನೀಡಿದರು.

ರಿಪಬ್ಲಿಕನ್ ಪಕ್ಷದ ಪರವಾಗಿ ಅಧ್ಯಕ್ಷೀಯ ಉಮೇದುವಾರಿಕೆಗೆ ಸ್ಪರ್ಧಿಸಿದ್ದ ವಿವೇಕ್ ರಾಮಸ್ವಾಮಿ ಚುನಾವಣೆಯಲ್ಲಿ ಅವರು ಕೇವಲ 7.7 ರಷ್ಟು ಮತಗಳನ್ನು ಮಾತ್ರ ಪಡೆದರು. ಅಯೋವಾ ಇತಿಹಾಸದಲ್ಲಿಯೇ ಅತಿದೊಡ್ಡ 51 ರಷ್ಟು ಮತಗಳು ಟ್ರಂಪ್ಗೆ ಬಂದವು.

ಟ್ರಂಪ್ ಅಯೋವಾದಲ್ಲಿ ರಿಪಬ್ಲಿಕನ್ ಪಕ್ಷದ ಎಲ್ಲಾ ಸಭೆಗಳಲ್ಲಿ ಬೆಂಬಲ ಪಡೆದರು. ನವೆಂಬರ್ ಚುನಾವಣೆಯಲ್ಲಿ ಡೆಮೋಕ್ರಾಟ್ ನ ಜೋ ಬಿಡೆನ್ಗೆ ಸವಾಲು ಹಾಕಲು ರಿಪಬ್ಲಿಕನ್ ಪಕ್ಷದ ಮುಂಚೂಣಿ ನಾಯಕರಾಗಿ ಹೊರಹೊಮ್ಮಿದ್ದಾರೆ.

# ಅಭಿವೃದ್ಧಿಯ ಕುರಿತು ಸ್ಪಷ್ಟ ಯೋಜನೆ ಹೊಂದಿರುವ ಏಕೈಕ ಪಕ್ಷ ಬಿಜೆಪಿ

**ಕೊಚ್ಚಿ(ಕೇರಳ):** ತ್ವರಿತ ಅಭಿವೃದ್ಧಿ ಹಾಗು ಭವಿಷ್ಯದ ಬಗೆಗಿನ ಸ್ಪಷ್ಟ ಯೋಜನೆಯನ್ನು ಹೊಂದಿರುವ ಏಕೈಕ ಪಕ್ಷ ಬಿ.ಜೆ.ಪಿ ಎಂಬುದು ಸಾಬೀತಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಕೊಚ್ಚಿಯ ಮರೀನ್ ಡ್ರೈವ್ ನಲ್ಲಿ ನಡೆದ ಪಕ್ಷದ ಸಭೆಯಲ್ಲಿ ಮಾತನಾಡಿದ ಮೋದಿ, ದೇಶದ ಜನರ ಕ್ಷೇಮಕ್ಕಾಗಿ ತಮ್ಮ ಅವಧಿಯಲ್ಲಿ ಕಾರ್ಯರೂಪಕ್ಕೆ ಬಂದ ಯೋಜನೆಗಳಿಗೆ ಒತ್ತು ನೀಡಿದರು.

ಕಳೆದ 9 ವರ್ಷಗಳಲ್ಲಿ ದೇಶದ 25ಕೋಟಿ ಜನರನ್ನು ಬಡತನದ ರೇಖೆಯಿಂದ ಮೇಲೆತ್ತಲಾಗಿದೆ. ಇದು ಅಭಿವೃದ್ಧಿಯ ಕಡೆಗೆ ನಾವು ಇಟ್ಟ ಹೆಜ್ಜೆ ಸರಿಯೆಂದು ಸೂಚಿಸುತ್ತದೆ ಎಂದು ಪ್ರಧಾನಿ ಹೇಳಿದರು. ಮುಂದುವರಿದು ಮಾತನಾಡುತ್ತ, ಇಂತಹ ದಾಖಲೆಯನ್ನು ಹೊಂದಿರುವ ಏಕೈಕ ಪಕ್ಷ ಬಿಜೆಪಿ ಎಂದರು.ಭ್ರಷ್ಟಾಚಾರದ ಇತಿಹಾಸಕ್ಕೆ ಸಮಾನಾರ್ಥಕದಂತಿದ್ದ ಕೇರಳದ ಐಆಈ ಮತ್ತು ಗಆಈ ಬಗ್ಗೆ ಜನರಿಗೆ ತಿಳಿಸುವಂತೆ ಅವರು ಕಾರ್ಯಕರ್ತರಿಗೆ ಆಗ್ರಹಿಸಿದರು.



**ಕೊಚ್ಚಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿಕೆ**

## ಕರೆನ್ಸಿ ರ್‍ಯಾಂಕಿಂಗ್‌ನಲ್ಲಿ ಭಾರತಕ್ಕೆ 15ನೇ ಸ್ಥಾನ



**ನವದೆಹಲಿ:** ತದ ಕರೆನ್ಸಿ ರೂಪಾಯಿ 15ನೇ ಸ್ಥಾನ ಪಡೆದಿದ್ದರೆ, ಅಮೆರಿಕದ ಡಾಲರ್ ಹತ್ತನೇ ಸ್ಥಾನ ಪಡೆದುಕೊಂಡಿದೆ. ಈ ಪಟ್ಟಿಯಲ್ಲಿ ಕುವೈತ್ ದಿನಾರ್ ಮೊದಲ ಸ್ಥಾನ (270.23 ರೂ.), ಬಹ್ರೈನ್ನ ದಿನಾರ್ (220.4 ರೂ) 2ನೇ ಸ್ಥಾನ ಪಡೆದುಕೊಂ?ಜಗತ್ತಿನ ಅತ್ಯಂತ ಪ್ರಬಲ ಮತ್ತು ಬಲಯುತವಾಗಿರುವ ಕರೆನ್ಸಿಗಳ ಪಟ್ಟಿಯನ್ನು ಫೋರ್ಬ್ಸ್ ನಿಯತಕಾಲಿಕ ಸಿದ್ಧಪಡಿಸಿದೆ. ಅದರ ಅನ್ವಯ ಭಾರಡಿದೆ. ಅಮೆರಿಕದ ಡಾಲರ್ ಮೊದಲ ಹತ್ತು ಸ್ಥಾನಗಳ ಕೊನೆಯಲ್ಲಿ ಇದೆ. ಜಗತ್ತಿನ ಪ್ರಮುಖ ಕರೆನ್ಸಿಯಾಗಿದ್ದರೂ, ಅದು ಕೊನೆಯ ಸ್ಥಾನದಲ್ಲಿ ಇರುವುದು ಏಕೆ ಮತ್ತು ಕುವೈತ್ ದಿನಾರ್ ಮೊದಲ ಸ್ಥಾನದಲ್ಲಿ ಏಕೆ ಎಂಬುದರ ಬಗ್ಗೆ ಫೋರ್ಬ್ಸ್ ನಿಯತಕಾಲಿಕ ವಿವರಣೆ ನೀಡಿದೆ. 1960ರಲ್ಲಿ ಕುವೈತ್ ದಿನಾರ್ ವಹಿವಾಟು ಶುರು ಮಾಡಿದ ಬಳಿಕ ವಹಿವಾಟಿನಲ್ಲಿ ಸ್ಥಿರತೆಯನ್ನು ಕಾಯ್ದುಕೊಂಡು ಬಂದಿದೆ. ಜತೆಗೆ ಅದರ ಅರ್ಥ ವ್ಯವಸ್ಥೆಯೂ ಸ್ಥಿರವಾಗಿಯೇ ಮುಂದುವರಿದಿದೆ.

# ಆಂಧ್ರಪ್ರದೇಶದ ಲೇಪಾಕ್ಷಿ ದೇವಸ್ಥಾನಕ್ಕೆ ಭೇಟಿ ನೀಡಿದ ಮೋದಿ



**ಅಮರಾವತಿ:** ಪ್ರಧಾನಿ ನರೇಂದ್ರ ಮೋದಿಯವರು ಆಂಧ್ರಪ್ರದೇಶದ ಲೇಪಾಕ್ಷಿಯ ವೀರಭದ್ರ ದೇವಸ್ಥಾನಕ್ಕೆ ಭೇಟಿ ನೀಡಿದ್ದಾರೆ.

ರಾಮಾಯಣದಲ್ಲಿ ಮಹತ್ವದ ಸ್ಥಾನ ಪಡೆದಿರುವ ಈ ದೇವಸ್ಥಾನವು ಸೀತಾ ಮಾತೆಯನ್ನು ರಾವಣ ಅಪಹರಿಸುವಾಗ ಜಟಾಯು ಇದೇ ಜಾಗದಲ್ಲಿ ಆತನನ್ನು ಬೆನ್ನಟ್ಟಿ ಹೋರಾಟ ನಡೆಸಿತ್ತು.

ಬಳಿಕ ರಾವಣನ ದಾಳಿಯಿಂದ ನೆಲಕ್ಕೆ ಬಿದ್ದು ಸಾಯುವ ಸ್ಥಿತಿಯಲ್ಲಿರು ಸೀತಾ ದೇವಿಯನ್ನು ರಾವಣ ಅಪಹರಿಸಿದ ವಿಚಾರವನ್ನು ಶ್ರೀರಾಮನಿಗೆ ತಿಳಿಸಿ ಪ್ರಾಣ ಬಿಟ್ಟಿತ್ತು. ಬಳಿಕ ರಾಮ ಜಟಾಯುವಿನ ಅಂತ್ಯಕ್ರಿಯೆ ನಡೆಸಿ ಮೋಕ್ಷ ಕಲ್ಪಿಸಿದ್ದ ಎಂಬ ಪ್ರತೀತಿ ಇದೆ.

ಇನ್ನೂ ಬುಧವಾರ, ಮೋದಿಯವರು ಕೇರಳದ ಗುರುವಾಯೂರು ಮತ್ತು ತ್ರಿಪ್ರಯಾರ್ನ ಶ್ರೀ ರಾಮಸ್ವಾಮಿ ದೇವಾಲಯಗಳಲ್ಲಿ ಪ್ರಾರ್ಥನೆ ಸಲ್ಲಿಸಲಿದ್ದಾರೆ ಎಂದು ಪ್ರಧಾನ ಮಂತ್ರಿ ಕಚೇರಿ ತಿಳಿಸಿದೆ.

## ಕೊರೊನಾ ಲಸಿಕೆ '1.4 ಮಿಲಿಯನ್'ಗಿಂತಲೂ ಹೆಚ್ಚು ಜನರ ಜೀವ ಉಳಿಸಿದೆ



**ನವದೆಹಲಿ:** ಯುರೋಪ್'ನಲ್ಲಿ ಕೋವಿಡ್ ಲಸಿಕೆಗಳಿಂದಾಗಿ, ಸುಮಾರು 1.4 ಮಿಲಿಯನ್ ಜೀವಗಳನ್ನ ಉಳಿಸಲಾಗಿದೆ ಎಂದು ವಿಶ್ವ ಆರೋಗ್ಯ ಸಂಸ್ಥೆ ತಿಳಿಸಿದೆ. WHOಕಳೆದ ಮಂಗಳವಾರ ಇದನ್ನ ಉಲ್ಲೇಖಿಸಿದ್ದು, ವೈರಸ್ "here to stay" ನೆನಪಿಸುತ್ತದೆ. ಮಧ್ಯ ಏಷ್ಯಾ ಸೇರಿದಂತೆ 53 ದೇಶಗಳನ್ನ ಒಳಗೊಂಡಿರುವ WHO ಯುರೋಪಿಯನ್ ಪ್ರದೇಶವು 277.7 ದಶಲಕ್ಷಕ್ಕೂ ಹೆಚ್ಚು ಕೋವಿಡ್ –19 ಪ್ರಕರಣಗಳು ಮತ್ತು 2.2 ದಶಲಕ್ಷಕ್ಕೂ ಹೆಚ್ಚು ಸಾವುಗಳನ್ನ ದಾಖಲಿಸಿದೆ ಎಂದು 2023ರ ಡಿಸೆಂಬರ್ 19 ರಿಂದ ಬಿಡುಗಡೆಯಾದ ಇತ್ತೀಚಿನ ಅಂಕಿ ಅಂಶಗಳು ತಿಳಿಸಿವೆ. ನಮ್ಮ ಪ್ರದೇಶದಲ್ಲಿ 1.4 ಮಿಲಿಯನ್ ಜನರಿದ್ದಾರೆ. ಅವರಲ್ಲಿ ಹೆಚ್ಚಿನವರು ವಯಸ್ಸಾದವರು ಅವರು ತಮ್ಮ ಪ್ರೀತಿಪಾತ್ರರೊಂದಿಗೆ ಜೀವನವನ್ನ ಆನಂದಿಸುತ್ತಿದ್ದಾರೆ. ಯಾಕಂದ್ರೆ, ಅವರು ಕೋವಿಡ್ –19 ವಿರುದ್ಧ ಲಸಿಕೆ ಪಡೆಯುವ ಪ್ರಮುಖ ನಿರ್ಧಾರವನ್ನ ತೆಗೆದುಕೊಂಡಿದ್ದಾರೆ ಎಂದು ಡಬ್ಲ್ಯುಎಚ್ಒ ಯುರೋಪಿನ ಪ್ರಾದೇಶಿಕ ನಿರ್ದೇಶಕ ಹ್ಯಾನ್ಸ್ ಕ್ಲೂಜ್ ಹೇಳಿದರು. ಮೊದಲ ಬೂಸ್ಟರ್ ಡೋಸ್ ಮಾತ್ರ ಅಂದಾಜು 700,000 ಜೀವಗಳನ್ನ ಉಳಿಸಿದೆ ಎಂದರು.

# ಆಹ್ವಾನ ಬಂದಿಲ್ಲ, ಬಂದರೂ ಹೋಗಲ್ಲ: ಕೇಜ್ರಿವಾಲ್

**ನವದೆಹಲಿ:** ಅಯೋಧ್ಯೆಯ ರಾಮಮಂದಿರದಲ್ಲಿ ಜನವರಿ 22 ರಂದು ನಡೆಯುವ ರಾಮಲಲ್ಲಾನ ಪ್ರಾಣ ಪ್ರತಿಷ್ಠಾ ಸಮಾರಂಭಕ್ಕೆ ತಮಗೆ ಈವರೆಗೆ ಅಧಿಕೃತ ಆಹ್ವಾನ ಬಂದಿಲ್ಲ ಎಂದು ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಹೇಳಿದ್ದಾರೆ. ಈ ಕುರಿತು ಪ್ರತಿಕ್ರಿಯಿಸಿರುವ ಅವರು, ರಾಮಮಂದಿರ ತೀರ್ಥ ಕ್ಷೇತ್ರ ಟ್ರಸ್ಟ್ ನವರು ಆಹ್ವಾನ ಕೊಟ್ಟರೂ ನಾನು ಜನವರಿ 22 ರಂದು ಪ್ರಾಣ ಪ್ರತಿಷ್ಠಾ ಕಾರ್ಯಕ್ರಮದಲ್ಲಿ ಭಾಗವಹಿಸಲು ಸಾಧ್ಯವಾಗುವುದಿಲ್ಲ. ರಾಮಮಂದಿರ ಉದ್ಘಾಟನೆ ಆದ ಬಳಿಕ ನಾನು ಕುಟುಂಬಸ್ಥರೊಂದಿಗೆ ಅಯೋಧ್ಯೆಗೆ ಭೇಟಿ ನೀಡಿ, ಶ್ರೀರಾಮನ ದರ್ಶನ ಮಾಡುತ್ತೇನೆ ಎಂದು ಸ್ಪಷ್ಟಪಡಿಸಿದ್ದಾರೆ. ಈ ನಡುವೆ, ತಮಗೆ ರಾಮಮಂದಿರ ಉದ್ಘಾಟನೆ ಕಾರ್ಯಕ್ರಮದ ಆಹ್ವಾನ ಪತ್ರಿಕೆ ಬಂದಿದೆ. ಆದರೆ, ಇದನ್ನು ಬಿಜೆಪಿ ಮತ್ತು ಆರ್‌ಎಸ್‌ಎಸ್ ಕೇಂದ್ರಿತ, ರಾಜಕೀಯ ಕಾರ್ಯಕ್ರಮವನ್ನಾಗಿ ರೂಪಿಸಲಾಗಿದೆ. ಹಾಗಾಗಿ, ತಾವು ರಾಮಮಂದಿರ ಉದ್ಘಾಟನಾ ಕಾರ್ಯಕ್ರಮಕ್ಕೆ ಹೋಗುವುದಿಲ್ಲ ಎಂದು ಬಿಹಾರದ ಮಾಜಿ ಮುಖ್ಯಮಂತ್ರಿ, ಆರ್‌ಜೆಡಿ ಮುಖ್ಯಸ್ಥ ಲಾಲೂ ಪ್ರಸಾದ್ ಯಾದವ್ ಮತ್ತು ಎನ್‌ಸಿಪಿ ಮುಖಂಡ ಶರದ್ ಪವಾರ್ ಸ್ಪಷ್ಟಪಡಿಸಿದ್ದಾರೆ.



# ಪಟಾಕಿ ಕಾರ್ಖಾನೆಯಲ್ಲಿ ಸ್ಫೋಟ; 18 ಸಾವು

**ಬ್ಯಾಂಕಾಕ್:** ಮಧ್ಯ ಥೈಲ್ಯಾಂಡ್ನ ಪಟಾಕಿ ತಯಾರಿಸುವ ಕಾರ್ಖಾನೆಯಲ್ಲಿ ಬುಧವಾರ ಸಂಭವಿಸಿದ ಸ್ಫೋಟದಲ್ಲಿ ಕನಿಷ್ಠ 18 ಮಂದಿ ಸಾವನ್ನಪ್ಪಿರುವುದಾಗಿ ರಕ್ಷಣಾ ತಂಡದ ಅಧಿಕಾರಿ ಹೇಳಿದ್ದಾರೆ.

ಸುಫಾನ್ ಬುರಿ ಪ್ರಾಂತದ ಸಲಾ ಖಾವೊ ನಗರದಲ್ಲಿರುವ ಪಟಾಕಿ ಕಾರ್ಖಾನೆಯಲ್ಲಿ ಮಧ್ಯಾಹ್ನ 3 ಗಂಟೆ ವೇಳೆ ಸ್ಫೋಟ ಸಂಭವಿಸಿದ್ದು 18 ಮಂದಿ ಮೃತಪಟ್ಟಿರುವುದು ಇದುವರೆಗೆ ದೃಢಪಟ್ಟಿದೆ. ಕೆಲವರು ಗಂಭೀರವಾಗಿ ಗಾಯಗೊಂಡಿದ್ದು ಮೃತರ ಸಂಖ್ಯೆ ಹೆಚ್ಚುವ ಸಾಧ್ಯತೆಯಿದೆ. ಅಗ್ನಿಶಾಮಕ ದಳದವರು ಇತರ ಕಟ್ಟಡ ಅಥವಾ ಮನೆಗಳಿಗೆ ಹರಡದಂತೆ ಬೆಂಕಿಯನ್ನು ನಿಯಂತ್ರಿಸಿದ್ದು ಸ್ಫೋಟಕ್ಕೆ ಕಾರಣ ಸ್ಪಷ್ಟವಾಗಿಲ್ಲ ಎಂದು ಪೊಲೀಸ್ ಮುಖ್ಯಸ್ಥ ಧೀರಪೊಜ್ ರವಂಗ್ಬಾನ್ರನ್ನು ಉಲ್ಲೇಖಿಸಿದ ಮಾಧ್ಯಮ ವರದಿ ಹೇಳಿದೆ.



# ಉಗ್ರರ ನೆಲೆ ಧ್ವಂಸ ಮಾಡಿದ ಇರಾನ್

**ಇಸ್ಲಮಾಬಾದ್:** ಎರಡು ಉಗ್ರ ಸಂಘಟನೆಗಳ ನೆಲೆಯನ್ನು ಗುರಿಯಾಗಿಸಿಕೊಂಡು ಇರಾನ್ ನಡೆಸಿರುವ ಕ್ಷಿಪಣಿ ದಾಳಿಯನ್ನು ಪಾಕಿಸ್ತಾನ ಖಂಡಿಸಿದೆ. ದಾಳಿಯ ಪರಿಣಾಮವನ್ನು ನೀವು ಮುಂದೆ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆಯನ್ನೂ ನೀಡಿದೆ. ಇರಾನ್ ತನ್ನ ವಾಯುಪ್ರದೇಶದ ಅಪ್ರಚೋದಿತ ಉಲ್ಲಂಘನೆ ಮತ್ತು ಪಾಕಿಸ್ತಾನದ ಭೂಪ್ರದೇಶದೊಳಗೆ ದಾಳಿ ನಡೆಸಿ ಇಬ್ಬರು ಮುಗ್ಧ ಮಕ್ಕಳ ಸಾವಿಗೆ ಮತ್ತು ಮೂವರು ಹುಡುಗಿಯರನ್ನು ಗಾಯಗೊಳಿಸಿರುವುದನ್ನು ಪಾಕಿಸ್ತಾನ ತೀವ್ರವಾಗಿ ಖಂಡಿಸುತ್ತದೆ.



ಈ ಉಲ್ಲಂಘನೆಯು ಸಂಪೂರ್ಣವಾಗಿ ಸ್ವೀಕಾರಾರ್ಹವಲ್ಲ ಮತ್ತು ಗಂಭೀರ ಪರಿಣಾಮಗಳನ್ನು ಉಂಟುಮಾಡಬಹುದು.

ಪಾಕಿಸ್ತಾನ ಮತ್ತು ಇರಾನ್ ನಡುವೆ ಹಲವು ಸಂವಹನ ಮಾರ್ಗಗಳಿದ್ದರೂ ಈ ಅಕ್ರಮ ನಡೆದಿರುವುದು ಇನ್ನಷ್ಟು ಕಳವಳಕಾರಿಯಾಗಿದೆ. ಪಾಕಿಸ್ತಾನದ ತೀವ್ರ ಪ್ರತಿಭಟನೆಯನ್ನು ಈಗಾಗಲೇ ಟೆಹ್ರಾನ್ನಲ್ಲಿರುವ ಇರಾನ್ ವಿದೇಶಾಂಗ ಸಚಿವಾಲಯದ ಸಂಬಂಧಿತ ಹಿರಿಯ ಅಧಿಕಾರಿಗೆ ಸಲ್ಲಿಸಲಾಗಿದೆ. ಹೆಚ್ಚುವರಿಯಾಗಿ, ಪಾಕಿಸ್ತಾನದ ಸಾರ್ವಭೌಮತ್ವದ ಈ ಸ್ಪಷ್ಟ ಉಲ್ಲಂಘನೆಯ ಬಗ್ಗೆ ನಮ್ಮ ತೀವ್ರ ಖಂಡನೆಯನ್ನು ತಿಳಿಸಲು ಇರಾನಿನ ಚಾರ್ಜ್ ಡಿ'ಅಫೇರ್ಸ್ ಅನ್ನು ವಿದೇಶಾಂಗ ವ್ಯವಹಾರಗಳ ಸಚಿವಾಲಯಕ್ಕೆ ಕರೆಯಲಾಗಿದೆ ಮತ್ತು ಪರಿಣಾಮಗಳ ಜವಾಬ್ದಾರಿಯು ಇರಾನ್ನ ಮೇಲಿರುತ್ತದೆ. ಭಯೋತ್ಪಾದನೆಯು ಎಲ್ಲಾ ದೇಶಗಳಿಗೆ ಸಾಮಾನ್ಯ ಬೆದರಿಕೆಯಾಗಿದೆ ಎಂದು ಪಾಕಿಸ್ತಾನ ಯಾವಾಗಲೂ ಹೇಳುತ್ತದೆ. ಇಂತಹ ಏಕಪಕ್ಷೀಯ ಕಾರ್ಯಗಳು ಉತ್ತಮ ನೆರೆಹೊರೆಯವರ ಸಂಬಂಧಗಳಿಗೆ ಸಹಕಾರಿಯಾಗುವುದಿಲ್ಲ, ಮತ್ತು ದ್ವಿಪಕ್ಷೀಯ ನಂಬಿಕೆ ಮತ್ತು ವಿಶ್ವಾಸವನ್ನು ಗಂಭೀರವಾಗಿ ದುರ್ಬಲಗೊಳಿಸಬಹುದು ಎಂದು ಪಾಕಿಸ್ತಾನ ಹೇಳಿದೆ.

# ವಿಶ್ವದ ಅತ್ಯುತ್ತಮ ಅಕ್ಕಿಗಳ ಪಟ್ಟಿಯಲ್ಲಿ ಬಾಸ್ಮತಿ ಅಕ್ಕಿಗೆ ಮೊದಲ ಸ್ಥಾನದಲ್ಲಿದೆ!

**ನವದೆಹಲಿ:** ವಿಶ್ವದ 6 ಅತ್ಯುತ್ತಮ ಅಕ್ಕಿಗಳ ಪಟ್ಟಿಯಲ್ಲಿ ಬಾಸ್ಮತಿ ಅಕ್ಕಿಗೆ ಮೊದಲ ಸ್ಥಾನ ಸಿಕ್ಕಿದೆ. ಸಾಂಪ್ರದಾಯಿಕ ಖಾದ್ಯಪದಾರ್ಥಗಳು, ಪಾಕ ವಿಧಾನಗಳು ಮತ್ತು ಸಂಶೋಧನೆಗಳ ವರದಿ ಕೊಡುವ 'ಟೇಸ್ಟ ಅಟ್ಲಾಸ್' ಸಂಸ್ಥೆಯು ಪಟ್ಟಿಯನ್ನು ತಯಾರಿಸಿದೆ. ಭಾರತದಲ್ಲಿ ಉತ್ಪಾದಿಸುವ ಬಾಸ್ಮತಿ ಅಕ್ಕಿಯು ಉತ್ತಮ ಗುಣಮಟ್ಟದ ಸುಗಂಧ ಭರಿತ ಅಕ್ಕಿಯಾಗಿದೆ, ಇದಕ್ಕೆ ವಿಶ್ವದಾದ್ಯಂತ ಹೆಚ್ಚಿನ ಬೇಡಿಕೆ ಇದೆ.ಈ ಪಟ್ಟಿಯಲ್ಲಿ ಇಟಲಿಯ 'ಅರಬೋರಿಯೋ' ಅಕ್ಕಿ ಎರಡನೇ ಸ್ಥಾನದಲ್ಲಿದ್ದು ಪೋರ್ಚುಗಲ್ನ 'ಕರಲಿನೋ' ಅಕ್ಕಿ ಮೂರನೆಯ ಸ್ಥಾನದಲ್ಲಿದೆ.

1. ಬಾಸ್ಮತಿ ಅಕ್ಕಿಯ ಬಗ್ಗೆ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ 'ಟೇಸ್ಟ್ ಅಟ್ಲಾಸ್', 'ಬಾಸ್ಮತಿ' ಇದು ಮೂಲತಃ ಭಾರತ ಮತ್ತು ಪಾಕಿಸ್ತಾನದಲ್ಲಿ ಬೆಳಸಲಾದ ಉದ್ದ ಆಕಾರದ ಅಕ್ಕಿಯಾಗಿದೆ. ಈ ಅಕ್ಕಿಯ ವಿಶೇಷತೆ ಎಂದರೆ ಅದರ ರುಚಿ ಮತ್ತು ಪರಿಮಳವಾಗಿದೆ. ಈ ಅಕ್ಕಿ ತುಂಬಾ ಪೌಷ್ಟಿಕ ಮತ್ತು ರುಚಿಯಾಗಿದೆ ಬೇಯಿಸಿದಾಗ ಇದು ಬಿಡಿಬಿಡಿಯಾಗಿರುತ್ತದೆ.

2. ಅಕ್ಕಿ ರಫ್ತಿನಲ್ಲಿ ಭಾರತವು ಜಾಗತಿಕವಾಗಿ ಮೊದಲ ಸ್ಥಾನದಲ್ಲಿದೆ. 2023–24ರ ಆರ್ಥಿಕ ವರ್ಷದಲ್ಲಿ ಭಾರತವು ದಾಖಲೆಯ 2.3 ಲಕ್ಷ ಟನ್ಗಳಷ್ಟು ಅಕ್ಕಿಯನ್ನು ರಫ್ತು ಮಾಡಿದೆ, ಇದು ವಿಶ್ವ ಮಾರುಕಟ್ಟೆಯಲ್ಲಿನ ಒಟ್ಟು ಅಕ್ಕಿಯ ಶೇಕಡಾ 40.8 ರಷ್ಟಿದೆ. ಭಾರತವು ವಿಶ್ವಕ್ಕೆ 65 ಪ್ರತಿಶತ ಬಾಸ್ಮತಿ ಅಕ್ಕಿಯನ್ನು ರಫ್ತು ಮಾಡುತ್ತದೆ, ಆದರೆ ಪಾಕಿಸ್ತಾನವು 35 ಪ್ರತಿಶತ ಬಾಸ್ಮತಿ ಅಕ್ಕಿಯನ್ನು ರಫ್ತು ಮಾಡುತ್ತದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಕಂಗುವ' ಹೊಸ ಪೋಸ್ಟರ್‌ನಲ್ಲಿ ಸೂರ್ಯ ಮತ್ತಷ್ಟು ಮಿಂಚು







ನಟ ಸೂರ್ಯ ನಟನೆಯ 'ಕಂಗುವ' ಸಿನಿಮಾದ ಹೊಸ ಪೋಸ್ಟರ್ ರಿಲೀಸ್ ಆಗಿದೆ. ಈ ಪೋಸ್ಟರ್ ನಲ್ಲಿ ಸೂರ್ಯ ಸಖತ್ ಮಿಂಚಿದ್ದಾರೆ. ಪೋಸ್ಟರ್ ಕಂಡು ಅಭಿಮಾನಿಗಳು ಫಿದಾ ಆಗಿದ್ದಾರೆ. ಜೊತೆಗೆ ಈ ಸಿನಿಮಾವನ್ನು ಬರೋಬ್ಬರಿ 38 ಭಾಷೆಗಳಲ್ಲಿ ರಿಲೀಸ್ ಮಾಡುವುದಾಗಿ ಚಿತ್ರತಂಡ ಘೋಷಣೆ ಮಾಡಿದೆ. ಜೊತೆಗೆ 3 ಡಿ ತಂತ್ರಜ್ಞಾನದಲ್ಲೂ ಈ ಸಿನಿಮಾವನ್ನು ನೋಡಬಹುದಾಗಿದೆ. ಈ ಸಿನಿಮಾದ ಶೂಟಿಂಗ್ ಇನ್ನೂ ಕಂಪ್ಲೀಟ್ ಆಗಿಲ್ಲ. ಆಗಲೇ ಭರ್ಜರಿ ವ್ಯಾಪಾರ ಕೂಡ ಆರಂಭಿಸಿದೆ. ಭಾರೀ ಮೊತ್ತಕ್ಕೆ ಓಟಿಟಿಗೆ ಸೇಲ್ ಆಗುವ ಮೂಲಕ ಸಂಭ್ರಮವನ್ನು ಇಮ್ಮಡಿಗೊಳಿಸಿದೆ.

ಮೂಲಗಳ ಪ್ರಕಾರ ಅಮೆಜಾನ್ ಪ್ರೈಮ್ ಸಂಸ್ಥೆಯು ಕಂಗುವ ಸಿನಿಮಾದ ಓಟಿಟಿ ಹಕ್ಕನ್ನು ಬರೋಬ್ಬರಿ 80 ಕೋಟಿಗೆ ಖರೀದಿ ಮಾಡಿದೆಯಂತೆ. ಇದು ಎಲ್ಲ ಭಾಷೆಯ ಹಕ್ಕುಗಳನ್ನೂ ಒಳಗೊಂಡಿದೆ ಎನ್ನಲಾಗುತ್ತಿದೆ. ಈ ಮಾಹಿತಿಯನ್ನು ಚಿತ್ರತಂಡವೇ ಬಹಿರಂಗ ಪಡಿಸಿದೆ ಎಂದು ಕೆಲ ಮಾಧ್ಯಮಗಳ ವರದಿ ಮಾಡಿವೆ.

ಸ್ಟುಡಿಯೋ ಗ್ರೀನ್ನಡಿ ಕೆ.ಇ. ಜ್ಞಾನ ವೇಲ್ ರಾಜ ನಿರ್ಮಿಸಿ, ಶಿವ ನಿರ್ದೇಶಿಸುತ್ತಿರುವ ಈ ಚಿತ್ರವು ಪ್ರಾರಂಭವಾದಾಗಿನಿಂದ ಅಭಿಮಾನಿಗಳ ವಲಯದಲ್ಲಿ ಸಾಕಷ್ಟು ಕುತೂಹಲ ಕೆರಳಿಸಿದೆ. ಬಹುಕೋಟಿ ವೆಚ್ಚದ ಈ ಚಿತ್ರದಲ್ಲಿ ಸೂರ್ಯಗೆ ನಾಯಕಿಯಾಗಿ ಬಾಲಿವುಡ್ ಬೆಡಗಿ ದಿಶಾ ಪಠಾಣಿ ಅಭಿನಯಿಸುತ್ತಿದ್ದು, ಯೋಗಿ ಬಾಬು ಮುಂತಾದವರು ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ.

'ಕಂಗುವ' ಚಿತ್ರವು ಹಲವು ಭಾಷೆಗಳಲ್ಲಿ ಏಕಕಾಲಕ್ಕೆ ಬಿಡುಗಡೆಯಾಗುತ್ತಿರುವುದರಿಂದ ಎಲ್ಲ ಭಾಷೆಗಳಿಗೂ ಕನೆಕ್ಟ್ ಆಗುವಂತಹ ಶೀರ್ಷಿಕೆಯೊಂದರ ಹುಡುಕಾಟದಲ್ಲಿ ಚಿತ್ರತಂಡ ಇತ್ತು. ಆ ಶೀರ್ಷಿಕೆ ಕೊನೆಗೂ ಸಿಕ್ಕಿದ್ದು, 'ಕಂಗುವ' ಎಂದರೆ, ಬೆಂಕಿಯ ಶಕ್ತಿಯುಳ್ಳವನು ಎಂದರ್ಥ. ಇಲ್ಲಿ ನಾಯಕ ಒಬ್ಬ ಸೂಪರ್ ಹೀರೋ ಆಗಿದ್ದು, ಹಲವು ಅವತಾರಗಳಲ್ಲಿ ಕಾಣಿಸಿಕೊಳ್ಳುತ್ತಾನೆ.

ವೆಟ್ರಿ ಪಳನಿಸಾಮಿ ಅವರ ಛಾಯಾಗ್ರಹಣ ಮತ್ತು ದೇವಿ ಶ್ರೀಪ್ರಸಾದ್ ಅವರ ಸಂಗೀತವಿರುವ ಈ ಚಿತ್ರವು ದೊಡ್ಡ ಬಜೆಟ್ ನಲ್ಲಿ ನಿರ್ಮಾಣವಾಗುತ್ತಿದ್ದು, ವಿ ಎಫ್ ಎಕ್ಸ್ ಗೆ ಸಾಕಷ್ಟು ಹಣ ಖರ್ಚಾಗಲಿದೆ. ಚಿತ್ರದ ಪೋಸ್ಟ್ ಪ್ರೊಡಕ್ಷನ್ ಕೆಲಸಗಳಿಗೆ ಸಾಕಷ್ಟು ಸಮಯ ಬೇಕಾಗಿದ್ದು, ಚಿತ್ರವು 2024ರಲ್ಲಿ ಬಿಡುಗಡೆಯಾಗಲಿದೆ. ಈಗಾಗಲೇ ಗೋವಾ, ಚೆನ್ನೈ ಮುಂತಾದ ಕಡೆ ಚಿತ್ರೀಕರಣ ಮುಗಿದಿದ್ದು, ಬಾಕಿ ಇರುವ ಚಿತ್ರೀಕರಣವನ್ನು ಬೇಗ ಮುಗಿಸಿ, ಚಿತ್ರದ ಬಿಡುಗಡೆ ದಿನಾಂಕವನ್ನು ಘೋಷಿಸುವುದಕ್ಕೆ ಚಿತ್ರತಂಡ ತಯಾರಿ ಮಾಡಿಕೊಳ್ಳುತ್ತಿದೆ.

# ಪ್ರಭಾಸ್ ಅಭಿಮಾನಿಗಳಿಗೆ ಗುಡ್ ನ್ಯೂಸ್ ಓಟಿಟಿಯಲ್ಲಿ ಸಲಾರ್



ಹಲವಾರು ಕಡೆ ಸಲಾರ್ ಸಿನಿಮಾ ಥಿಯೇಟರ್ ನಲ್ಲಿ ಪ್ರದರ್ಶನ ಕಾಣುತ್ತಿದೆ. ಈ ನಡುವೆ ಪ್ರಭಾಸ್ ಅಭಿಮಾನಿಗಳಿಗೆ ಸಿಹಿ ಸುದ್ದಿಯೊಂದು ಬಂದಿದೆ. ನೆಟ್ ಫ್ಲಿಕ್ಸ್ ಸಲಾರ್ ಸಿನಿಮಾವನ್ನು ಖರೀದಿಸಿದ್ದು ಫೆಬ್ರವರಿ ಮೊದಲ ವಾರದಿಂದ ಸ್ಟ್ರೀಮಿಂಗ್ ಆರಂಭಿಸಲಿದೆ ಎಂದು ಹೇಳಲಾಗುತ್ತಿದೆ. ಅಧಿಕೃತವಾಗಿ ಸಂಸ್ಥೆ ಹೇಳಿಕೊಳ್ಳದೇ ಇದ್ದರೂ, ಫೆಬ್ರವರಿ ಗ್ಯಾರಂಟಿ ಎನ್ನುವ ಮಾಹಿತಿ ಹೊರ ಬಿದ್ದಿದೆ. ಇದರ ಜೊತೆ ಜೊತೆಗೆ ಸಲಾರ್ ಸಿನಿಮಾ ಸ್ಪ್ಯಾನಿಷ್ ಭಾಷೆಯಲ್ಲಿ ರಿಲೀಸ್ ಆಗಲಿದೆ. ಈಗಾಗಲೇ ಸ್ಪ್ಯಾನಿಷ್ ಭಾಷೆಗೆ ಚಿತ್ರವನ್ನು ಡಬ್ ಮಾಡಲಾಗುತ್ತಿದ್ದು, ಮಾರ್ಚ್ 7 ರಂದು ಈ ಚಿತ್ರವನ್ನು ರಿಲೀಸ್ ಮಾಡುವುದಾಗಿ ಸಂಸ್ಥೆ ತಿಳಿಸಿದೆ.

ಸಲಾರ್ ಸಿನಿಮಾ ಬಾಕ್ಸಾಫೀಸಿನಲ್ಲಿ ಈವರೆಗೂ 627 ಕೋಟಿ ರೂಪಾಯಿಗೂ ಅಧಿಕ ಗಳಿಸಿ, ಇನ್ನೂ ಮುನ್ನುಗ್ಗುತ್ತಿದೆ. ಈ ನಡುವೆ ಸಲಾರ್ 2 ಸಿನಿಮಾದ ಬಗ್ಗೆ ಒಂದಷ್ಟು ಮಾಹಿತಿಗಳು ಹೊರ ಬಿದ್ದಿವೆ. ಆಂಗ್ಲ ವೆಬ್ ಸೈಟ್ ಜೊತೆ ನಿರ್ಮಾಪಕ ವಿಜಯ ಕಿರಗಂದೂರು ಕೆಲ ಮಾಹಿತಿಗಳನ್ನು ಹಂಚಿಕೊಂಡಿದ್ದು, ಅದರ ಪ್ರಕಾರ ಸಲಾರ್ 2 ಸಿನಿಮಾ 2025ರಲ್ಲಿ ಬಿಡುಗಡೆ ಆಗಿದೆ. ಇನ್ನೂ ಅಚ್ಚರಿಯ ಸಂಗತಿ ಅಂದರೆ, ಈಗಾಗಲೇ ಸಲಾರ್ 2 ಸಿನಿಮಾದ ಸ್ಕ್ರಿಪ್ಟ್ ರೆಡಿಯಾಗಿದ್ದು, ಇನ್ನೂ ಕೆಲವೇ ದಿನಗಳಲ್ಲಿ ಸಲಾರ್ 2 ಸಿನಿಮಾದ ಕುರಿತಂತೆ ನಿರ್ದೇಶಕ ಪ್ರಶಾಂತ್ ನೀಲ್ ಕೆಲಸ ಕೂಡ ಶುರು ಮಾಡಲಿದ್ದಾರಂತೆ. ಸಲಾರ್ ಸಿನಿಮಾಗಿಂತಲೂ ಸಲಾರ್ 2 ಇನ್ನೂ ಅದ್ಧೂರಿಯಾಗಿ ಇರಲಿದೆ ಎಂದು ವಿಜಯ್ ತಿಳಿಸಿದ್ದಾರೆ. ಹೊಂಬಾಳೆ ಫಿಲ್ಮ್ಸ್ ನಿರ್ಮಾಣದ ಸಲಾರ್ ಸಿನಿಮಾ ತನ್ನ ಗೆಲುವಿನ ನಾಗಾಲೋಟವನ್ನು ಮುಂದುವರೆಸಿದೆ. ಈ ಸಿನಿಮಾ ಬಿಡುಗಡೆಯಾದ ಕೆಲವೇ ದಿನಗಳಲ್ಲಿ ವಿಶ್ವದಾದ್ಯಂತ ಕೋಟಿ ಕೋಟಿ ಹಣವನ್ನು ಗಳಿಸಿದೆ. ಬಾಕ್ಸ್ ಆಫೀಸಿಗೆ ಕೋಟಿ ಕೋಟಿ ಹಣ ಹರಿದು ಬರುತ್ತಿದೆ. ಈ ಮೂಲಕ ಭಾರತೀಯ ಚಿತ್ರರಂಗದಲ್ಲಿ, ಮೊದಲ ದಿನ ಅತೀ ಹೆಚ್ಚು ಗಳಿಕೆ ಮಾಡಿದ ಚಿತ್ರ ಎಂಬ ಹೊಸ ದಾಖಲೆಯನ್ನು ಮಾಡಿದೆ. ಕನ್ನಡದ ನಿರ್ಮಾಣದ ಸಂಸ್ಥೆಯೊಂದು ರಾಷ್ಟ್ರೀಯ ಮಟ್ಟದಲ್ಲಿ ಇಂಥದ್ದೊಂದು ದಾಖಲೆ ಮಾಡಿರುವುದು ಕನ್ನಡ ಚಿತ್ರರಂಗಕ್ಕೆ ಮತ್ತು ಕನ್ನಡಿಗರಿಗೆ ಹೆಮ್ಮೆಯ ವಿಷಯವಾಗಿದೆ.

# ವಿಕ್ರಮ್ ನಟನೆಯ 'ತಂಗಲಾನ್' ಚಿತ್ರದ ರಿಲೀಸ್ ಡೇಟ್ ಫಿಕ್ಸ್



ಫಸ್ಟ್ ಲುಕ್ ನಿಂದಾಗಿ ಸಖತ್ ಕ್ಯೂರಿಯಾಸಿಟಿ ಕ್ರಿಯೇಟ್ ಮಾಡಿರುವ ತಂಗಲಾನ್ ಸಿನಿಮಾದ ಬಿಡುಗಡೆ ದಿನಾಂಕ ಘೋಷಣೆಯಾಗಿದೆ. ಇದೇ ಏಪ್ರಿಲ್ ನಲ್ಲಿ ತಮ್ಮ ಚಿತ್ರವನ್ನು ವಿಶ್ವದಾದ್ಯಂತ ಬಿಡುಗಡೆ ಮಾಡುವುದಾಗಿ ಚಿತ್ರತಂಡ ಹೇಳಿಕೊಂಡಿದೆ. ಚಿಯಾನ್ ವಿಕ್ರಮ್ ಹಾಗೂ ಪ.ರಂಜಿತ್ ಕಾಂಬಿನೇಷನ್ ಚಿತ್ರವಿದು.

ರಜನಿಕಾಂತ್ ಅಭಿನಯದ ಕಬಾಲಿ, ಕಾಲ ಮುಂತಾದ ಚಿತ್ರಗಳನ್ನು ನಿರ್ದೇಶಿಸಿದ್ದ ಪ. ರಂಜಿತ್ ಈ ಬಾರಿ ಕೋಲಾರ ಗೋಲ್ಡ್ ಫೀಲ್ಡ್ ಹಿನ್ನೆಲೆಯ ಕಥೆಯನ್ನು ಈ ಚಿತ್ರಕ್ಕಾಗಿ ಆಯ್ಕೆ ಮಾಡಿಕೊಂಡಿದ್ದಾರೆ.

ಈ ಚಿತ್ರದಲ್ಲಿ ವಿಕ್ರಮ್ ಜೊತೆಗೆ ಪಾರ್ವತಿ, ಮಾಳವಿಕಾ ಮೋಹನನ್, ಪಶುಪತಿ, ಹರಿಕೃಷ್ಣನ್, ಅನ್ಬುದುರೈ ಮುಂತಾದ ಪ್ರತಿಭಾವಂತ ಕಲಾವಿದರ ದಂಡೇ ಇದೆ. ಈ ಚಿತ್ರಕ್ಕೆ ಎ. ಕಿಶೋರ್ ಛಾಯಾಗ್ರಹಣ ಮಾಡುತ್ತಿದ್ದು, ಜಿ.ವಿ. ಪ್ರಕಾಶ್ ಕುಮಾರ್ ಸಂಗೀತ ಸಂಯೋಜಿಸುತ್ತಿದ್ದಾರೆ. ಪ. ರಂಜಿತ್ ಅವರೇ ಈ ಚಿತ್ರಕ್ಕೆ ಕಥೆ-ಚಿತ್ರಕಥೆ ಬರೆದಿದ್ದು ಅವರಿಗೆ ಬರವಣಿಗೆಯಲ್ಲಿ ತಮಿಳ್ ಪ್ರಭಾ ಸಹಾಯ ಮಾಡಿದ್ದಾರೆ. ಎಸ್.ಎಸ್. ಮೂರ್ತಿ ಕಲಾನಿರ್ದೇಶನ ಮತ್ತು ಆರ್.ಕೆ. ಸೆಲ್ವಾ ಅವರ ಸಂಕಲನವಿದೆ.

ಕೆಜಿಎಫ್ ಹಿನ್ನೆಲೆಯಲ್ಲಿ ಸಾಗುವ ಈ ಆಕ್ಷನ್ ಚಿತ್ರವನ್ನು ಸ್ಟುಡಿಯೋ ಗ್ರೀನ್ ಸಂಸ್ಥೆಯಡಿ ಕೆ.ಇ. ಜ್ಞಾನವೇಲ್ ರಾಜ ನಿರ್ಮಿಸುತ್ತಿದ್ದಾರೆ. ದೊಡ್ಡ ಬಜೆಟ್‌ನಲ್ಲಿ ಈ ಚಿತ್ರ ತಯಾರಾಗುತ್ತಿದ್ದು, ನಿರ್ಮಾಣದಲ್ಲಿ ಪ. ರಂಜಿತ್ ಅವರ ನೀಲಂ ಪ್ರೊಡಕ್ಷನ್ಸ್ ಸಹ ಕೈಜೋಡಿಸಿದೆ.

# ಶಿವರಾತ್ರಿಗೆ ಶಿವಣ್ಣ ನಟನೆಯ ಹೊಸ ಚಿತ್ರದ ಟೈಟಲ್ ಅನಾವರಣ



ದಿನಕರ್ ತೂಗುದೀಪ ಅವರ ನಿರ್ದೇಶನದಲ್ಲಿ ಕರುನಾಡ ಚಕ್ರವರ್ತಿ ಶಿವರಾಜಕುಮಾರ್ ನಾಯಕರಾಗಿ ನಟಿಸಲಿರುವ ನೂತನ ಚಿತ್ರ ಹೊಸವರ್ಷಕ್ಕೆ ಘೋಷಣೆಯಾಗಿತ್ತು. ಸದ್ಯ ಪ್ರೀ ಪ್ರೊಡಕ್ಷನ್ ಕೆಲಸ ಬಿರುಸಿನಿಂದ ಸಾಗಿದೆ. ವರ್ಷದ ಮೊದಲ ಹಬ್ಬ ಮಕರ ಸಂಕ್ರಾಂತಿಗೆ ಈ ನೂತನ ಚಿತ್ರದ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಚಿತ್ರತಂಡ ರಾಜ್ಯದ ಜನತೆಗೆ ಸಂಕ್ರಾಂತಿ ಶುಭಾಶಯ ತಿಳಿಸಿದೆ. ಬಿಂದ್ಯಾ ಮೂವೀಸ್ ಲಾಂಛನದಲ್ಲಿ ಆರ್ ಕೇಶವ್ ಹಾಗೂ ಬಿ.ಎಸ್ ಸುಧೀಂದ್ರ, ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಪ್ರಿಯದರ್ಶಿನಿ ರಾಮರೆಡ್ಡಿ ಕಥೆ ಬರೆದಿದ್ದಾರೆ. ಮಹಾ ಶಿವರಾತ್ರಿ ಹಬ್ಬದ ವೇಳೆಗೆ ಶೀರ್ಷಿಕೆ ಬಿಡುಗಡೆಯಾಗಲಿದೆ. ಕುತೂಹಲ ಮೂಡಿಸುವಂತಹ ಶೀರ್ಷಿಕೆಯನ್ನು ಆಯ್ಕೆ ಮಾಡಿಕೊಳ್ಳಲಾಗಿದೆಯಂತೆ.

ಸೆಂಚುರಿ ಸ್ಟಾರ್ ಶಿವರಾಜಕುಮಾರ್ ಹಾಗೂ ದಿನಕರ್ ತೂಗುದೀಪ ಅವರ ಕಾಂಬಿನೇಶನ್ ನಲ್ಲಿ ಮೂಡಿಬರಲಿರುವ ಈ ಚಿತ್ರದ ಕುರಿತು ಅಭಿಮಾನಿ ವಲಯದಲ್ಲಿ ಹಾಗೂ ಚಿತ್ರೋದ್ಯಮದಲ್ಲಿ ಸಾಕಷ್ಟು ನಿರೀಕ್ಷೆಯಿದೆ. ಯಾವ ರೀತಿಯ ಕಥೆಯನ್ನು ನಿರ್ದೇಶಕರು ಹೇಳಬಹುದು ಎನ್ನುವ ಕುತೂಹಲವೂ ಇದೆ.

## ಟಿ20 ರ್‍ಯಾಂಕಿಂಗ್‌ನಲ್ಲಿ ಟಾಪ್ 10 ರೊಳಗೆ ಸ್ಥಾನ ಪಡೆದ

# ಭಾರತದ ಮೂವರು ಬ್ಯಾಟರ್ಸ್..!



ಅಂತಾರಾಷ್ಟ್ರೀಯ ಟಿ20 ಬ್ಯಾಟರ್‌ಗಳ ಶ್ರೇಯಾಂಕವನ್ನು ಐಸಿಸಿ ಇಂದು ಬಿಡುಗಡೆ ಮಾಡಿದೆ. ಅದರಂತೆ ಭಾರತದ ಸೂರ್ಯಕುಮಾರ್ ಯಾದವ್ ನಂಬರ್ ಒನ್ ಸ್ಥಾನದಲ್ಲಿ ಮುಂದುವರಿದರೆ, ಪಾಕಿಸ್ತಾನದ ಮೊಹಮ್ಮದ್ ರಿಜ್ವಾನ್ ಎರಡನೇ ಸ್ಥಾನವನ್ನು ಕಳೆದುಕೊಂಡಿದ್ದಾರೆ. ಏತನ್ಮಧ್ಯೆ, ಭಾರತ ತಂಡದ 3 ಬ್ಯಾಟ್ಸ್‌ಮನ್‌ಗಳು ಅಗ್ರ 10ರೊಳಗೆ ಸ್ಥಾನ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಐಸಿಸಿ ಬಿಡುಗಡೆ ಮಾಡಿರುವ ನೂತನ ಟಿ20 ಶ್ರೇಯಾಂಕದಲ್ಲಿ ಭಾರತದ ಸೂರ್ಯಕುಮಾರ್ ಯಾದವ್ 869 ರೇಟಿಂಗ್‌ನೊಂದಿಗೆ ಮೊದಲ ಸ್ಥಾನದಲ್ಲಿದ್ದಾರೆ. ಅವರು ಪ್ರಸ್ತುತ ಭಾರತ ಮತ್ತು ಅಫ್ಘಾನಿಸ್ತಾನ ನಡುವಿನ ಮೂರು ಪಂದ್ಯಗಳ ಟಿ20 ಸರಣಿಯನ್ನು ಆಡುತ್ತಿಲ್ಲ, ಆದರೂ ಅವರ ನಂಬರ್ ಒನ್ ಸ್ಥಾನಕ್ಕೆ ಯಾವುದೇ ಭಂಗ ಬಂದಿಲ್ಲ. 802 ರೇಟಿಂಗ್‌ನೊಂದಿಗೆ ಇಂಗ್ಲೆಂಡಿನ ಫಿಲ್ ಸಾಲ್ಟ್ ಎರಡನೇ ಸ್ಥಾನದಲ್ಲಿದ್ದರೆ, ಒಂದು ಕಾಲದಲ್ಲಿ ರಿಜ್ವಾನ್ ನಂಬರ್ ಒನ್ ಸ್ಥಾನವನ್ನು ಅಲಂಕರಿಸಿದ್ದ ಪಾಕಿಸ್ತಾನದ ಮೊಹಮ್ಮದ್ ರಿಜ್ವಾನ್ 775 ರೇಟಿಂಗ್‌ನೊಂದಿಗೆ ಮೂರನೇ ಸ್ಥಾನ ಸ್ಥಾನಕ್ಕೆ ಜಾರಿದ್ದಾರೆ.

ಏತನ್ಮಧ್ಯೆ, ಪಾಕಿಸ್ತಾನದ ಮಾಜಿ ನಾಯಕ ಬಾಬರ್ ಆಝಂ ಒಂದು ಸ್ಥಾನ ಜಿಗಿತದೊಂದಿಗೆ ನಾಲ್ಕನೇ ಸ್ಥಾನವನ್ನು ತಲುಪಿದ್ದಾರೆ. ನ್ಯೂಜಿಲೆಂಡ್ ವಿರುದ್ಧ ನಡೆಯುತ್ತಿರುವ ಐದು ಪಂದ್ಯಗಳ ಟಿ20 ಸರಣಿಯ ಮೊದಲ ಮೂರು ಪಂದ್ಯಗಳಲ್ಲಿ ಅವರು ಬ್ಯಾಕ್ ಟು ಬ್ಯಾಕ್ ಅರ್ಧಶತಕಗಳನ್ನು ಸಿಡಿಸಿದ್ದು 763 ರೇಟಿಂಗ್‌ನೊಂದಿಗೆ ನಾಲ್ಕನೇ ಸ್ಥಾನ ಪಡೆದಿದ್ದಾರೆ. ಹಾಗೆಯೇ ಒಂದು ಸ್ಥಾನ ಕಳೆದುಕೊಂಡಿರುವ ದಕ್ಷಿಣ ಆಫ್ರಿಕಾದ ಏಡೆನ್ ಮಾರ್ಕ್ರಾಮ್ 755 ರೇಟಿಂಗ್‌ನೊಂದಿಗೆ ಐದನೇ ಸ್ಥಾನ ಪಡೆದುಕೊಂಡಿದ್ದಾರೆ.

ಏತನ್ಮಧ್ಯೆ, ಭಾರತದ ಯುವ ಆರಂಭಿಕ ಬ್ಯಾಟ್ಸ್‌ಮನ್ ಯಶಸ್ವಿ ಜೈಸ್ವಾಲ್ ಅಫ್ಘಾನಿಸ್ತಾನ ವಿರುದ್ಧದ ಎರಡನೇ ಪಂದ್ಯದಲ್ಲಿ ಭರ್ಜರಿ ಶತಕ ಸಿಡಿಸಿದ್ದು, ಸತತ ಏಳು ಸ್ಥಾನ ಜಿಗಿತ ಕಂಡಿದ್ದಾರೆ. ಇದೀಗ ಜೈಸ್ವಾಲ್ 739 ರೇಟಿಂಗ್‌ನೊಂದಿಗೆ ಆರನೇ ಸ್ಥಾನಕ್ಕೆ ತಲುಪಿದ್ದಾರೆ.

ಯಶಸ್ವಿ ಜೈಸ್ವಾಲ್ ಮುಂದೆ ಬರುವುದರಿಂದ ಅನೇಕ ಬ್ಯಾಟ್ಸ್‌ಮನ್‌ಗಳ ಸ್ಥಾನ ಪಲ್ಲಟವಾಗಿದೆ. ಅದರಂತೆ ದಕ್ಷಿಣ ಆಫ್ರಿಕಾದ ರಿಲೆ ರೂಸೋ 689 ರೇಟಿಂಗ್‌ನೊಂದಿಗೆ ಒಂದು ಸ್ಥಾನ ಕುಸಿದು ಏಳನೇ ಸ್ಥಾನಕ್ಕೆ ತಲುಪಿದ್ದಾರೆ. ಇಂಗ್ಲೆಂಡ್‌ನ ಜೋಸ್ ಬಟ್ಲರ್ ಕೂಡ ಒಂದು ಸ್ಥಾನ ಕಳೆದುಕೊಂಡಿದ್ದು, 680 ರೇಟಿಂಗ್‌ನೊಂದಿಗೆ ಎಂಟನೇ ಸ್ಥಾನದಲ್ಲಿದ್ದಾರೆ.

ಭಾರತದ ರುತುರಾಜ್ ಗಾಯಕ್ವಾಡ್ ಕೂಡ ಒಂದು ಸ್ಥಾನವನ್ನು ಕಳೆದುಕೊಂಡಿದ್ದು, 661 ರೇಟಿಂಗ್‌ನೊಂದಿಗೆ ಎಂಟರಿಂದ ಒಂಬತ್ತನೇ ಸ್ಥಾನಕ್ಕೆ ಕುಸಿದಿದ್ದಾರೆ. ದಕ್ಷಿಣ ಆಫ್ರಿಕಾದ ರೀಜಾ ಹೆಂಡ್ರಿಕ್ಸ್ 660 ರೇಟಿಂಗ್‌ನೊಂದಿಗೆ ಹತ್ತನೇ ಸ್ಥಾನದಲ್ಲಿದ್ದಾರೆ. ಅಂದರೆ ಭಾರತದ ಒಟ್ಟು ಮೂವರು ಬ್ಯಾಟ್ಸ್‌ಮನ್‌ಗಳು ಈ ಶ್ರೇಯಾಂಕದಲ್ಲಿ ಅಗ್ರ 10 ರೊಳಗೆ ಸ್ಥಾನ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

## ಮೈಸೂರು ಸ್ಯಾಂಡಲ್ ನಕಲಿ ಸೋಪ್ ತಯಾರಿಕೆ

# ಇಬ್ಬರು ಆರೋಪಿಗಳು ಬಿಜೆಪಿ ನಾಯಕರು



**ಬೆಂಗಳೂರು:** ಹೈದರಾಬಾದ್‌ನಲ್ಲಿ ಮೈಸೂರು ಸ್ಯಾಂಡಲ್ ನಕಲಿ ಸೋಪ್ ತಯಾರಿಕೆ ಘಟಕ ಪತ್ತೆ ಪ್ರಕರಣಕ್ಕೆ ಸಂಬಂಧಿಸಿದ್ದಂತೆ ಇಬ್ಬರ ವಿರುದ್ಧ ಎಫ್ ಐಆರ್ ದಾಖಲಾಗಿದೆ. ಕಾರ್ಖಾನೆ ನಡೆಸುತ್ತಿದ್ದ ರಾಕೇಶ್ ಜೈನ್, ಮಹಾವೀರ್ ಜೈನ್ ಎಂಬುವವರ ಮೇಲೆ ಎಫ್‌ಐಆರ್ ದಾಖಲಾಗಿದೆ. ಆರೋಪಿತ ಜೈನ್ ಗಳಿಬ್ಬರೂ ಕೂಡ ಬಿಜೆಪಿಯ ಸಕ್ರಿಯ ನಾಯಕರು, ಕಾರ್ಯಕರ್ತರು. ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹಾಗೂ ಬಿಜೆಪಿಯ ರಾಜಾ ಸಿಂಗ್ ಜೊತೆಗೆ ನಿಕಟ ಸಂಪರ್ಕದಲ್ಲಿ ಇದ್ದಾರೆ ಎಂದು ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಆರೋಪ ಮಾಡಿದರು.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಚಿವ ಎಂಬಿ ಪಾಟೀಲ್ ಅವರಿಗೆ ಅನಾಮಿಕನೊಬ್ಬ ಕರೆ ಮಾಡುತ್ತಾನೆ. ಮೈಸೂರು ಸ್ಯಾಂಡಲ್ ನಕಲಿ ಸೋಪ್ ಮಾರಾಟದ ಬಗ್ಗೆ ಮಾಹಿತಿ ನೀಡುತ್ತಾನೆ. ಎಂ.ಬಿ ಪಾಟೀಲ್ ಅವರು ಇಲ್ಲಿನ ಮೈಸೂರು ಸ್ಯಾಂಡಲ್ ಸೋಪ್ ತಯಾರಿಕಾ ಘಟದ ವ್ಯವಸ್ಥಾಪಕ ನಿರ್ದೇಶಕರಿಗೆ ಮಾಹಿತಿ ನೀಡುತ್ತಾರೆ. ನಂತರ ನಮ್ಮ ಅಧಿಕಾರಿಗಳು ನಕಲಿ ಸೋಪ್ ತಯಾರಿಕೆ ಮತ್ತು ಮಾರಾಟ ಜಾಲ ಪತ್ತೆ ಹಚ್ಚಲು ಮುಂದಾದರು ಎಂದು ತಿಳಿಸಿದರು.

ಬಳಿಕ ನಮ್ಮ ಅಧಿಕಾರಿಗಳು ಹೈದರಾಬಾದ್‌ಗೆ ತೆರಳಿ 25 ಲಕ್ಷ ರೂ. ಆರ್ಡರ್ ಇದೆ ಅಂತ ಹೇಳುತ್ತಾರೆ. ಬಹಳ ದೊಡ್ಡ ಆರ್ಡರ್ ಇರುವುದರಿಂದ ಕಾರ್ಖಾನೆಗೆ ಬರುತ್ತೇವೆ ಎಂದು ನಮ್ಮ ಅಧಿಕಾರಿಗಳು ಹೇಳುತ್ತಾರೆ. ಬಹಳ ಸೂಕ್ಷ್ಮವಾಗಿ ಈ ಕಾರ್ಯಾಚರಣೆ ನಡೆಯುತ್ತದೆ. ನಕಲಿ ಎಂದು ಖಚಿತವಾದ ಮೇಲೆ, ನಮ್ಮ ಅಧಿಕಾರಿಗಳು ಕಾರ್ಖಾನೆ ಮೇಲೆ ದಾಳಿ ಮಾಡಿದ್ದಾರೆ. ಈ ವೇಳೆ ನಕಲಿ ಸೋಪ್ ಮತ್ತು ಕವರ್‌ಗಳು ಪತ್ತೆಯಾಗಿವೆ ಎಂದರು.

ಪ್ರಕರಣ ಸಂಬಂಧ ರಾಕೇಶ್ ಜೈನ್, ಮಹಾವೀರ್ ಜೈನ್ ಎಂಬುವವರ ಮೇಲೆ ಎಫ್‌ಐಆರ್ ದಾಖಲಾಗಿದೆ. ಚಿತ್ತಾಪುರದ ಬಿಜೆಪಿ ಮುಖಂಡ ಮಣಿಕಂಠ ರಾಥೋಡ್ ಹಾಗೂ ಮಾಜಿ ಶಾಸಕರ ಪುತ್ರನ ಜೊತೆ ಆರೋಪಿತರ ಸಂಪರ್ಕವಿದೆ. ಕಾರ್ಯಾಚರಣೆ ನಡೆದಿರುವುದು ರಾಜ್ಯದ ಆಸ್ತಿ ಉಳಿಸಿಕೊಳ್ಳುವುದಕ್ಕಾಗಿ. ಇದರಲ್ಲಿ ಬಿಜೆಪಿ ನಾಯಕರು ಶಾಮೀಲಾಗಿದ್ದಾರೆ. ಬಿಜೆಪಿಯವರು ದುಡ್ಡು ಮಾಡುವುದಕ್ಕೆ ಯಾವುದಕ್ಕೂ ಹೇಸುವುದಿಲ್ಲ ಎಂದು ವಾಗ್ದಾಳಿ ಮಾಡಿದರು.

ಬಿಜೆಪಿಯ ಎಂಎಲ್‌ಎಗಳ ಜೊತೆಗೆ ನಕಲಿ ಸೋಪ್ ತಯಾರಕ ಮಹಾವೀರ್ ಜೈನ್ ಇದ್ದಾನೆ. ಕನ್ನಡಿಗರು ಕಷ್ಟಪಟ್ಟು ಬೆವರು ಸುರಿಸಿ ಬಂಡವಾಳ ಹಾಕಿದ್ದನ್ನು ನಕಲಿ ಮಾಡಿ ಮಾರಾಟ ಮಾಡುತ್ತಿದ್ದಾರೆ. ಬಿಜೆಪಿಯ ಅಧಿಕೃತ ಪದಾಧಿಕಾರಿಗಳ ಜೊತೆಗೆ ಮಹಾವೀರ್ ಜೈನ್ ಇದ್ದಾನೆ. ಮಣಿಕಂಠ ರಾಥೋಡ್‌ಗೂ ನಕಲಿ ಸೋಪ್ ತಯಾರಿಕರಿಗೂ ಏನು ನಂಟು ಪ್ರಥ್ವಿಸಿಂಗ್ ಸಲುವಾಗಿ ಎರಡು ದಿನ ಕಲಾಪ ಹಾಳು ಮಾಡಿದರು. ಈ ಪ್ರಥ್ವಿ ಸಿಂಗ್ ಪೊಲೀಸ್ ವಿಚಾರಣೆಗೆ ಹಾಜರಾಗುತ್ತಿಲ್ಲ. ಯಾಕೆ ಇವರೆಲ್ಲ ಬಿಜೆಪಿಯವರೇ ಸಿಗುತ್ತಾರೆ ಎಂದು ಪ್ರಶ್ನಿಸಿದರು.

ಟಿಕೆಟ್ ಮಾರಾಟ ಮಾಡುತ್ತಿದ್ದಾರೆ ಎಂಬುದೆಲ್ಲ ಸತ್ಯ ಇರಬೇಕು. ರಾಜ್ಯದ ಆಸ್ತಿ ಮಾರಾಟ ಮಾಡುವವರುಗೆ ಬಿಜೆಪಿ ಟಿಕೆಟ್ ನೀಡುತ್ತದೆ. ಯಾದಗಿರಿಯಲ್ಲಿ 700 ಕ್ವಿಂಟಾಲ್ ಗರೀಬ್ ಕಲ್ಯಾಣ್ ಅಕ್ಕಿ ಬಿಜೆಪಿಯವರ ಗೋಡೌನ್‌ನಲ್ಲಿ ಸಿಕ್ಕಿದೆ. ಅಕ್ಕಿ ಕದ್ದವರನ್ನು ಪ್ರಧಾನಿ ಮೋದಿ ಪಕ್ಷದಲ್ಲಿ ಯಾಕೆ ಇಟ್ಕೊಂಡಿದ್ದೀರಿ ಇವರ ಮೇಲೆ ಯಾಕೆ ಕ್ರಮ ತೆಗೆದುಕೊಳ್ಳುತ್ತಿಲ್ಲ. ತೆಲಂಗಾಣ ಡಿಸಿಎಂ ಜೊತೆಗೆ ತನಿಖೆ ಮಾಡುವ ಬಗ್ಗೆ ಮಾತನಾಡಿದ್ದೇವೆ. ಆರೋಪಿತರ ತಪ್ಪಿಲ್ಲ ಅಂತ ಬಿಜೆಪಿಯವರು ಸಾಬೀತುಪಡಿಸಲಿ. ಎಂದು ಸವಾಲು ಎಸೆದರು.

ಬಿಜೆಪಿಯವರು ಯಾರೂ ರಾಮಾಯಣ ಓದಿಲ್ಲ. ಬಿಜೆಪಿಯವರಿಗೆ 4 ಸಾಲು ಹನುಮಾನ್ ಚಾಲೀಸಾ ಕೂಡ ಬರಲ್ಲ. ಬಿಜೆಪಿಯವರಿಗೆ ಪ್ರಾಣ ಪ್ರತಿಷ್ಠಾಪನೆಯ ಅರ್ಥವೇ ಗೊತ್ತಿಲ್ಲ. ಶಂಕರಾಚಾರ್ಯರ ಪೀಠದ ಶ್ರೀಗಳ ಪ್ರಶ್ನೆಗೆ ಉತ್ತರ ಕೊಡಲಿ ಸಾಕು. ಬಿಜೆಪಿ ನಾಯಕರಿಗೆ ಕಾಂಗ್ರೆಸ್‌ನವರು ಪ್ರಶ್ನೆ ಕೇಳುತ್ತಿಲ್ಲ. ಶಂಕರಾಚಾರ್ಯರು ಕೇಳಿದ ಪ್ರಶ್ನೆಗೆ ಬಿಜೆಪಿಯವರು ಉತ್ತರ ಕೊಡಲಿ ಎಂದರು.

## ಬೆಂಗಳೂರಲ್ಲಿ 2 ಸೂಪರ್ ಓವರ್ ಥ್ರಿಲ್ಲರ್

# ಟೀಂ ಇಂಡಿಯಾಗೆ ರೋಚಕ ಗೆಲುವು



**ಬೆಂಗಳೂರು:** ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕ್ರಿಕೆಟ್ ಅಭಿಮಾನಿಗಳಿಗೆ ಬುಧವಾರ ರಾತ್ರಿ ಹಬ್ಬವೋ ಹಬ್ಬ. ಎರಡು ಸೂಪರ್ ಓವರ್ ಗಳನ್ನು ಕಂಡ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಅಫ್ಘಾನಿಸ್ತಾನ ವಿರುದ್ಧದ 3ನೇ ಟಿ20 ಪಂದ್ಯದಲ್ಲಿ ಟೀಂ ಇಂಡಿಯಾ ಗೆಲುವು ಸಾಧಿಸಿ, ಸರಣಿಯನ್ನು 3-0 ಅಂತರದಲ್ಲಿ ಕ್ಲೀನ್ ಸ್ವೀಪ್ ಮಾಡಿಕೊಂಡಿತು.

ಭಾರತ ನೀಡಿದ 213 ರನ್‌ಗಳ ಟಾರ್ಗೆಟ್ ಬೆನ್ನತ್ತಿದ ಅಫ್ಘಾನಿಸ್ತಾನ ತಂಡ ನಿಗದಿತ 20 ಓವರ್ ಗಳಲ್ಲಿ 6 ವಿಕೆಟ್ ನಷ್ಟಕ್ಕೆ 212 ರನ್ ಗಳಿಸಿ ಮ್ಯಾಚ್ ಟೈ ಆಯ್ತು. ಇದರಿಂದಾಗಿ ಆಟ ಸೂಪರ್ ಓವರ್ ಹಂತಕ್ಕೆ ದಾಟಿತು.

ಮೊದಲ ಸೂಪರ್ ಓವರ್ ನಲ್ಲಿ ಮೊದಲು ಬ್ಯಾಟ್ ಮಾಡಿದ ಅಫ್ಘಾನಿಸ್ತಾನ 16 ರನ್ ಗಳಿಸಿದರೆ, ಟೀಂ ಇಂಡಿಯಾ ಕೂಡಾ 16 ರನ್ ಗಳಿಸಿ ಮ್ಯಾಚ್ ಟೈ ಆಯ್ತು. ಈ ಹಿನ್ನೆಲೆಯಲ್ಲಿ ಪಂದ್ಯ 2ನೇ ಸೂಪರ್ ಓವರ್ ಹಂತಕ್ಕೆ ದಾಟಿತು.

ಎರಡನೇ ಸೂಪರ್ ಓವರ್ ನಲ್ಲಿ ಟೀಂ ಇಂಡಿಯಾ 11 ರನ್ ಮಾತ್ರ ಗಳಿಸಿತು. ಇದಕ್ಕುತ್ತರವಾಗಿ ಬ್ಯಾಟ್ ಮಾಡಿದ ಅಫ್ಘಾನಿಸ್ತಾನ ತಂಡ 1 ರನ್ ಗಳಿಸಲು ಮಾತ್ರ ಸಾಧ್ಯವಾಯಿತು.

ಭಾರತ ನೀಡಿದ 213 ರನ್ ಟಾರ್ಗೆಟ್ ಬೆನ್ನತ್ತಿದ ಅಫ್ಘಾನಿಸ್ತಾನ ಆರಂಭಿಕ ಆಟಗಾರರು ಮೊದಲ ವಿಕೆಟ್‌ಗೆ 93 ರನ್ ಗಳ ಜೊತೆಯಾಟ ನೀಡಿದರು. ಆರಂಭಿಕ ಆಟಗಾರರಾದ ರಹ್ಮಾನುಲ್ಲಾ ಗುರ್ಬಾಝ್ ಹಾಗೂ ಇಬ್ರಾಹಿಂದ ಝುದ್ರಾನ್ ತಲಾ 50 ರನ್ ಗಳಿಸಿ ಔಟಾದರು. ಒಂದು ಹಂತದಲ್ಲಿ ಮೊಹಮ್ಮದ್ ನಬಿ 16 ಎಸೆತಗಳಲ್ಲಿ 34 ರನ್‌ಗಳ ಸ್ಫೋಟಕ ಆಟ ಆಡಿದರು. 3 ಸಿಕ್ಸರ್ ಹಾಗೂ 2 ಬೌಂಡರಿಯನ್ನೊಳಗೊಂಡ ನಬಿ ಇನ್ನಿಂಗ್ಸ್ ವಾಷಿಂಗ್ಟನ್ ಸುಂದರ್ ಬೌಲಿಂಗಲ್ಲಿ ಆವೇಶ್ ಖಾನ್ ಕ್ಯಾಚ್ ಹಿಡಿಯುವುದರೊಂದಿಗೆ ಅಂತ್ಯವಾಯಿತು. ಗುಲ್ಬದೀನ್ ನಯೀಬ್ ಅರ್ಧ ಶತಕ ಬಾರಿಸಿ ಪಂದ್ಯವನ್ನು ಟೈ ಮಾಡುವಲ್ಲಿ ಯಶಸ್ವಿಯಾದರು.

ಭಾರತದ ಪರವಾಗಿ ವಾಷಿಂಗ್ಟನ್ ಸುಂದರ್ 3 ವಿಕೆಟ್ ಗಳಿಸಿದರೆ, ಆವೇಶ್ ಖಾನ್ 1, ಕುಲದೀಪ್ ಯಾದವ್ 1 ವಿಕೆಟ್ ಗಳಿಸಿದರು.

ಅಫ್ಘಾನಿಸ್ತಾನ ಪರವಾಗಿ ಫರೀದ್ ಅಹ್ಮದ್ 3 ವಿಕೆಟ್ ಕಬಳಿಸಿ ಯಶಸ್ವಿ ಬೌಲರ್ ಎನಿಸಿದರು.

## ಶ್ರೀರಾಮನ ಶಕ್ತಿ, ಹನುಮನ ಭಕ್ತಿಯ ಕೆಣಕಿದ

# ರಾವಣನೇ ಉಳಿಯಲಿಲ್ಲ, ರಾಜಣ್ಣ ಯಾವ ಲೆಕ್ಕ



**ಬೆಂಗಳೂರು:** ಅಯೋಧ್ಯೆಯ ರಾಮಮಂದಿರದಲ್ಲಿ ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆಗೆ ದಿನಗಣನೆ ಆರಂಭವಾಗಿದೆ. ಅಯೋಧ್ಯೆಯಲ್ಲಿ ನಡೆಯುತ್ತಿರುವ ಈ ಕಾರ್ಯಕ್ರಮದ ಮೂಲಕ ಬಿಜೆಪಿಯವರು ರಾಜಕೀಯ ಲಾಭ ಪಡೆದುಕೊಳ್ಳುತ್ತಿದ್ದಾರೆ. ಹೀಗಾಗಿ ಬಿಜೆಪಿಯ ಕಾರ್ಯಕ್ರಮವಾಗಿದೆ. ಹೀಗಾಗಿ ನಾವು ಈ ಪ್ರಾಣಪ್ರತಿಷ್ಠಾಪನೆ ಕಾರ್ಯಕ್ರಮಕ್ಕೆ ಹೋಗುವುದಿಲ್ಲ ಎಂದು ಕಾಂಗ್ರೆಸ್ ನಾಯಕರು ಘೋಷಿಸಿದ್ದಾರೆ. ಇನ್ನು ಈ ಕಾರ್ಯಕ್ರಮವನ್ನು ವಿರೋಧಿಸುವ ಭರದಲ್ಲಿ ಕಾಂಗ್ರೆಸ್ ನಾಯಕರು ವಿವಾದತ್ಮಕ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಜನವರಿ 16 ರಂದು ಸಚಿವ ಕೆನ್ ರಾಜಣ್ಣ ವಿವಾದಾತ್ಮ ಹೇಳಿಕೆ ನೀಡಿದ್ದರು.

ಅದು 'ಬಾಬ್ರಿ ಮಸೀದಿ ಕೆಡವಿದ ನಂತರ ಅಯೋಧ್ಯೆಗೆ ಹೋಗಿದೆ. ಅಲ್ಲಿ ಗುಡಿಯೊಂದರಲ್ಲಿ ಎರಡು ಗೊಂಬೆಗಳನ್ನು ಇಟ್ಟು ರಾಮ ರಾಮ ಎನ್ನುತ್ತಿದ್ದರು' ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದರು. ಈ ವಿಚಾರಕ್ಕೆ ಸಂಬಂಧಿಸಿದಂತೆ ರಾಜ್ಯ ಬಿಜೆಪಿ ಘಟನೆ ಸರಣಿ ಟ್ವೀಟ್ ಮಾಡಿ ಸಚಿವರ ವಿರುದ್ಧ ವಾಗ್ದಾಳಿ ಮಾಡಿದೆ.

'ಶ್ರೀರಾಮನ ಶಕ್ತಿ, ಹನುಮನ ಭಕ್ತಿಯ ಕೆಣಕಿದ ರಾವಣನೇ ಉಳಿಯಲಿಲ್ಲ, ರಾಜಣ್ಣ ಯಾವ ಲೆಕ್ಕ ಹಿಂದೂ ಧರ್ಮವನ್ನು ಅವಹೇಳನ ಮಾಡುವುದು, ಹಿಂದೂ ಭಾವನೆಗಳಿಗೆ ಧಕ್ಕೆ ಉಂಟುಮಾಡುವುದು ಕಾಂಗ್ರೆಸ್ ಪಕ್ಷಕ್ಕೆ ಅಂಟಿದ ಕುಷ್ಠ ರೋಗವಿದ್ದಂತೆ' ಎಂದು ಬಿಜೆಪಿ ಹ್ಯಾಶ್‌ಟ್ಯಾಗ್ ರಾಮ ವಿರೋಧಿ ಕಾಂಗ್ರೆಸ್ ಅಂತ ಟ್ವೀಟ್ ಮಾಡಿದೆ.

ಮುಂದುವರೆದು 'ಶತ ಶತಮಾನಗಳ ಕೋಟ್ಯಂತರ ರಾಮಭಕ್ತರ ಹೋರಾಟ, ಸಹಸ್ರಾರು ಕರಸೇವಕರ ಬಲಿದಾನಗಳಿಂದ ಭವ್ಯ ರಾಮಮಂದಿರದಲ್ಲಿ ಬಾಲರಾಮ ನೆಲೆಸುತ್ತಿರುವ ಸಮಯದಲ್ಲಿ, ಶ್ರೀರಾಮ ಸೀತೆಯರನ್ನು ಗೊಂಬೆಗೆ ಹೋಲಿಸುತ್ತಿರುವ ಸಹಕಾರ ಸಚಿವ ರಾಜಣ್ಣರವರೇ, ನಾಡಿನ ಜನರಷ್ಟೇ ಅಲ್ಲ, ನಿಮ್ಮನ್ನು ಕಾಂಗ್ರೆಸ್ ಕಾರ್ಯಕರ್ತರೂ ಕ್ಷಮಿಸಲಾರರು. ಅಧಿಕಾರದ ಮದ, ಕಾಂಗ್ರೆಸ್ ಗುಲಾಮಿತನದಿಂದ ಹೊರಬಂದು, ನಿಮ್ಮ ಕ್ಷೇತ್ರದ ಮತದಾರರನ್ನಾದರೂ ಕೇಳಿ, ನಿಮ್ಮ ಕುಟುಂಬಸ್ಥರನ್ನಾದರೂ ಕೇಳಿ ತಿಳಿಯಿರಿ' ಎಂದು ಕಿವಿ ಹಿಂಡಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com